ಸಂಪುಟ: 04 ಸಂಚಿಕೆ: 227 ಪುಟಗಳು: 08 ಬುಧವಾರ 30 ಅಕ್ಟೋಬರ್ 2024
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**
ಪ್ರಯತ್ನ ಯಾವತ್ತೂ ವ್ಯರ್ಥವಾಗಲ್ಲ. ನಿಮ್ಮ ಕೆಲಸವನ್ನು ನೀವು ಪ್ರಾಮಾಣಿಕವಾಗಿ ಮಾಡಿ ಪ್ರತಿಫಲ ತಾನಾಗಿಯೇ ನಿಮ್ಮನ್ನು ಹುಡುಕಿಕೊಂಡು ಬರುತ್ತದೆ....

# ಉದಯ ವಾಹಿನಿ
UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಚನ್ನಪಟ್ಟಣ ಕ್ಷೇತ್ರದಲ್ಲಿ ಕುತಂತ್ರ ರಾಜಕಾರಣ ನಡೆಯುವುದಿಲ್ಲ: ನಿಖಿಲ್

• ಉದಯವಾಹಿನಿ, ರಾಮನಗರ

2019ರಲ್ಲಿ ಕುಮಾರಣ್ಣ ಅವರು ಮುಖ್ಯಮಂತ್ರಿ ಆಗಿದ್ರು.ಆಗ ಕುಮಾರಣ್ಣ ನಾನು ಅವಕಾಶ ಕೊಟ್ಟಿದ್ರು, ನಿಮಗೆ ಗೊತ್ತಿದೆ ಮಂಡ್ಯ ಮತ್ತು ತುಮಕೂರಲ್ಲಿ ಯಾವ ರೀತಿ ಜತೆಯಲ್ಲೇ ಇದ್ದು ನಮ್ಮ ಬೆನ್ನಿಗೆ ಚೂರಿ ಹಾಕಿದ್ದಾರೆ. ಚನ್ನಪಟ್ಟಣ ಕ್ಷೇತ್ರದಲ್ಲಿ ಕುತಂತ್ರ ರಾಜಕಾರಣ ನಡೆಯುವುದಿಲ್ಲ ಎಂದು ನಿಖಿಲ್ ಕುಮಾರಸ್ವಾಮಿ ಹೇಳಿದರು.

ಚನ್ನಪಟ್ಟಣ ವಿಧಾನಸಭೆ ಕ್ಷೇತ್ರದ ಎನ್ ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಅವರು ಕ್ಷೇತ್ರದಲ್ಲಿ ಮಂಗಳವಾರ ಕೋಡಂಬಳ್ಳಿ, ಜೆ ಬ್ಯಾಡರ ಹಳ್ಳಿ, ಹಾಗೂ ವೈ.ಟಿ ಹಳ್ಳಿ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಅಬ್ಬರದ ಪ್ರಚಾರ ನಡೆಸುವ ವೇಳೆ ಮಾತನಾಡಿದ ಅವರು ನಾನು ಚುನಾವಣೆಯಲ್ಲಿ ಸ್ಪರ್ಧೆ ಮಾಡ್ಬೇಕು ಎಂದು ಆಲೋಚನೆ ಮಾಡಿರಲಿಲ್ಲ. ಅದಿಕ್ಕೆ ಕಾರಣ ನೀವು ನಿಮ್ಮೆಲ್ಲರ ಆಶೀರ್ವಾದದಿಂದ ಕುಮಾರಣ್ಣ ಕೇಂದ್ರದಲ್ಲಿ ಸಚಿವರಾಗಿದ್ದಾರೆ. ನಾನು ಸ್ಪರ್ಧೆ ಮಾಡಿರೋದು ಅನಿರೀಕ್ಷಿತ ಬೆಳವಣಿಗೆ. ನಾನು ಚುನಾವಣೆಗೆ ನಿಲ್ಲಬೇಕೆಂದು ಆಲೋಚನೆ ಮಾಡಿರಲಿಲ್ಲ, ಪಕ್ಷದ ಸಂಘಟನೆ ದೃಷ್ಟಿಯಿಂದ ರಾಜ್ಯ 7 ಜಿಲ್ಲೆಗಳಿಗೂ ಪ್ರವಾಸ ಪ್ರಾರಂಭ ಮಾಡಿದ್ದೇನೆ ಎಂದರು.

## ರಾಜ್ಯದ ಕಲಾವಿದರ ಮಾಸಾಶನ ಮೊತ್ತ 3,000ಕ್ಕೆ ಹೆಚ್ಚಳ: ಸಚಿವ

• ಉದಯವಾಹಿನಿ, ಬೆಂಗಳೂರು

ಕಲಾವಿದರು ಮತ್ತು ಕಲೆಗಳಿಗೆ ರಾಜ್ಯ ಸರ್ಕಾರ ವಿಶೇಷ ಪ್ರೋತ್ಸಾಹ ನೀಡುತ್ತಿದ್ದು, ಮುಂದಿನ ವರ್ಷದಿಂದ ಕಲಾವಿದರ ಮಾಸಾಶನ ಮೊತ್ತವನ್ನು 3 ಸಾವಿರ ರೂ.ಗೆ ಹೆಚ್ಚಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಸಚಿವರಾದ ಶಿವರಾಜ್ ಎಸ್. ತಂಗಡಗಿ ತಿಳಿಸಿದ್ದಾರೆ.

ಇನ್ನೂ ಕಲಾವಿದರು ಮತ್ತು ಕಲೆಗಳಿಗೆ ಸರ್ಕಾರ ವಿಶೇಷ ಪ್ರೋತ್ಸಾಹ ನೀಡುತ್ತಿದ್ದು, ಮುಂದಿನ ವರ್ಷದಿಂದ ಕಲಾವಿದರಿಗೆ ನೀಡಲಾಗುವ ಮಾಶಾಸನದ ಮೊತ್ತವನ್ನ 3,000ಕ್ಕೆ ಹೆಚ್ಚಿಸಲಾಗುತ್ತದೆ. ಅಕಾಡೆಮಿ ಮತ್ತು ಪ್ರಾಧಿಕಾರಗಳಿಗೆ ಅನುದಾನ ನೀಡಲು ಯಾವುದೇ ಹಣಕಾಸಿನ ಕೊರತೆ ಇಲ್ಲ. ಪ್ರತಿಯೊಂದು ಅಕಾಡೆಮಿ ಮತ್ತು ಪ್ರಾಧಿಕಾರಗಳಿಗೂ ಚಟುವಟಿಕೆಗಳನ್ನು ನಡೆಸುವ ಸಲುವಾಗಿ ಒಂದು ಕೋಟಿಯವರೆಗೂ ಅನುದಾನವನ್ನು ಒದಗಿಸಲಾಗುತ್ತಿದೆ. ಕಾರ್ಯಕ್ರಮದ ಕುರಿತು ಪ್ರಸ್ತಾವನೆ ಸಲ್ಲಿಸಿದರೆ, ಅದಕ್ಕೆ ಬೇಕಾದ ಅಗತ್ಯದ ಅನುದಾನ ನೀಡಲಾಗುತ್ತಿದೆ. ಈ ಮೂಲಕ ಕಲೆ ಮತ್ತು ಕಲಾವಿದರನ್ನು ಪ್ರೋತ್ಸಾಹಿಸುವ ಕೆಲಸವನ್ನು ಸರ್ಕಾರ ಮಾಡುತ್ತಿದೆ ಎಂದು ಹೇಳಿದರು. ಇಂದಿನ ಸರ್ಕಾರದಲ್ಲಿ ಅಕಾಡೆಮಿಗಳು ಸಂಪೂರ್ಣ ನಿಷ್ಕ್ರಿಯವಾಗಿದ್ದವು.

ಆದರೆ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಕೂಡಲೇ 14 ಅಕಾಡೆಮಿ ಮತ್ತು 4 ಪ್ರಾಧಿಕಾರಗಳಿಗೆ ಅಧ್ಯಕ್ಷರನ್ನ ನೇಮಿಸುವ ಮೂಲಕ ಸಾಂಸ್ಕೃತಿಕ ಚಟುವಟಿಕೆಗಳಿಗೆ ಹೆಚ್ಚಿನ ವೇಗ ನೀಡಲಾಗಿದೆ ಎಂದರು.

## ಮೂರು ಕ್ಷೇತ್ರಗಳಲ್ಲೂ ಕಾಂಗ್ರೆಸ್ ಗೆಲ್ಲಲಿದೆ: ಸಚಿವ ಚೆಲುವರಾಯಸ್ವಾಮಿ

• ಉದಯವಾಹಿನಿ, ಹಾಸನ

ಚನ್ನಪಟ್ಟಣ ಉಪ ಚುನಾವಣೆ ದೀಪಾವಳಿ ನಂತರ ಚುರುಕುಗೊಳ್ಳಲಿದ್ದು, ಮೂರೂ ಕ್ಷೇತ್ರಗಳಲ್ಲೂ ಕಾಂಗ್ರೆಸ್ ಗೆಲುವು ಸಾಧಿಸಲಿದೆ ಎಂದು ಕೃಷಿ ಸಚಿವ ಚೆಲುವರಾಯಸ್ವಾಮಿ ವಿಶ್ವಾಸ ವ್ಯಕ್ತಪಡಿಸಿದರು.

ಹಾಸನಾಂಬೆ ದರ್ಶನ ಪಡೆದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ರಾಷ್ಟ್ರೀಯ ಅಧ್ಯಕ್ಷ ರಾಹುಲ್ ಗಾಂಧಿ,ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೇತೃತ್ವದಲ್ಲಿ ಚುನಾವಣೆಗಳನ್ನು ಎದುರಿಸುತ್ತಿದ್ದು, ಚನ್ನಪಟ್ಟಣ, ಶಿಗ್ಗಾಂವಿ, ಸಂಡೂರು ಮೂರೂ ಕ್ಷೇತ್ರಗಳನ್ನು ಪ್ರತಿಷ್ಠೆಯಾಗಿ ಪರಿಗಣಿಸಿದ್ದೇವೆ. ಸರ್ಕಾರದ ಜನಪರ ಯೋಜನೆಗಳು ಗೆಲುವಿಗೆ ಸಹಕಾರವಾಗಲಿದೆ ಎಂದರು. ಹಾಸನಾಂಬೆ ದೇವಿ ಶಕ್ತಿ ದೇವತೆಯಾಗಿದ್ದು, ಪ್ರತಿದಿನ ಲಕ್ಷಾಂತರ ಮಂದಿ ಬಂದು ದೇವಿಯ ದರ್ಶನ ಪಡೆಯುತ್ತಿದ್ದಾರೆ. ಹಳೆ ಮೈಸೂರು ಭಾಗದಲ್ಲಿ ಹಾಸನಾಂಬ ದೇವಾಲಯ ಪ್ರಸಿದ್ಧ ಕ್ಷೇತ್ರವಾಗಿ ಹೊರಹೊಮಿದೆ ಎಂದರು.

## ರಾಜ್ಯ ಸರ್ಕಾರದಿಂದ ನೂರು ಕೋಟಿ ಅನುದಾನ ಬಿಡುಗಡೆ ಹಸಿ ಸುಳ್ಳು

• ಉದಯವಾಹಿನಿ, ಹಾವೇರಿ

ರಾಜ್ಯ ಕಾಂಗ್ರೆಸ್ ಸರ್ಕಾರ ಶಿಗ್ಗಾವಿಗೆ ನೂರು ಕೋಟಿ ರೂ. ಹಣ ಬಿಡುಗಡೆ ಮಾಡಿದ್ದೇವೆ ಎಂದು ಹಸಿ ಸುಳ್ಳು ಹೇಳಿ ಜನರಿಗೆ ಮೋಸ ಮಾಡಿದೆ. ನೂರು ಕೋಟಿ ರೂ. ಬಿಡುಗಡೆ ಮಾಡಿರುವ ದಾಖಲೆ ಇದ್ದರೆ ತೋರಿಸಲಿ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ. ಬಿಜೆಪಿ ಅಭ್ಯರ್ಥಿ ಭರತ್ ಬೊಮ್ಮಾಯಿ ಪರ ಶಿಗ್ಗಾವಿ ತಾಲ್ಲೂಕಿನ ಹೋತನಹಳ್ಳಿ, ಚಂದಾಪುರ ಗ್ರಾಮಗಳಲ್ಲಿ ಚುನಾವಣಾ ಪ್ರಚಾರ ನಡೆಸಿ ಮಾತನಾಡಿದರು. ರಾಜ್ಯ ಕಾಂಗ್ರೆಸ್ ಸರ್ಕಾರ ಜನರ ಮೇಲೆ ದಬ್ಬಾಳಿಕೆ ಮಾಡುತ್ತಿದೆ. ಸಣ್ಣ ಪುಟ್ಟ ವಿಷಯಗಳಿಗೂ ಜನರ ಮೇಲೆ ಕೇಸ್ ಹಾಕಿ ಪೊಲೀಸ್ ಸ್ಟೇಷನ್ ಗೆ ಅಲೆದಾಡುವಂತೆ ಮಾಡುತ್ತಿದ್ದಾರೆ. ಪಿಎಸ್ ಐ ಗಳು ಕೊಬ್ಬಿದ್ದಾರೆ. ದಬ್ಬಾಳಿಕೆ ಮಾಡುವ ಸರ್ಕಾರದ ವಿರುದ್ಧ ಎಲ್ಲರೂ ನಿಲ್ಲಬೇಕು. ನಾನು ಸದಾ ನಿಮ್ಮ ಜೊತೆಗೆ ಇರುತ್ತೇನೆ. ನಿಮ್ಮ ಕೂದಲಿಗೆ ಕೊಂಕಾಗದ ಹಾಗೆ ನೋಡಿಕೊಳ್ಳುತ್ತೇನೆ ಎಂದು ಭರವಸೆ ನೀಡಿದರು.

# ವಕ್ಫ್ ಆಸ್ತಿ ವಿವಾದ

# ಷಡ್ಯಂತ್ರವೋ...? ಕುತಂತ್ರವೋ...?

**ರಾಜ್ಯದಲ್ಲಿ ಆತಂಕ ಸೃಷ್ಟಿ**




- ಜಿಲ್ಲಾಧಿಕಾರಿ ನೇತೃತ್ವದಲ್ಲಿ ಟಾಸ್ಕ್ ಪೋರ್ಸ್ ರಚನೆ, ಯಾವ ರೈತರನ್ನೂ ಒಕ್ಕಲೆಬ್ಬಿಸುವುದಿಲ್ಲ
- ಮುಸ್ಲಿಮರು ವಕ್ಫ್ ಆಸ್ತಿ ಅಂತಾರಲ್ಲ, ಅದು ಅವರಿಗೆ ಯಾರಿಂದ ಬಂತು.?
- ಪ್ರತಾಪ್ ಸಿಂಹ ಪ್ರಶ್ನೆ, ವಕ್ಫ್ ಆಸ್ತಿ ವಿವಾದ ಬಿಜೆಪಿ ಮುಂದೆ ಹಲವು ಪ್ರಶ್ನೆಗಳನ್ನಿಟ್ಟ ಕಾಂಗ್ರೆಸ್

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ವಕ್ಫ್ ಆಸ್ತಿಗೆ ಸಂಬಂಧಿಸಿದಂತೆ ದುರುದ್ದೇಶಪೂರ್ವಕ ಮತ್ತು ಅನಗತ್ಯವಾಗಿ ಬಿಜೆಪಿ ವಿವಾದ ಹುಟ್ಟುಹಾಕುತ್ತಿದೆ. ಉಪಚುನಾವಣೆಯ ಸಮಯದಲ್ಲಿ ವಕ್ಫ್ ಆಸ್ತಿ ವಿಚಾರ ಮುನ್ನೆಲೆಗೆ ತಂದು, ಕಾಂಗ್ರೆಸ್ ವಿರುದ್ಧ ಬಿಜೆಪಿ ಆರೋಪಗಳನ್ನು ಮಾಡುತ್ತಿದೆ ಅನವಶ್ಯಕ ವಿವಾದಗಳನ್ನು ಸೃಷ್ಟಿಸುತ್ತಿರುವ ಬಿಜೆಪಿ ಎದುರು ಕಾಂಗ್ರೆಸ್ ಹಲವು ಪ್ರಶ್ನೆಗಳನ್ನಿಟ್ಟದೆ ವಕ್ಫ್ ಆಸ್ತಿ ಸಂಬಂಧ ಬಿಜೆಪಿ ಆಡಳಿತಾವಧಿಯಲ್ಲಿ ಹೊರಡಿಸಿರುವ ನೋಟಸ್‌ಗಳೂ ಸೇರಿದಂತೆ ಮಹತ್ವದ ದಾಖಲೆಗಳನ್ನು ಕಾಂಗ್ರೆಸ್ ಬಹಿರಂಗಗೊಳಿಸಿದೆ. ವಿಜಯಪುರದಲ್ಲಿ ಕಾಂಗ್ರೆಸ್ ಮಾಜಿ ಶಾಸಕ ರಾಜು ಅಲಗೂರ ಪತ್ರಿಕಾಗೋಷ್ಠಿ ನಡೆಸಿದ್ದಾರೆ. ಬಿಜೆಪಿ ಸರ್ಕಾರವಿದ್ದಾಗ ವಕ್ಫ್‌ಗೆ ನೀಡಲಾದ ಆಸ್ತಿ ಎಷ್ಟು ಬಿಜೆಪಿ ಆಡಳಿತಾವಧಿಯಲ್ಲಿ ವಕ್ಫ್ ಆಸ್ತಿ ಸಂಬಂಧ ನೀಡಿದ ನೋಟೀಸ್ ಎಷ್ಟು...? ಗೆಜೆಟ್ ನೋಟಿಫಿಕೇಶನ್ ಪ್ರಮಾಣ ಎಷ್ಟು..? ನಡೆಸಿದ ಸಭೆ ಎಷ್ಟು..? ಎಂದು ಪ್ರಶ್ನಿಸಿದ್ದಾರೆ. 'ವಕ್ಫ್ ಎಂಬ ಸಂಸ್ಥೆ ಸ್ವತಂತ್ರ ಸ್ಥಾನಮಾನ ಹೊಂದಿದೆ. ಅದರಲ್ಲಿ ಯಾವುದೇ ಹಸ್ತಕ್ಷೇಪ ಮಾಡಲು ಸಾಧ್ಯವಿಲ್ಲ ಬಿ.ಎಸ್.ಯಡಿಯೂರಪ್ಪ ಜಗದೀಶ ಶೆಟ್ಟರ್, ಬಸವರಾಜ ಬೊಮ್ಮಾಯಿ, ಸದಾನಂದಗೌಡ ಮುಖ್ಯಮಂತ್ರಿಯಾಗಿದ್ದಾಗ ರಾಜ್ಯದಲ್ಲಿ ವಕ್ಫ್ ಹೆಸರಿನಲ್ಲಿದ್ದ ರೈತರು ಉಳುಮೆ ಮಾಡುತ್ತಿದ್ದ ಭೂಮಿಯನ್ನು ಮರಳಿ ವಕ್ಫ್ ಗೆ ನೀಡಲಾಗಿದೆ. ಈಗ ರಾಜ್ಯದಲ್ಲಿ ಗುಲ್ಲೆಬ್ಬಿಸಲು ಬಿಜೆಪಿ ವಕ್ಫ್ ಆಸ್ತಿ ವಿಚಾರದ ಬಗ್ಗೆ ಮಾತನಾಡುತ್ತಿದೆ ಎಂದು ಹೇಳಿದ್ದಾರೆ.

- ಮುಸ್ಲಿಮರು ವಕ್ಫ್ ಆಸ್ತಿ ಅಂತಾರಲ್ಲ, ಅದು ಅವರಿಗೆ ಯಾರಿಂದ ಬಂತು? ಪ್ರತಾಪ್ ಸಿಂಹ
- ಸೌದಿಯ ಮುಲ್ಲಾಗಳು ಕೊಟ್ಟ ಆಸ್ತಿನಾ ಇದು? ಎಂದು ಪ್ರಶ್ನೆ
- ಮುಡಾ ಪ್ರಕರಣದ ನಂತರ ಸಿಎಂ ಸಿದ್ದರಾಮಯ್ಯಗೆ
- ಹಿಂದೂ ಧರ್ಮದ ಮೇಲೆ ನಂಬಿಕೆ ಬಂದಿದೆ'

2022ರಲ್ಲಿಯೂ ವಕ್ಫ್ ಆಸ್ತಿ ಸಂಬಂಧ ರೈತರಿಗೆ ನೋಟಿಸ್ ನೀಡಲಾಗಿದೆ. ಆಗ ಬಿಜೆಪಿಯೇ ಅಧಿಕಾರದಲ್ಲಿತ್ತು. ಬಿಜೆಪಿ ಸರ್ಕಾರ ನೋಟಿಸ್ ನೀಡಿದವರಲ್ಲಿ ಎಲ್ಲರೂ ಹಿಂದುಗಳೇ ಆಗಿದ್ದಾರೆ ಅವರು ನೋಟಿಸ್ ನೀಡುವಾಗ ರೈತರ ಬಗ್ಗೆ ಅವರಿಗೆ ಕಾಳಜಿ ಇರಲಿಲ್ಲರ್ವೆ ಎಂದು ಕಾಂಗ್ರೆಸ್ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಲೋಣಿ ಪ್ರಶ್ನಿಸಿದ್ದಾರೆ. ವಕ್ಫ್ ಮತ್ತು ವಕ್ಫ್ ಆಸ್ತಿ ಬಗ್ಗೆ ಬಿಜೆಪಿಗರಿಗೆ ಸರಿಯಾದ ಜ್ಞಾನವೇ ಇಲ್ಲ. ಯಾವ ರೀತಿ ಮುಜರಾಯಿ ಇಲಾಖೆ ಅಡಿ ಜಮೀನುಗಳು ಇವೆಯೋ, ಅದೇ ರೀತಿ ವಕ್ಫ್‌ಗೂ ಜಮೀನುಗಳಿವೆ ಈ ಹಿಂದೆ, ಉಳುವವನೇ ಭೂಮಿಯ ಒಡೆಯ ಕಾಯ್ದೆ ಬಂದ ಬಳಿಕ ಬಹುತೇಕ ಜಮೀನು ಆ ಭೂಮಿಯಲ್ಲಿ ಉಳುಮೆ ಮಾಡುತ್ತಿದ್ದ ರೈತರ ಹೆಸರಿಗೆ ಖಾತೆಯಾಗಿವೆ. ಬಹಳ ವರ್ಷಗಳಿಂದ ವಕ್ಫ್ ದಾಖಲೆ ಸರಿಪಡಿಸಿರಲಿಲ್ಲ. ಇದೀಗ, ಆ ಪ್ರಕ್ರಿಯೆ ನಡೆಯುತ್ತಿದೆ' ಎಂದು ವಿವರಿಸಿದ್ದಾರೆ. ನೋಟಿಸ್ ನೀಡುವುದು ನಿರಂತರವಾಗಿ ನಡೆಯುವ ಪ್ರಕ್ರಿಯೆ ನೋಟಿಸ್ ಬಂದರೆ ಜಿಲ್ಲಾಡಳಿತ, ಜಿಲ್ಲಾ ಉಸ್ತುವಾರಿ ಮಂತ್ರಿಗಳ ಬಳಿ ಹೋಗದೆ, ಬಸನಗೌಡ ಪಾಟೀಲ ಯತ್ನಾಳ, ತೇಜಸ್ವಿ ಸೂರ್ಯ ಬಳಿ ಹೋಗಬೇಕೆ..? ವಕ್ಫ್ ಆಸ್ತಿ ವಿಚಾರದಲ್ಲಿ ಯಾವುದೇ ರೀತಿ ಅನ್ಯಾಯ ಆಗಿಲ್ಲ ಎಂಬುದರ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು, ಸಚಿವರು ಸ್ಪಷ್ಟನೆ ನೀಡಿದ್ದಾರೆ. ಆದರೂ, ರಾಜ್ಯದಲ್ಲಿ ಆತಂಕ ಸೃಷ್ಟಿಸಲು ಬಿಜೆಪಿ ಯತ್ನಿಸುತ್ತಿದೆ.

**ಡಿಸಿ ಭೇಟಿಯಾದ ಬಿಜೆಪಿ ಮುಖಂಡರ ನಿಯೋಗ:** ಡಿಸಿ ಟಿ ಭೂಬಾಲನ್ ಭೇಟಿ ಮಾಡಿದ ಸಂಸದ ಗೋವಿಂದ ಕಾರಜೋಳ ವಕ್ಫ್ ಸಚಿವ ಜಮೀರ್ ಅಹ್ಮದ್ ಖಾನ್ ನಡೆಸಿದ ಸಭೆಯ ಪ್ರೊಸೀಡಿಂಗ್ಸ್ ಕಾಪಿ ಕೇಳಿದ್ದಾರೆ. ನೋಟಿಸ್ ಕೊಡದೆ ಪಹಣಿಯಲ್ಲಿ ವಕ್ಫ್ ಹೆಸರು ಎಂಟ್ರಿ ಮಾಡಿದು ಏಕೆ ಎಂದು ಪ್ರಶ್ನಿಸಿದ್ದಾರೆ.



> ರೈತರ ಜಮೀನು, ಹಿಂದೂ ದೇವಾಲಯ, ಮಠಗಳು ವಕ್ಫ್ ಆಸ್ತಿ ಎಂದು ನೋಟಿಸ್ ನೀಡುತ್ತಿರುವುದನ್ನು ನೋಡಿದರೆ ಈ ರಾಜ್ಯವನ್ನು ಮಸೀದಿಗಳೇ ನಡೆಸುತ್ತಿರುವ ಹಾಗೆ ಅನಿಸುತ್ತಿದ್ದು, ವಿಜಯಪುರ, ಯಾದಗಿರಿ, ಕಲಬುರಗಿ, ತುಮಕೂರು, ಚಿತ್ರದುರ್ಗದಲ್ಲಿ ರೈತರ ಪಹಣಿಗಳಲ್ಲಿ ವಕ್ಫ್ ಆಸ್ತಿ ಎಂದು ನಮೂದಾಗಿದೆ. ಹಾಗಾಗಿ, ಮಸೀದಿಗಳು ಆ ಜಾಗ, ಈ ಜಾಗ ನಮಗೆ ಸೇರಿದ್ದು ಎಂದು ಸರ್ಕಾರಕ್ಕೆ ಪತ್ರ ಬರೆದಿವೆ
>
> -ಛಲವಾದಿ ನಾರಾಯಣಸ್ವಾಮಿ
> ವಿಧಾನ ಪರಿಷತ್ ಪ್ರತಿಪಕ್ಷ ನಾಯಕ

### ಸಿಎಂಗೆ ಈಗ ದೇವರು ನೆನಪಾಗಿದ್ದಾರೆ

ಸಿಎಂ ಸಿದ್ದರಾಮಯ್ಯಗೆ ಮುಡಾ ಕಷ್ಟ ಎದುರಾದಾಗ ಚಾಮುಂಡಿ ತಾಯಿ, ಹಾಸನಾಂಬೆ ತಾಯಿ ನೆನಪಾಗಿದ್ದಾರೆ. ಸಿಎಂಗೆ ಕಷ್ಟ ಬಂದಾಗ ಅವರ ಸಹಾಯಕ್ಕೆ ಬರುವುದು ನಮ್ಮ ದೇವಾನುದೇವತೆಗಳೇ ಹೊರತು ಬೇರೆ ಧರ್ಮದವರಲ್ಲ. ಹೀಗಾಗಿ ಸಿಎಂ ಈಗ ಹಿಂದೂಗಳ ವಿರುದ್ಧ ನಿಲುವು ತೆಗೆದುಕೊಳ್ಳವುದಿಲ್ಲ ಎಂದುಕೊಂಡಿದ್ದೇನೆ. ಪ್ರಧಾನ ಮಂತ್ರಿಗಳು ವಕ್ಫ್ ಕಾಯ್ದೆ, ವಕ್ಫ್ ಬೋರ್ಡ್ ಅನ್ನೇ ರದ್ದು ಮಾಡಬೇಕು ಎಂದರು. ಮುಡಾ ಹಗರಣ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಇಡಿ ತನಿಖೆ ಶುರು ಮಾಡಿದ ಮೇಲೆ ಮುಡಾ ಕ್ಲೀನ್ ಆಗಬಹುದು ಎಂಬ ನಂಬಿಕೆ ಬಂದಿದೆ. 50:50 ಅನುಪಾತದಲ್ಲಿ ಅಕ್ರಮವಾಗಿ ಸೈಟ್ ಪಡೆದವರ ಎಲ್ಲಾ ಸೈಟ್ ವಾಪಸ್ ಕಿತ್ತುಕೊಳ್ಳಿ. ಮೈಸೂರಿಗೆ ಒಳ್ಳೆಯ ನಗರಾಭಿವೃದ್ಧಿ ಪ್ರಾಧಿಕಾರ ಬೇಕು. ಒಳ್ಳೆಯ ಜನಪ್ರತಿನಿಧಿಗಳು ಬೇಕು ಎಂದರು. ಶಾಸಕ ಬಸವಗೌಡ ಪಾಟೀಲ್ ಯತ್ನಾಳ್ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಯತ್ನಾಳ್ ಬಿಜೆಪಿಯ ಜನಪ್ರಿಯ ನೇತಾರ. ಯತ್ನಾಳ್ ಅವರೇ ವಕ್ಫ್ ಬೋರ್ಡ್ ಆಕ್ರಮದ ಬಗ್ಗೆ ಮೊದಲು ಧ್ವನಿ ಎತ್ತಿದ್ದು. ವಕ್ಫ್ ಬೋರ್ಡ್ ವಿಚಾರದಲ್ಲಿ ಸತ್ಯಶೋಧನೆಗೆ ಕಣ್ತಪ್ಪಿನಿಂದ ಯತ್ನಾಳ್ ಹೆಸರು ಕೈ ಬಿಟ್ಟು ಹೋಗಿತ್ತು ಅಷ್ಟೇ ಎಂದು ಸಮರ್ಥನೆ ಮಾಡಿಕೊಂಡರು. ಸಿಎಂ ಮೊದಲು ಕೇಸರಿ ಶಾಲು ಹಾಕಿದರೆ ಕಿತ್ತು ಬಿಸಾಕುತ್ತಿದ್ದರು. ಮುಡಾ ಪ್ರಕರಣದ ನಂತರ ಹಿಂದೂ ಧರ್ಮದ ಮೇಲೆ ನಂಬಿಕೆ ಬಂದಿದೆ. ನಮ್ಮ ದೇವರ ಮೇಲೆ ಶ್ರದ್ಧೆ, ಭಕ್ತಿ ಕೂಡ ಸಿಎಂಗೆ ಬಂದಿದೆ. ನಾನು ಕೂಡ ಯತ್ನಾಳ್ ಜೊತೆಯಲ್ಲಿ ಪ್ರತಿಭಟನೆಯಲ್ಲಿ ಭಾಗಿಯಾಗುತ್ತೇನೆ ಎಂದರು.



### ಅಚ್ಚರಿಯ ಮಾಹಿತಿ ಬಿಚ್ಚಿಟ್ಟ ಜಿಲ್ಲಾಧಿಕಾರಿ

ವಕ್ಫ್ ಆಸ್ತಿಗಳ ಇಂದೀಕರಣ ಮೊದಲಿನಿಂದಲೂ ಮಾಡುತ್ತ ಬಂದಿದ್ದಾರೆ. ಹಿಂದಿನಂತೆಯೆ ಈಗ ನಾವು ಇಂದೀಕರಣ ಮಾಡಿದ್ದೇವೆ ಎಂದು ಬಿಜೆಪಿ ಟೀಂ ಎದುರು ಡಿಸಿ ಸ್ಪಷ್ಟನೆ ನೀಡಿದರು. 2018-19ರಲ್ಲೂ ವಕ್ಫ್ 123 ಆಸ್ತಿಗಳ ಇಂದೀಕರಣ ಆಗಿವೆ. 112 ರೈತರ ಜಮೀನುಗಳಿಗೆ ನೋಟಿಸ್ ನೀಡಲಾಗಿದೆ. ಪ್ರತಿವರ್ಷ ಇಂದೀಕರಣ, ನೋಟಿಸ್ ಪ್ರಕ್ರಿಯೆ ಆಗುತ್ತಿದೆ. 2020-21ರಲ್ಲಿ 138 ರೈತರಿಗೆ ನೋಟಿಸ್ ನೀಡದೇ ಇಂದೀಕರಣ ವಕ್ಫ್ ಹೆಸರು ಸೇರ್ಪಡೆಯಾಗಿದೆ ಎಂದು ಜಿಲ್ಲಾಧಿಕಾರಿ ಅಚ್ಚರಿಯ ಮಾಹಿತಿ ಬಿಚ್ಚಿಟ್ಟಿದ್ದಾರೆ.2020-21ರಲ್ಲೂ ನೋಟಿಸ್ ನೀಡದೆ ಸಾಕಷ್ಟು ರೈತರ ಜಮೀನು ಪಹಣಿಯಲ್ಲಿ ವಕ್ಫ್ ಹೆಸರು ಉಲ್ಲೇಖಿಸಿದ್ದು, ಇದು ಕಾನೂನು ಪ್ರಕ್ರಿಯೆ. ಇನ್ಮುಂದೆ ನೋಟಿಸ್ ಇಲ್ಲ, ಕಾಲಂ 11 ಹೆಸರು ಸೇರ್ಪಡೆ ಮಾಡಲ್ಲ. ಈಗ ಮಾಡಿರೋದನ್ನ ವಾಪಸ್ ಪಡೆಯುತ್ತೇವೆ, ಆದರೆ ಈ ಹಿಂದೆ ಆಗಿರುವ ಮ್ಯೂಟೇಷನ್ ಕುರಿತು ಸರ್ಕಾರದಿಂದ ಸಲಹೆ ಪಡೆದು ಮುಂದಿನ ಕಾರ್ಯ ಕೈಗೊಳ್ಳುತ್ತೇವೆ ಎಂದಿದ್ದಾರೆ.

### ಕೆಕೆಆರ್ ಡಿಬಿ ಹಗರಣ ಸಿಬಿಐ ತನಿಖೆಗೆ ಆಗ್ರಹ



ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ನಡೆದಿರುವ ಹಗರಣದ ಸಮಗ್ರ ತನಿಖೆಯನ್ನು ಸಿಬಿಐಗೆ ಒಪ್ಪಿಸಬೇಕೆಂದು ಒತ್ತಾಯಿಸಿದ ಛಲವಾದಿ ನಾರಾಯಣಸ್ವಾಮಿ ಕಲ್ಯಾಣ ಕರ್ನಾಟಕವನ್ನು ಸ್ಮಶಾನ ಕರ್ನಾಟಕ ಮಾಡಲು ಹೊರಟಿದ್ದಾರೆ ಎಂದು ಯಾರದ್ದೇ ಹೆಸರು ಪ್ರಸ್ತಾಪಿಸದೆ ಸ್ಥಳೀಯ ಕಾಂಗ್ರೆಸ್ ನಾಯಕರ ವಿರುದ್ಧ ಕಿಡಿಕಾರಿದರು.

## ಆರು ಬಿಜೆಪಿ ಸದಸ್ಯರು ಕಾಂಗ್ರೆಸ್ ಸೇರ್ಪಡೆ

• ಉದಯವಾಹಿನಿ, ಚನ್ನಪಟ್ಟಣ

ರಾಜ್ಯದಲ್ಲಿ ಉಪಚುನಾವಣೆಯ ಕಾವು ಜೋರಾಗಿದೆ. ತಮ್ಮ ಅಭ್ಯರ್ಥಿಗಳು ಗೆಲ್ಲುವ ನಿಟ್ಟಿನಲ್ಲಿ ರಾಜಕೀಯ ಪಕ್ಷಗಳು ಮಾಸ್ಟರ್ ಪ್ಲಾನ್ ನಡೆಸಿದ್ದು, ಚನ್ನಪಟ್ಟಣ ವಿಧಾನಸಭೆ ಕ್ಷೇತ್ರದ ಉಪಚುನಾವಣೆಗೆ ದಿನಗಣನೆ ನಡೆದಿರುವಾಗ ಬಿಜೆಪಿ, ಜೆಡಿಎಸ್ ಗೆ ಕಾಂಗ್ರೆಸ್ ಬಿಗ್ ಶಾಕ್ ನೀಡಿದೆ. ಚನ್ನಪಟ್ಟಣ ನಗರಸಭೆಗೆ ಬಿಜೆಪಿಯಿಂದ ಗೆದ್ದಿದ್ದ 7 ಸದಸ್ಯರ ಪೈಕಿ 6 ಮಂದಿ ಮಾಜಿ ಸಂಸದ ಡಿ.ಕೆ. ಸುರೇಶ್ ಸಮ್ಮುಖದಲ್ಲಿ ಮಂಗಳವಾರ ಕಾಂಗ್ರೆಸ್ ಗೆ ಸೇರ್ಪಡೆ ಆಗಿದ್ದಾರೆ.

ಬಿಎಂಐಸಿಪಿಎ ಅಧ್ಯಕ್ಷ ರಘುನಂದನ್ ರಾಮಣ್ಣ ಉಪಸ್ಥಿತರಿದ್ದರು. ಚನ್ನಪಟ್ಟಣ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ 6 ಮಂದಿ ನಗರಸಭೆ ಸದಸ್ಯರು ಬಿಜೆಪಿ ತೊರೆದು ಕಾಂಗ್ರೆಸ್ ಸೇರಿದರು. ಚನ್ನಪಟ್ಟಣ ನಗರಸಭಾ



ಸದಸ್ಯರಾದ ಚಂದ್ರು, ಮಂಗಳಮ್ಮ, ಮನೋಹರ್, ಕಮಲ, ಜಯಮಾಲ, ಕಸ್ತೂರಿ ಕಾಂಗ್ರೆಸ್ ಸೇರಿದವರು. 2021-22 ರಲ್ಲಿ ಇವರು ನಗರ ಸಭೆಗೆ ಬಿಜೆಪಿಯಿಂದ ಆಯ್ಕೆ ಆಗಿದ್ದರು. ಒಟ್ಟು 31 ಸದಸ್ಯರ ಪೈಕಿ 07 ಮಂದಿ ಬಿಜೆಪಿಯಿಂದ ಗೆದ್ದಿದ್ದರು. 16 ಮಂದಿ ಜೆಡಿಎಸ್ ನಿಂದ ಗೆದ್ದಿದ್ದರು.

ಎರಡು ತಿಂಗಳ ಹಿಂದೆ 13 ಮಂದಿ ಜೆಡಿಎಸ್ ಸದಸ್ಯರು ಆ ಪಕ್ಷ ತೊರೆದು ಕಾಂಗ್ರೆಸ್ ಸೇರಿದ್ದರು.

## ದೇಶದಲ್ಲಿ ಇರೋದು ಸಂವಿಧಾನ ಮಾತ್ರ, ಷರಿಯಾ ಬೇಕೆಂದರೆ ಪಾಕಿಸ್ತಾನಕ್ಕೆ ಹೋಗಿ

• ಉದಯವಾಹಿನಿ, ಬೆಂಗಳೂರು

ವಿಜಯಪುರದಲ್ಲಿ ವಕ್ಫ್ ಆಸ್ತಿ ಹೆಸರಲ್ಲಿ ರೈತರಿಗೆ ನೋಟಿಸ್ ನೀಡಿದ್ದನ್ನು ವಿರೋಧಿಸಿ ವಿಧಾನ ಪರಿಷತ್ ಬಿಜೆಪಿ ಸದಸ್ಯ ಸಿಟಿ ರವಿ ಅವರು ನಮ್ಮ ದೇಶದಲ್ಲಿ ಇದ್ದದ್ದು ಸಂವಿಧಾನ ಮಾತ್ರ. ಷರಿಯಾ ಬೇಕು ಅಂದ್ರೆ ಪಾಕಿಸ್ತಾನಕ್ಕೆ ಹೋಗಿ ಎಂದು ಎಂಎಲ್‌ಸಿ ಸಿ.ಟಿ.ರವಿ ಅವರು ಸಚಿವ ಜಮೀರ್ ಅಹ್ಮದ್ ವಿರುದ್ಧ ಹರಿಹಾಯ್ದಿದ್ದಾರೆ. ಬೆಂಗಳೂರಿನ ವಿಧಾನಸೌಧದಲ್ಲಿ ಈ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ದಾನ ಕೊಟ್ಟಿದ್ದೇ ನಿಜವಾಗಿ



ದ್ರೆ, ಸೂಕ್ತ ದಾಖಲೆ ಇದ್ರೆ ಅದು ವಕ್ಫ್ ಆಸ್ತಿ ಆಗುತ್ತದೆ. ಸರ್ಕಾರ ಗ್ರ್ಯಾಂಟ್ ಕೊಟ್ರೂ ಅದು ವಕ್ಫ್ ಆಸ್ತಿ ಅಂತ ಪರಿಗಣಿಸಬಹುದು.

ವಕ್ಫ್ ಬೋರ್ಡ್ ಖರೀದಿಸಿದ್ರೆ ಅದು ವಕ್ಫ್ ಆಸ್ತಿ ಅಂತ ಹೇಳಬಹುದು. ಆದರೆ ಸ್ವಯಂಪ್ರೇರಿತವಾಗಿ ವಕ್ಫ್ ಎಂದು ಘೋಷಿಸಿಕೊಳ್ಳುವ, ನಕಲಿ ದಾಖಲೆಗಳನ್ನು ಸೃಷ್ಟಿಸಿಕೊಂಡಿದ್ದರೆ ಅದು ವಕ್ಫ್ ಆಸ್ತಿ ಆಗಲ್ಲ ಎಂದರು. ವಕ್ಫ್ ಆಸ್ತಿ ಹೆಸರಲ್ಲಿ ರೈತರಿಗೆ ನೋಟಿಸ್ ಕೊಡೋದನ್ನು ತಕ್ಷಣ ನಿಲ್ಲಿಸಲಿ. ಜಮೀರ್ ಅಹ್ಮದ್ ಜಿಲ್ಲಾ ಪ್ರವಾಸ ಮಾಡಿ, ಅಧಿಕಾರಿಗಳಿಗೆ ಧಮ್ಕಿ ಹಾಕಿ ನೋಟಿಸ್ ಕೊಡಬೇಕು ಅಂತ ಮೌಖಿಕ ಸೂಚನೆ ಕೊಟ್ಟಿದ್ದರು. ನಂತರ ಇದೆಲ್ಲವೂ ಶುರುವಾಯ್ತು. ಈ ನೆಲದ ಆಸ್ತಿಯನ್ನು ನಮ್ಮದೆಂದು ಹೇಳೋಕೆ ಅವಕಾಶ ಕೊಡಲ್ಲ ಎಂದರು. ಸಂವಿಧಾನದ ಪ್ರಕಾರ ಯಾರದ್ದೋ ಆಸ್ತಿಯನ್ನು ನಮ್ಮ ಅಪ್ಪನ ಆಸ್ತಿ, ವಕ್ಫ್ ಬೋರ್ಡ್ ಆಸ್ತಿ ಅಂತ ಹೇಳಲು ಅವಕಾಶ ಇಲ್ಲ. ವಕ್ಫ್ ತನ್ನದು ಅಂತ ಹೇಳಿಕೊಳ್ಳುವ ಆಸ್ತಿ ಬಗ್ಗೆ ಕೂಲಂಕಷ ಪರಿಶೀಲನೆ ಆಗಬೇಕಿದೆ.

ಇಲ್ಲಿರೋದು ಸಂವಿಧಾನ ಮಾತ್ರ. ಷರಿಯಾ ಕಾನೂನು ಬೇಕು ಅನ್ನುವವರು ಪಾಕಿಸ್ತಾನಕ್ಕೆ ಓಡಿ ಹೋಗಿದ್ದಾರೆ. ಸಂವಿಧಾನ ಬೇಕು ಅಂದ್ರೆ ಮಾತ್ರ ಇಲ್ಲಿರಿ, ಷರಿಯಾ ಬೇಕು ಅಂದ್ರೆ ಪಾಕಿಸ್ತಾನಕ್ಕೆ ಹೋಗಿ ಎಂದು ಕಿಡಿ ಕಾರಿದರು.

# ಹುಚ್ಚುಚ್ಚಾಗಿ ಆಡಿ ಪಕ್ಷ ಬಿಟ್ಟ ಯೋಗೇಶ್ವರ್; ಚನ್ನಪಟ್ಟಣದಲ್ಲಿ ನಿಖಿಲ್ ಗೆಲುವು: ವಿಜಯೇಂದ್ರ


▶▶ ಈ ವಯಸ್ಸಿನಲ್ಲೂ ಮಾಜಿ ಪ್ರಧಾನಮಂತ್ರಿ ದೇವೇಗೌಡರ ಉತ್ಸಾಹವನ್ನು ಮೆಚ್ಚಿಕೊಳ್ಳಬೇಕು ▶▶ ಯುವಕರಿಗೂ ದೇವೇಗೌಡರು ಪ್ರೇರಣೆ

• ಉದಯವಾಹಿನಿ, ಬೆಂಗಳೂರು

ನಿಖಿಲ್ ಕುಮಾರಸ್ವಾಮಿಯವರು ಹಿರಿಯರಾದ ಮಾಜಿ ಪ್ರಧಾನಮಂತ್ರಿ ದೇವೇಗೌಡರ ಮೊಮ್ಮಗ ಇರಬಹುದು. ಆದರೆ ಅವರು ಇವತ್ತು ಎನ್‌ಡಿಎ ಅಭ್ಯರ್ಥಿ. ನಿಖಿಲ್ ಕುಮಾರಸ್ವಾಮಿಯವರನ್ನು ಗೆಲ್ಲಿಸುವ ಕರ್ತವ್ಯ ನಮ್ಮೆಲ್ಲರದೂ ಇದೆ. ಚನ್ನಪಟ್ಟಣದಲ್ಲಿ ನಿಖಿಲ್ ಕುಮಾರಸ್ವಾಮಿ ಗೆಲುವುದು ಖಚಿತ ಎಂದು ಬಿಜೆಪಿ ರಾಜ್ಯಾಧ್ಯಕ್ಷರಾದ ಬಿ ವೈ ವಿಜಯೇಂದ್ರ ಅವರು ಹೇಳಿದರು.

ರಾಜಕಾರಣದಲ್ಲಿ ಹುಚ್ಚುಚ್ಚಾಗಿ ಆಡಿ ಸಿ.ಪಿ. ಯೋಗೇಶ್ವರ್ ಪಕ್ಷ ಬಿಟ್ಟು ಹೋಗಿದ್ದಾರೆ. ಇವೆಲ್ಲವನ್ನೂ ಆ ಕ್ಷೇತ್ರದ ಜನರೂ ಗಮನಿಸುತ್ತಿದ್ದಾರೆ. ಈ ವಯಸ್ಸಿನಲ್ಲೂ ಮಾಜಿ ಪ್ರಧಾನಮಂತ್ರಿ ದೇವೇಗೌಡರ ಉತ್ಸಾಹವನ್ನು ಮೆಚ್ಚಿಕೊಳ್ಳಬೇಕು. ಯುವಕರಿಗೂ ದೇವೇಗೌಡರು ಪ್ರೇರಣೆ. ಅವರು ಬಂದು ಪ್ರಚಾರ ಮಾಡುತ್ತಾರೆಂದರೆ ಕಾಂಗ್ರೆಸ್ ಪಕ್ಷದವರಿಗೆ ಆತಂಕ ಶುರುವಾಗಿದೆ. ದೇವೇಗೌಡರು ಬಂದರೆ ಆ ಕ್ಷೇತ್ರವನ್ನು ಉಳಿಸಿಕೊಳ್ಳಲು ಸಾಧ್ಯವಿಲ್ಲ ಅನ್ನುವ ಸತ್ಯ ಅವರಿಗೆ ಅರ್ಥವಾಗಿದೆ. ಹಾಗಾಗಿ ಈ ರೀತಿ ಮನಬಂದಂತೆ ಮಾತನಾಡುತ್ತಿದ್ದಾರೆ ಎಂದು ವಿಜಯೇಂದ್ರ ಅವರು ಹೇಳಿದರು.

ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಸಂಬಂಧ ಏಕಸದಸ್ಯ ಆಯೋಗ ರಚಿಸಿದ ಕುರಿತ ಪ್ರಶ್ನೆಗೆ ಉತ್ತರ ನೀಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಒಳ ಮೀಸಲಾತಿ ವಿಚಾರದಲ್ಲಿ ಪ್ರಾಮಾಣಿಕತೆ ಇದ್ದರೆ, ಅವರಿಗೆ ಕಾಂತರಾಜ್ ವರದಿ ಕುರಿತು ಗಂಭೀರತೆ ಇರುತ್ತಿದ್ದರೆ ಬಹಳಷ್ಟು ಹಿಂದೆಯೇ ಅವರು ಇದರ ಕುರಿತು ಕ್ರಮ ಕೈಗೊಳ್ಳುತ್ತಿದ್ದರು. ಸಿದ್ದರಾಮಯ್ಯ ಮತ್ತು ಕಾಂಗ್ರೆಸ್ ಪಕ್ಷವು ರಾಜಕೀಯ ಲಾಭ ಪಡೆಯುವ ಕುರಿತು ಯೋಚಿಸುತ್ತದೆ. ಈ ವಿಚಾರದಲ್ಲಿ ಹೆಚ್ಚು ಗೊಂದಲ ಮೂಡಿಸುವ ಬಗ್ಗೆ ಅವರು ಪ್ರಯತ್ನಿಸುತ್ತಾರೆ. ಮುಖ್ಯಮಂತ್ರಿಗಳು ಈ ವಿಚಾರದಲ್ಲಿ ಪ್ರಾಮಾಣಿಕತೆ ಯನ್ನು ಹೊಂದಿಲ್ಲ ಎಂಬುದು ನನ್ನ ಭಾವನೆ ಎಂದರು. ಉಪ ಚುನಾವಣೆ ಕಾರಣಕ್ಕೆ ಈ ವಿಚಾರವನ್ನು



> ಬಿಜೆಪಿ ವಿಚಾರ ಸ್ಪಷ್ಟವಾಗಿದೆ. ರಾಜ್ಯ ಸರಕಾರ ರೈತರಿಗೆ ತೊಂದರೆ ಕೊಡುವ ಕೆಲಸ ಮಾಡುತ್ತಿದ್ದು, ಬಿಜೆಪಿ ರೈತರ ಪರ ಇದೆ. ನಾವು ಅವರ ಜೊತೆಯಲ್ಲಿದ್ದೇವೆ. ರೈತರ ಈ ಸಮಸ್ಯೆ ಪರಿಹಾರಕ್ಕೆ ನಾವು ಸಂಪೂರ್ಣ ಸಹಕಾರ ನೀಡುತ್ತೇವೆ ಎಂದು ತಿಳಿಸಿದರು. ಕಾನೂನಿನ ಸಹಾಯ ಸೇರಿ ಯಾವುದೇ ರೀತಿಯ ಸಹಕಾರವನ್ನು ಬಿಜೆಪಿ ಕೊಡಲಿದ್ದು, ಅವರ ಜೊತೆ ಗಟ್ಟಿಯಾಗಿ ನಿಲ್ಲಲಿದೆ
>
> - ಬಿ.ವೈ. ವಿಜಯೇಂದ್ರ, ರಾಜ್ಯಾಧ್ಯಕ್ಷ


ತರುತ್ತಿದ್ದಾರೆ. ಈ ವಿಷಯದಲ್ಲಿ ಅವರಿಗೆ ಬದ್ಧತೆ ಇಲ್ಲ ಎಂದು ತಿಳಿಸಿದರು. ರಾಜ್ಯ ಸರಕಾರ ಮಣ್ಣು ತಿನ್ನುವ ಕೆಲಸ ಮಾಡುತ್ತಿದೆ. ತಲ ತಲಾಂತರದಿಂದ ಇದ್ದ ಪಿತ್ರಾರ್ಜಿತ ಆಸ್ತಿಯನ್ನು ರಾತ್ರೋರಾತ್ರಿ ವಕ್ಫ್ ಪ್ರಾಪರ್ಟಿ ಎಂದು ಘೋಷಿಸಿದರೆ ರೈತರು ಬೀದಿಗೆ ಬಂದು ಏನು ಮಾಡಬೇಕು ಎಂದು ಪ್ರಶ್ನಿಸಿದರು. ನಾವಿದರ ವಿರುದ್ಧ ಹೋರಾಟ ಮಾಡುತ್ತೇವೆ; ರೈತರಿಗೆ ಧ್ವನಿಗೂಡಿಸುತ್ತೇವೆ. ಅವರ ಬೆಂಬಲಕ್ಕೆ ನಿಲ್ಲುವುದಾಗಿ ಹೇಳಿದರೆ ಬಿಜೆಪಿಯವರು ರಾಜಕಾರಣ ಮಾಡುತ್ತಿದ್ದಾರೆ ಎಂದು ನಮ್ಮ ಮೇಲೆ ಆರೋಪ ಮಾಡುತ್ತಾರೆ ಎಂದು ಟೀಕಿಸಿದರು. ಕಾಂಗ್ರೆಸ್ಸಿನವರು ಈಗ ಟಾಸ್ಕ್ ಫೋರ್ಸ್ ಮಾಡಿದ್ದೇವೆ. ಜಿಲ್ಲಾಧಿಕಾರಿಗಳಿಗೆ ಹೋಗಿ ಮನವಿ ಕೊಡಲಿ. ಈ ರೀತಿ ಆಟವನ್ನು ಶುರು ಮಾಡಿದ್ದಾರೆ ಎಂದು ಬಿ.ವೈ.ವಿಜಯೇಂದ್ರ ಅವರು ಆಕ್ಷೇಪಿಸಿದರು.

**ಅದಕ್ಕೆ ಬಿಜೆಪಿ ಹೊಣೆಯೇ?**

**ಸಚಿವರು 120 ಜನ ರೈತರಿಗೆ ನೋಟಿಸ್ ಕೊಟ್ಟಿದ್ದನ್ನು ಒಪ್ಪಿಕೊಂಡಿದ್ದಾರೆ. ಅದಕ್ಕೆ ಬಿಜೆಪಿ ಹೊಣೆಗಾರನೇ? ಅದಕ್ಕೆ ಬಿಜೆಪಿ ಕಾರಣವೇ ಎಂದು ಕೇಳಿದರು. ಇದನ್ನು ಬಿಜೆಪಿ ಗಟ್ಟಿಯಾಗಿ ತೆಗೆದುಕೊಳ್ಳದೆ ಇದ್ದರೆ ರಾಜ್ಯ ಸರಕಾರದ ಕ್ರಮದಿಂದ ನೂರಾರು ವರ್ಷಗಳಿಂದ ಉಳುಮೆ ಮಾಡುತ್ತಿದ್ದ ರೈತರು ಬೀದಿಗೆ ಬರಬೇಕಾಗುತ್ತಿತ್ತು ಎಂದು ವಿಶ್ಲೇಷಿಸಿದರು.**

ಬಳಿಕ ಪ್ರಶ್ನೆಗೆ ಉತ್ತರಿಸಿದ ಅವರು, ಮಾಜಿ ಉಪ ಮುಖ್ಯಮಂತ್ರಿ ಮತ್ತು ಹಿರಿಯರಾದ ಗೋವಿಂದ ಕಾರಜೋಳ ಅವರ ನೇತೃತ್ವದಲ್ಲಿ ಬಿಜೆಪಿ ತಂಡ ಈಗಾಗಲೇ ಬಿಜಾಪುರ ತಲುಪಿದೆ. ಬಿಜಾಪುರ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಗೆ ಭೇಟಿ ಕೊಟ್ಟು ರೈತರನ್ನು ಸಂಪರ್ಕಿಸಿ ಅವರಿಗೆ ಧೈರ್ಯ ತುಂಬುವ ಕಾರ್ಯ ಮಾಡಲಿದ್ದಾರೆ ಎಂದರು.

ಈ ರೀತಿ ಅಲ್ಪಸಂಖ್ಯಾತರನ್ನು ಎತ್ತಿಕಟ್ಟುವ, ಈ ದೇಶವನ್ನು ಜಾತಿ, ಧರ್ಮದ ಆಧಾರದಲ್ಲಿ ವಿಭಜಿಸುವ ಕೆಲಸವನ್ನು ಕಾಂಗ್ರೆಸ್ ಪಕ್ಷ ಹಿಂದಿನಿಂದಲೂ ಮಾಡುತ್ತ ಬರುತ್ತಿದೆ. ಅದೇನಿಟ್ಟಿನಲ್ಲಿ ಜಮೀರ್ ಅಹ್ಮದ್ ನೇತೃತ್ವದಲ್ಲಿ ಇವತ್ತು ರಾಜ್ಯದಲ್ಲಿ ಬೆಂಕಿ ಹಚ್ಚುವ ಕೆಲಸ ನಡೆದಿದೆ ಎಂದು ಆರೋಪಿಸಿದರು. ಅವರ ನೇತೃತ್ವದಲ್ಲೇ ರೈತರಿಗೆ ಅನ್ಯಾಯ ಮಾಡುವ ಕೆಲಸ ಆಗುತ್ತಿದೆ ಎಂದು ತಿಳಿಸಿದರು.



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

### ಸಾಧನೆಗಳು

ಮೊನ್ನೆ ಕೊಪ್ಪ ತಾಲ್ಲೂಕಿನ ಹರಿಹರಪುರದತ್ತ ಸಾಗಿದ್ದೆವು. ಬೆಂಗಳೂರು ಹಾಸನ ಹೆದ್ದಾರಿಯಲ್ಲಿ ನೆಲಮಂಗಲ ತಾಲ್ಲೂಕಿನ ತಿರುಮಲಾಪುರದಲ್ಲಿ ಶನೈಶ್ಚರ ಸ್ವಾಮಿಯ ಭವ್ಯ ದೇವಾಲಯವ ಕಂಡೆವು. ಸುಮಾರು ಹತ್ತು ಸಾವಿರ ಚದರಡಿಯಲ್ಲಿ ಸಂಪೂರ್ಣ ಕಲ್ಲಿನಲ್ಲಿ ನಿರ್ಮಿಸಿದ ಸುಂದರ ದೇವಾಲಯ. ಪಂಚಲೋಹದ ಶನೈಶ್ಚರ ಸ್ವಾಮಿಯ ವಿಗ್ರಹ ದೇದೀಪ್ಯಮಾನವಾಗಿ ಹೊಳೆಯುತ್ತಿದೆ. ಶ್ರೀಮತಿ ಜಯಮ್ಮ , ಟಿ. ಎಲ್ ಲಕ್ಕಣ್ಣನವರ ಸಂಕಲ್ಪದಂತೆ ಅವರು ಕೂಡಿಟ್ಟ ಹಣದೊಂದಿಗೆ ಹತ್ತು ಕೋಟಿ ವೆಚ್ಚದಲ್ಲಿ ಅವರ ಮಕ್ಕಳು ಈ ಮಂದಿರ ನಿರ್ಮಿಸಿದ್ದನ್ನು ಕೇಳಿ ಆಶ್ಚರ್ಯ ಸಂತಸಪಟ್ಟೆ. ತಂದೆಯ ಆದರ್ಶ ಸಂಕಲ್ಪ, ಮಕ್ಕಳಿಂದ ಈಡೇರಿಕೆ. ಇದು ಮಾದರಿಯ ಸಾಧನೆ. ಹಾಸನದಲ್ಲಿ ಹಾಸನಾಂಬೆಯ ದರ್ಶನವಾಯಿತು. ಹರಿಹರಪುರದ ಶ್ರೀ ಮಠವನ್ನು ತಲುಪಿದೆವು. ಮೂವತ್ತೊಂದು ವರ್ಷಗಳ ಬಳಿಕ ಭೇಟಿ. ಆಗ ಹಿಂದಿನ ಶ್ರೀಗಳು, ಒಂದು ಸಣ್ಣ ಕಟ್ಟಡ. ಸ್ವಯಂ ಪ್ರಕಾಶ ಸಚ್ಚಿದಾನಂದ ಶ್ರೀಗಳು. ಸುಮಾರು ಹದಿನೈದು ವರ್ಷಗಳಲ್ಲಿ ಅಂದಾಜು ನೂರು ಕೋಟಿ ವೆಚ್ಚದಲ್ಲಿ ಕಲ್ಲಿನ ನೂತನ ದೇವಾಲಯವನ್ನೊಳಗೊಂಡು ವಿವಿಧ ಕಟ್ಟಡಗಳನ್ನು ನಿರ್ಮಿಸಿ ನೂತನ ಸ್ವರ್ಗವಾಗಿಸಿದ್ದಾರೆ! ಇದು ಅಗಸ್ತ್ಯರ ತಪೋ ಭೂಮಿ. ಸ್ವಯಂ ನೃಸಿಂಹ ಭಗವಾನ್ ಅಗಸ್ತ್ಯರಿಗೆ ದರ್ಶನವಿತ್ತ ಕ್ಷೇತ್ರ. ತುಂಗೆ ಹರಿದ ಪಾವನ ನೆಲ. ಆದಿಶಂಕರರು ಸ್ಥಾಪಿಸಿದ ಶಾರದಾ ನೃಸಿಂಹ ಪೀಠ.

## ಡಿಸಿಎಂ ಪ್ರಕರಣ ಉಲ್ಲೇಖಿಸಿದ ದರ್ಶನ್ ಪರ ವಕೀಲ ಸಿವಿ ನಾಗೇಶ್

• ಉದಯವಾಹಿನಿ, ಬೆಂಗಳೂರು

ಚಿತ್ರದುರ್ಗದ ರೇಣುಕಾ ಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ನಟ ದರ್ಶನ್ ಅವರು ಸಲ್ಲಿಸಿದ್ದ ಜಾಮೀನು ಅರ್ಜಿಯ ವಿಚಾರಣೆ ಇಂದು ಹೈಕೋರ್ಟ್ ನಲ್ಲಿ ನ್ಯಾಯಾಧೀಶರಾದಂತಹ ವಿಶ್ವಜೀತ್ ಶೆಟ್ಟಿ ಅವರ ಪೀಠದಲ್ಲಿ ನಡೆಯಿತು. ವಿಚಾರಣೆ ವೇಳೆ ದರ್ಶನ್ ಪರ ವಕೀಲ ಸಿ ವಿ ನಾಗೇಶ್ ಅವರು ಡಿಸಿಎಂ ಡಿಕೆ ಶಿವಕುಮಾರ್ ಅವರ ಪ್ರಕರಣವನ್ನು ಉಲ್ಲೇಖಿಸಿ ವಾದ ಮಂಡಿಸಿದರು. ಡಿಕೆ ಶಿವಕುಮಾರ್ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ತೀರ್ಪು ಉಲ್ಲೇಖಿಸಿ ಜಾಮೀನು ಉಲ್ಲೇಖಿ ಸಿಸಿ ನಾಗೇಶ್ ವಾದ ಮಂಡಿಸಿದ್ದು, ಡಿಕೆ ಶಿವಕುಮಾರ್ ಅವರಿಗಿದ್ದ ಸಮಸ್ಯೆ ಗಿಂತ ಹೆಚ್ಚಿನ ಅನಾರೋಗ್ಯ ದರ್ಶನ್ ಅವರಿಗೆ ಇದೆ. 2022 23ರಲ್ಲಿಯೂ ಈ ಬಗ್ಗೆ ಚಿಕಿತ್ಸೆ ಪಡೆಯಲಾಗಿದೆ. ಬೆನ್ನು ಹುರಿಯ ಸಮಸ್ಯೆಯಿಂದ ಈಗಾಗಲೇ ಕಾಲು ಮರಗಟ್ಟುವಿಕೆ ಆಗುತ್ತಿದೆ. ಹೀಗೆ ಮುಂದುವರೆದರೆ ಇನ್ನಷ್ಟು ಸಮಸ್ಯೆ ಆಗಬಹುದು. ಡಿಸ್ಕ್ ನಲ್ಲಿನ ಸಮಸ್ಯೆಯಿಂದ ನರದಿಂದ ರಕ್ತ ಪರಿಚಲನೆ ಆಗುತ್ತಿಲ್ಲ. ಹೀಗಾಗಿ ಶಸ್ತ್ರಚಿಕಿತ್ಸೆ ಅಗತ್ಯವಿದೆ ಪಾರಂಪರಿಕ ಚಿಕಿತ್ಸೆಯಿಂದ ಇದು ಪರಿಹಾರ ಆಗುವುದಿಲ್ಲ. ಶಸ್ತ್ರಚಿಕಿತ್ಸೆಯಿಂದ ಮಾತ್ರವೇ ಈ ಸಮಸ್ಯೆ ಗುಣಪಡಿಸಬಹುದಾಗಿದೆ ಎಂದು ದರ್ಶನ್ ಪರ ಹಿರಿಯ ವಕೀಲ ಸಿವಿ ನಾಗೇಶ್ ವಾದ ಮಂಡಿಸಿದರು.

## ಪುನೀತ್ ಸ್ಮಾರಕಕ್ಕೆ ಪೂಜೆ ನೆರವೇರಿಸಿದ ಬಳಿಕ ಶಿವರಾಜ್ ಕುಮಾರ್ ಹೇಳಿಕೆ

• ಉದಯವಾಹಿನಿ, ಬೆಂಗಳೂರು

ಕನ್ನಡದ ಖ್ಯಾತ ನಟ ಪವರ್ ಸ್ಟಾರ್ ಪುನೀತ್ ರಾಜ್ ಕುಮಾರ್ ಮರೆಯಾಗಿ ಇಂದಿಗೆ 3 ವರ್ಷ. ಅವರ ನೆನಪು ಕನ್ನಡಿಗರಲ್ಲಿ ಅಷ್ಟೆ ಅಲ್ಲದೆ ಇಡೀ ಭಾರತೀಯ ಚಿತ್ರರಂಗದಲ್ಲಿ ಅವರ ನೆನಪು ಅಚ್ಚಳಿಯದೆ ಉಳಿದಿದೆ.ಇದೆ ವೇಳೆ ಪುನೀತ್ ರಾಜ್ ಕುಮಾರ್ ಸ್ಮಾರಕಕ್ಕೆ ನಟ ಶಿವರಾಜ್ ಕುಮಾರ್, ಪತ್ನಿ ಗೀತಾ ಶಿವರಾಜ್ ಕುಮಾರ್ ಭೇಟಿ ನೀಡಿ ಪೂಜೆ ಸಲ್ಲಿಸಿದರು. ಪುನೀತ್ ರಾಜಕುಮಾರ್ ಸ್ಮಾರಕಕ್ಕೆ ಭೇಟಿ ನೀಡಿದ ಶಿವರಾಜ್ ಕುಮಾರ್ ಮಾಧ್ಯಮಗಳೊಂದಿಗೆ ಮಾತನಾಡಿ,ಅಪ್ಪು ನಮ್ಮಲ್ಲಿ ಒಬ್ಬರಾಗಿ ಜೀವಿಸುತ್ತಿದ್ದಾರೆ. ಅಪ್ಪುನ ಅಷ್ಟು ಬೇಗ ಮರೆಯೋಕೆ ಆಗಲ್ಲ. ಶೂಟಿಂಗ್ ಹೋದರೂ ಎಲ್ಲೇ ಇದ್ದರೂ ಪುನೀತ್ ನೆನಪಾಗುತ್ತಲೇ ಇರುತ್ತಾನೆ. ಅಪ್ಪು ನಮ್ಮ ನಡುವೆಯೇ ಇದ್ದಾನೆ, ಎಲ್ಲೂ ಹೋಗಿಲ್ಲ. ನಮ್ಮಲ್ಲಿ ಒಬ್ಬರಾಗಿ ಜೀವಿಸುತ್ತಿದ್ದಾರೆ. ನಾನು ಈ ಜಾಗಕ್ಕೆ ಬರಬೇಕು ಅಂತ ಏನೂ ಇಲ್ಲ. ಈ ಜಾಗದಲ್ಲಿ ಒಂದು ಪಾಸಿಟಿವ್ ವೈಬ್ ಇದೆ ಎಂದಿದ್ದಾರೆ. 2021 ಅಕ್ಟೋಬರ್ 29ರಂದು ಹೃದಯಾಘಾತದಿಂದ ಅಪ್ಪು ನಿಧನರಾದರು. ಪುನೀತ್ ರಾಜ್‌ಕುಮಾರ್ ದೈಹಿಕವಾಗಿ ನಮ್ಮನ್ನಗಲಿ ಇಂದಿಗೆ 3 ವರ್ಷವಾಗಿದೆ. ಮೂರನೇ ವರ್ಷದ ಪುಣ್ಯಸ್ಮರಣೆ ಪ್ರಯುಕ್ತ ಬೆಂಗಳೂರಿನ ಕಂಠೀರವ ಸ್ಟುಡಿಯೋದಲ್ಲಿರುವ ಅಪ್ಪು ಸಮಾಧಿಗೆ ಪತ್ನಿ ಅಶ್ವಿನಿ ಅವರು ಮಕ್ಕಳು, ಕುಟುಂಬಸ್ಥರು ಇಂದು ಪೂಜೆ ಸಲ್ಲಿಸಲಿದ್ದಾರೆ.

## ಹೆಚ್‌ಎಂಟಿ ಅರಣ್ಯ ಭೂಮಿಯಲ್ಲಿ ಮರ ಕಡಿದವರ ವಿರುದ್ಧ ಕಾನೂನು ಕ್ರಮ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರದಿಂದ ಈಗಾಗಲೇ ಹೆಚ್ ಎಂ ಟಿ ವಶಪಡಿಸಿಕೊಂಡಿದ್ದಂತ ಅರಣ್ಯ ಭೂಮಿಯನ್ನು ಮರುವಶಕ್ಕೆ ಪಡೆಯಲಾಗಿದೆ. ಇನ್ನೂ ಅರಣ್ಯಭೂಮಿ ಇದ್ದು, ಅದರಲ್ಲಿನ ಮರಗಳನ್ನು ಅನುಮತಿಯಿಲ್ಲದೇ ಅಕ್ರಮವಾಗಿ ಕಡಿದವರ ವಿರುದ್ಧ ಕಾನೂನು ಕ್ರಮಕ್ಕೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಆದೇಶಿಸಿದ್ದಾರೆ. ಈ ಕುರಿತಂತೆ ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯವರಿಗೆ ಟಿಪ್ಪಣಿ ಹೊರಡಿಸಿರುವಂತ ಅವರು, ಬೆಂಗಳೂರು ಪೀಣ್ಯ ಪ್ಲಾಂಟೇಷನ್ 1 ಮತ್ತು 2ರಲ್ಲಿ ಒಟ್ಟು 599 ಎಕರೆ ಮೀಸಲು ಅರಣ್ಯ ಎಂದು ಗೆಜೆಟ್ ಅಧಿಸೂಚನೆ ಆಗಿದ್ದು, ಇದನ್ನು 1960ರ ದಶಕದಲ್ಲಿ ಡಿನೋಟಿಫಿಕೇಷನ್ ಮಾಡದೆ ಕಾನೂನು ಬಾಹಿರವಾಗಿ ಎಚ್.ಎಂ.ಟಿ. ಸಂಸ್ಥೆಗೆ ದಾನ, ಮಂಜೂರು ಹೆಸರಲ್ಲಿ ಹಸ್ತಾಂತರಿಸಲಾಗಿರುತ್ತದೆ. ಸುಪ್ರೀಂಕೋರ್ಟ್ ಎಂದು ಹೇಳಿದ್ದು, ಡಿ ನೋಟಿಫಿಕೇಷನ್ ಆಗದ ಎಚ್.ಎಂ.ಟಿ. ವಶದಲ್ಲಿರುವ ಭೂಮಿ ಅರಣ್ಯವೇ ಆಗಿರುತ್ತದ. ಜೊತೆಗೆ ತನ್ನ ಸ್ವಾಧೀನದಲ್ಲಿರುವ ಅರಣ್ಯ ಭೂಮಿಯನ್ನು ಎಚ್.ಎಂ.ಟಿ. ವಿವಿಧ ಸರ್ಕಾರಿ ಮತ್ತು ಖಾಸಗಿ ಸಂಸ್ಥೆಗಳಿಗೆ ಮತ್ತು ವ್ಯಕ್ತಿಗಳಿಗೆ ಅಕ್ರಮವಾಗಿ ಮಾರಾಟ ಮಾಡಿದ್ದು, ಇಲ್ಲಿ ಅರಣ್ಯೇತರ ಚಟುವಟಿಕೆ ನಡೆಯುತ್ತಿರುತ್ತದೆ. ಈ ಅರಣ್ಯ ಪ್ರದೇಶದಲ್ಲಿ ಮರ ಗಿಡಗಳನ್ನು ಕಡಿದಿರುವುದು ಉಪಗ್ರಹ ಚಿತ್ರದಿಂದ ಗೋಚರಿಸುತ್ತಿದೆ ಎಂದಿದ್ದಾರೆ.

## ಕುಟ್ಟಿ ಸೈತಾನ್ ಪೂಜೆಗೆ ಮಗು ಬಲಿ ಬೇಕೆಂದ ಪತಿ: ಪೊಲೀಸ್ ಠಾಣೆ ಮೆಟ್ಟಿಲೇರಿದ ಪತ್ನಿ

• ಉದಯವಾಹಿನಿ, ಬೆಂಗಳೂರು

ಹಿಂದೂ ಯುವಕ ಎಂದು ನಂಬಿಸಿ ಮದುವೆಯಾಗಿ, ಮಗುವಾದ ಮೇಲೆ ಕುಟ್ಟಿ ಸೈತಾನ್ ಎನ್ನುವ ಹೆಸರಿನ ಪೂಜೆ ಮಾಡಲು ಮಗನನ್ನೇ ಬಲಿ ಕೊಡಲು ಹೊರಟ ಸೈಕೋ ಪತಿ ವಿರುದ್ಧ ಮಹಿಳೆ ಪೊಲೀಸ್ ಠಾಣೆ ಮೆಟ್ಟಿಲೇರಿದ್ದಾಳೆ. ದೂರು ನೀಡಿದರೂ ಕ್ರಮ ತೆಗೆದುಕೊಳ್ಳದ ಸ್ಥಳೀಯ ಪೊಲೀಸರ ನಡೆಗೆ ಬೇಸತ್ತು ಕೊನೆಗೆ ಗಂಡನ ವಿರುದ್ಧ ಬೆಂಗಳೂರು ಪೊಲೀಸ್ ಕಮಿಷನರ್‌ಗೆ ದೂರು ನೀಡಿದ್ದಾಳೆ. ಕೆ.ಆರ್ ಪುರಂ ನಿವಾಸಿ ಸದ್ದಾಂ ಎಂಬಾತನೇ ವಾಮಾಚಾರದ ಹುಚ್ಚು ಹಿಡಿಸಿಕೊಂಡಿರುವ ಪತಿ. ಈತ 4 ವರ್ಷಗಳ ಹಿಂದೆ ತಾನು ಆದಿಈಶ್ವರ್ ಎಂದು ಸುಳ್ಳು ಹೇಳಿ ಹಿಂದೂ ಯುವತಿಯನ್ನು ಮದುವೆಯಾಗಿದ್ದಾನೆ. ಇಬ್ಬರು ಪ್ರೀತಿಸಿ ಮದುವೆಯಾಗಿದ್ದಾರೆ. ಹುಡುಗನ ಬಗ್ಗೆ ಅತಿಯಾದ ನಂಬಿಕೆಯಿಟ್ಟಿದ್ದ ಯುವತಿ ಆತನ ಪೂರ್ವಪರ ವಿಚಾರಿಸದೇ ಮದುವೆಯಾಗಿದ್ದಾಳೆ ಎನ್ನಲಾಗಿದೆ. ಆಕೆಯ ನಂಬಿಕೆಯನ್ನೇ ಬಂಡವಾಳ ಮಾಡಿಕೊಂಡ ಸದ್ದಾಂ ಮದುವೆಯಾಗಿ ಪತ್ನಿ ಗರ್ಭಿಣಿಯಾದ ನಂತರ ನಾನು ಹಿಂದೂ ಅಲ್ಲ, ಇಸ್ಲಾಂ ಧರ್ಮಕ್ಕೆ ಸೇರಿದವನು. ನನ್ನ ಹೆಸರು ಸದ್ದಾಂ ಎನ್ನುವ ನಿಜ ಒಪ್ಪಿಕೊಂಡಿದ್ದಾನೆ.

# ಎಸ್‌ಸಿಎಸ್‌ಪಿ/ಟಿಎಸ್‌ಪಿ ಕಾಯ್ದೆ ಜಾರಿ ಮಾಡಿಲ್ಲ:ಸಿಎಂ

## ಮಾದಿಗ ಸಮುದಾಯದ ರಾಜ್ಯ ಮುಖಂಡರು, ಪ್ರತಿಷ್ಠಿತರು, ರಾಜ್ಯಗಳಲ್ಲೂ ಜಾರಿ ಮಾಡಿಲ್ಲ

• ಉದಯವಾಹಿನಿ, ಬೆಂಗಳೂರು

ಸಮುದಾಯಗಳನ್ನು ಪರಸ್ಪರ ಸುಳ್ಳುಗಳ ಮೂಲಕ ಎತ್ತಿಕಟ್ಟುವ ಬಿಜೆಪಿ ಕೇಂದ್ರದಲ್ಲಿ ಏಕೆ ಎಸ್‌ಸಿಎಸ್‌ಪಿ/ಟಿಎಸ್‌ಪಿಕಾಯ್ದೆ ಜಾರಿ ಮಾಡಿಲ್ಲ ಬಿಜೆಪಿ ಆಡಳಿತದಲ್ಲಿರುವ ಯಾವ ರಾಜ್ಯಗಳಲ್ಲೂ ನಾವು ಜಾರಿ ಮಾಡಿದ ಎಸ್‌ಸಿಎಸ್‌ಪಿ/ಟಿಎಸ್‌ಪಿ ಕಾಯ್ದೆಯನ್ನು ಅವರೇಕೆ ಮಾಡಲಿಲ್ಲ ಹೇಳಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಶ್ನಿಸಿದರು.

ಒಳಮೀಸಲಾತಿ ಕುರಿತ ಸಚಿವ ಸಂಪುಟ ನಿರ್ಣಯಕ್ಕಾಗಿ ತಮ್ಮನ್ನು ಅಭಿನಂದಿಸಿದ ಮಾದಿಗ ಸಮುದಾಯದ ರಾಜ್ಯ ಮುಖಂಡರು, ಪ್ರತಿಷ್ಠಿತರು, ಒಳಮೀಸಲಾತಿ ಹೋರಾಟದ ನಾಯಕರು, ಪದಾಧಿಕಾರಿಗಳು ಮತ್ತು ಸಮುದಾಯದ ಜನ ಪ್ರತಿನಿಧಿಗಳನ್ನು ಉದ್ದೇಶಿಸಿ ಮಾತನಾಡಿದ ಸಿದ್ದರಾಮಯ್ಯ ಅವರು,ಬಡ್ತಿಯಲ್ಲೂ ಮೀಸಲಾತಿ ತಂದಿದ್ದು ನಾವು ಮಾತ್ರ. ಬಿಜೆಪಿಯ ಯಾವ ರಾಜ್ಯಗಳಲ್ಲೂ ಜಾರಿ ಮಾಡಿಲ್ಲ. ಗುತ್ತಿಗೆಯಲ್ಲಿ ಮೀಸಲಾತಿ ತಂದಿದ್ದು ನಮ್ಮ ರಾಜ್ಯ ಮಾತ್ರ. ಇದು ನನ್ನ ಕಮಿಟ್ ಮೆಂಟ್. ರಾಜಕಾರಣಕ್ಕಾಗಿ ಇದೆಲ್ಲಾ ಮಾಡಿದ್ದಲ್ಲ. ಇದರ ಮುಂದುವರೆದ ಭಾಗವಾಗಿಯೇ ಒಳಮೀಸಲಾತಿ ಜಾರಿಗೆ ಮುಂದಾಗಿದ್ದೇವೆ ಎಂದು ಸ್ಪಷ್ಟಪಡಿಸಿದರು. ಸಾಮಾಜಿಕ ನ್ಯಾಯದ ವಿಚಾರದಲ್ಲಿ ರಾಜಿ ಮಾಡಿಕೊಳ್ಳದೆ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಒಳಮೀಸಲಾತಿ ಪರವಾಗಿ ನಿರ್ಣಯ ತೆಗೆದುಕೊಂಡಿದ್ದೇವೆ. ಸಾಮಾಜಿಕ ನ್ಯಾಯ ಸುಮ್ ಸುಮ್ನೆ ಬರೋದಿಲ್ಲ. ಇಂಥಾ ತೀರ್ಮಾನ ಮಾಡಬೇಕಾಗುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಒಳಮೀಸಲಾತಿಗಾಗಿ ಮಾದಿಗ ಸಮುದಾಯ ದಶಕಗಳಿಂದ ಹೋರಾಟ ನಡೆಸಿದೆ. ಈಗ ಸುಪ್ರೀಂಕೋರ್ಟ್ ಕೂಡ ತೀರ್ಪು ನೀಡಿದೆ. ನಾವು ಜಾರಿ ಮಾಡಲೇಬೇಕಿದೆ. 101 ಪರಿಶಿಷ್ಟ ಜಾತಿಗಳಿವೆ. ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಳ್ಳುವುದು ಮುಖ್ಯ. ಎಲ್ಲರನ್ನೂ ಸಮಾಧಾನ ಮಾಡುವುದು ಸಾಧ್ಯವಿಲ್ಲದಿದ್ದರೂ ಶೇ90 ರಷ್ಟು ಸಮುದಾಯಗಳಿಗೆ ಸಮಾಧಾನ ಆಗುವ ತೀರ್ಮಾನ ತೆಗೆದುಕೊಳ್ಳಬೇಕಿದೆ. ಇದನ್ನು ನಮ್ಮ ಸರ್ಕಾರ ಮಾಡಲಿದೆ ಎಂದರು.

ಗೃಹ ಸಚಿವ ಪರಮೇಶ್ವರ್ ಅವರ ನಿವಾಸದಲ್ಲಿ ನಡೆದ ದಲಿತ ಶಾಸಕರ ಸಭೆಯಲ್ಲಿ, ಒಳ ಮೀಸಲಾತಿಗೆ ತಮ್ಮ ವಿರೋಧ ಇಲ್ಲ ಎನ್ನುವ ನಿರ್ಣಯ ಮಾಡಿದ್ದಾಗಿದೆ. ಹೀಗಾಗಿ ಎಲ್ಲರೂ ಒಳಮೀಸಲಾತಿ ಪರವಾಗಿದ್ದಾರೆ. ತೆಲಂಗಾಣ ಸರ್ಕಾರ ಈಗಾಗಲೇ ಒಳ ಮೀಸಲಾತಿ ಜಾರಿ ಸಂಬಂಧ ಒಂದು ಆಯೋಗ ರಚನೆ ಮಾಡಿದ್ದಾಗಿದೆ. ನಾನು ತೆಲಂಗಾಣ ಸಿಎಂ ಜೊತೆಗೂ ಇತ್ತೀಚಿಗೆ ಮೈಸೂರಿನಲ್ಲಿ ಈ ಬಗ್ಗೆ ಚರ್ಚೆ ಮಾಡಿದ್ದೇನೆ. ಹರಿಯಾಣದಲ್ಲೂ ಕ್ಯಾಬಿನೆಟ್ ನಿರ್ಣಯ ಆಗಿದೆ. ಆದರೆ ಆದೇಶ ಆಗಿಲ್ಲ ಎಂದರು.



**ಒಳಮೀಸಲಾತಿ ಹೋರಾಟ**

> **ನಮ್ಮ ಕ್ಯಾಬಿನೆಟ್ ನಲ್ಲೂ ಹಿಂದೊಮ್ಮೆ ಅನೌಪಚಾರಿಕ ಚರ್ಚೆ ಮಾಡಿದ್ದೆ. ನೆನ್ನೆಯ ಕ್ಯಾಬಿನೆಟ್ ನಲ್ಲಿ ಸಚಿವ ಮಹದೇವಪ್ಪ ಒಳಮೀಸಲಾತಿ ವಿಚಾರ ಪ್ರಸ್ತಾಪಿಸಿದರು. ಸಚಿವರಾದ ಪ್ರಿಯಾಂಕ್ ಖರ್ಗೆ, ತಿಮ್ಮಾಪುರ ಅವರು, ಮುನಿಯಪ್ಪ ಅವರು ಎಲ್ಲರೂ ಮಾತನಾಡಿ ದರು. ಎಲ್ಲರೂ ಒಳ ಮೀಸಲಾತಿಗೆ ಒಪ್ಪಿಕೊಂಡರು. ಯಾರದ್ದೂ ವಿರೋಧ ಇರಲಿಲ್ಲ. ಆದರೆ ಅಗತ್ಯ ಡಾಟಾ ಅಗತ್ಯವಿದೆ ಎನ್ನುವ ಸಂಗತಿ ಕೂಡ ಚರ್ಚೆಗೆ ಬಂದಿದೆ. ಹೀಗಾಗಿ ಆಯೋಗ ರಚನೆ ಮಾಡಿದ್ದೇವೆ.**


> **ಆಯೋಗ ಎಲ್ಲಾ ವರದಿಗಳನ್ನೂ ಅಧ್ಯಯನ ಮಾಡಿ ಅಗತ್ಯ ಅಂಕಿ ಅಂಶ ಸಮೇತ ವರದಿ ನೀಡುತ್ತದೆ. ವರದಿ ಬರುವವರೆಗೂ ಹೊಸದಾಗಿ ಯಾವ ನೇಮಕಾತಿ ನೋಟಿಫಿಕೇಶನ್ ಹೊರಡಿಸುವುದು ಬೇಡ ಎನ್ನುವ ನಿರ್ಣಯ ಆಗಿದೆ. ಸಾಮಾಜಿಕ ನ್ಯಾಯದ ವಿಚಾರದಲ್ಲಿ ರಾಜಿ ಮಾಡಿಕೊಳ್ಳದೆ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಳ್ಳುತ್ತೇವೆ ಎಂದರು. ಸಮಾಜದಲ್ಲಿ ಸಮಾನತೆ ಸುಮ್ನೆ ಬರೋದಿಲ್ಲ. ಈ ರೀತಿ ನಿರ್ಣಯಗಳನ್ನು ತಗೋಬೇಕಾತ್ತೆ. ಹೊಸ ಆಯೋಗದ ವರದಿ ನಿಗದಿತ ಸಮಯದೊಳಗೆ ಬರುವ ನಿರೀಕ್ಷೆ ಇದೆ. ವರದಿ ಬಂದ ತಕ್ಷಣ ಒಳ ಮೀಸಲಾತಿ ಜಾರಿ ಮಾಡಲಾಗುವುದು ಎಂದರು.**

## ಯಶಸ್ವಿ ಸಂಧಾನ ನಡೆಸಿದ ಡಿ.ಕೆ. ಸಹೋದರರು

• ಉದಯವಾಹಿನಿ, ಬೆಂಗಳೂರು

ಬದಲಾದ ರಾಜಕೀಯ ಪರಿಸ್ಥಿತಿ ಹಿನ್ನೆಲೆಯಲ್ಲಿ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆ ಟಿಕೆಟ್ ಕೈತಪ್ಪಿದ್ದರಿಂದ ಅಸಮಧಾನಗೊಂಡಿದ್ದ ಬೆಂಗಳೂರು – ಮೈಸೂರು ಇನ್ಫ್ರಾಸ್ಟ್ರಕ್ಚರ್ ಕಾರಿಡಾರ್ ಪ್ಲಾನಿಂಗ್ ಅಥಾರಿಟಿ ಅಧ್ಯಕ್ಷ ರಘುನಂದನ್ ರಾಮಣ್ಣ ಮತ್ತು ಕಾಂಗ್ರೆಸ್ ಅಭ್ಯರ್ಥಿ ಸಿ ಪಿ ಯೋಗೇಶ್ವರ್ ನಡುವೆ ಸಂಧಾನ ನಡೆಸುವಲ್ಲಿ ಡಿಸಿಎಂ ಡಿ ಕೆ ಶಿವಕುಮಾರ್ ಹಾಗೂ ಮಾಜಿ ಸಂಸದ ಡಿ ಕೆ ಸುರೇಶ್ ಅವರು ಯಶಸ್ವಿಯಾಗಿದ್ದಾರೆ.

ಶಿವಕುಮಾರ್ ಅವರು ಈ ಇಬ್ಬರು ನಾಯಕರನ್ನೂ ಸದಾಶಿವನಗರದ ತಮ್ಮ ನಿವಾಸಕ್ಕೆ ಮಂಗಳವಾರ ಬೆಳಗ್ಗೆ ಕರೆಸಿ ಡಿ ಕೆ ಸುರೇಶ್ ಅವರ ಸಮ್ಮುಖದಲ್ಲಿ ಮಾತುಕತೆ ನಡೆಸಿದರು. ನಂತರ ಇಬ್ಬರು ನಾಯಕರೂ ಪರಸ್ಪರ ಹಸ್ತಲಾಘವ ಮಾಡಿದರು.ಯೋಗೇಶ್ವರ್ ಅವರ ಪರ ಪ್ರಚಾರ ನಡೆಸಿ, ಅವರ ಗೆಲುವಿಗೆ ಶ್ರಮಿಸುವುದಾಗಿ ರಘುನಂದನ್ ರಾಮಣ್ಣ ಅವರು ಇದೇ ಸಂದರ್ಭದಲ್ಲಿ ಹೇಳಿದರು. ಕಳೆದ ಲೋಕಸಭಾ ಚುನಾವಣೆ ವೇಳೆ ಚನ್ನಪಟ್ಟಣ ವಿಧಾನಸಭೆ ಕ್ಷೇತ್ರದ ಚುನಾವಣೆ ಉಸ್ತುವಾರಿ ವಹಿಸಿಕೊಂಡಿದ್ದ ರಘುನಂದನ್ ರಾಮಣ್ಣ ಅವರು ತಳಮಟ್ಟದಿಂದ ಪಕ್ಷ ಸಂಘಟನೆ ಮಾಡಿದ್ದರು. ಚನ್ನಪಟ್ಟಣ ನಗರಸಭೆಯ 14 ಮಂದಿ ಜೆಡಿಎಸ್ ಸದಸ್ಯರು ಹಾಗೂ ಇಬ್ಬರು ಬಿಜೆಪಿ ಸದಸ್ಯರನ್ನು ಕಾಂಗ್ರೆಸ್ ಗೆ ಕರೆತರುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಇದಲ್ಲದೆ ತಾಲೂಕಿನಾದ್ಯಂತ ನೂರಾರು ಬಿಜೆಪಿ ಮತ್ತು ಜೆಡಿಎಸ್ ನಾಯಕರು, ಕಾರ್ಯಕರ್ತರನ್ನು ಕಾಂಗ್ರೆಸ್ ಪಕ್ಷಕ್ಕೆ ಕರೆತರುವಲ್ಲಿ ಯಶಸ್ವಿಯಾಗಿದ್ದರು. ಕಳೆದ ವಿಧಾನಸಭಾ ಚುನಾವಣೆಯಲ್ಲಿ 15 ಸಾವಿರವಿದ್ದ ಕಾಂಗ್ರೆಸ್ ಮತ ಗಳಿಕೆ ಪ್ರಮಾಣ ಲೋಕಸಭೆ ಚುನಾವಣೆ ವೇಳೆಗೆ 87 ಸಾವಿರಕ್ಕೆ ಏರಿಕೆಯಾಗಿತ್ತು.ಇದಲ್ಲದೆ ಕ್ಷೇತ್ರಕ್ಕೆ ಸರಕಾರದ ನಾನಾ ಅಭಿವೃದ್ಧಿ ಕಾರ್ಯಕ್ರಮಗಳು ಬರುವಲ್ಲಿಯೂ ರಘುನಂದನ್ ರಾಮಣ್ಣ ಅವರು ಪ್ರಮುಖ ಪಾತ್ರ ವಹಿಸಿದ್ದರು.ಈಗ ಯೋಗೇಶ್ವರ್ ಪರ ಚುನಾವಣೆ ಪ್ರಚಾರ ನಡೆಸಲಿದ್ದಾರೆ.



ಉದಯವಾಹಿನಿ ಚಿತ್ರ

## ವಕ್ಫ್ ಆಸ್ತಿ ವಿವಾದ ಕುರಿತು ಆತಂಕ ಬೇಡ : ಪ್ರಿಯಾಂಕ್ ಖರ್ಗೆ

• ಉದಯವಾಹಿನಿ, ಬೆಂಗಳೂರು

ವಕ್ಫ್ ಅದಾಲತ್ ನಡೆದಿರುವ ಕಡೆಯಲ್ಲೆಲ್ಲಾ ಜಮೀನುಗಳು ತಮಗೆ ಸೇರಿದ್ದು ಎಂಬ ಹಕ್ಕು ಪ್ರತಿಪಾದನೆ ಸಹಜವಾಗಿ ಕೇಳಿಬರುತ್ತದೆ. ಈ ವಿಚಾರವಾಗಿ ಯಾವುದೇ ಆತಂಕ ಪಡುವ ಅಗತ್ಯವಿಲ್ಲ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 12 ಜಿಲ್ಲೆಗಳಲ್ಲಿ ಈ ರೀತಿಯ ಹಕ್ಕು ಪ್ರತಿಪಾದನೆಗೆ ಪ್ರತಿಕ್ರಿಯಿಸಿದರು.ಈಗಾಗಲೇ ನಿನ್ನೆ ಸಚಿವರಾದ ಕೃಷ್ಣ ಬೈರೇಗೌಡ, ಜಮೀರ್ ಅಹಮದ್ ಖಾನ್, ಎಂ.ಬಿ.ಪಾಟೀಲ್‌ರವರು ಸ್ಪಷ್ಟನೆ ನೀಡಿದ್ದಾರೆ.

ಯಾರು ಬೇಕಾದರೂ ಆಸ್ತಿ ನಮ್ಮದು ಎಂದು ಹಕ್ಕು ಪ್ರತಿಪಾದಿಸಬಹುದು. ಆದರೆ ದಾಖಲೆಯಲ್ಲಿ ಯಾರ ಹೆಸರಿದೆ ಎಂಬುದು ಮುಖ್ಯ. ಕಾಯಿದೆ ಜಾರಿಗೆ ಬರುವ ಮುನ್ನ ಆಸ್ತಿ ಯಾರಿಗೆ ಸೇರಿದೆಯೋ ಅದೇ ಮುಂದುವರೆಯಲಿದೆ ಎಂದು ಕಂದಾಯ ಸಚಿವರು ಹೇಳಿದ್ದಾರೆ. ಯಾವುದೇ ರೀತಿಯಲ್ಲಿ ಅನ್ಯಾಯವಾಗಲು ಬಿಡುವುದಿಲ್ಲ. ಯಾರು, ಯಾರ ಆಸ್ತಿಯನ್ನೂ ಮುಟ್ಟುಗೋಲು ಹಾಕಿಕೊಳ್ಳಲು ಅವಕಾಶವಿಲ್ಲ. ವಕ್ಫ್ ಅದಾಲತ್ ನಡೆದಿರುವ ಕಡೆಯಲ್ಲೆಲ್ಲಾ ಆಸ್ತಿಗಳು ತಮವು ಎಂದು ಅವರು ಸಾಕಷ್ಟು ಅರ್ಜಿ ನೀಡಿದ್ದಾರೆ. ಅದಕ್ಕೆ ಆತಂಕ ಪಡುವ ಅಗತ್ಯವಿಲ್ಲ. ಇದಕ್ಕೆ ವಿಜಯಪುರದಲ್ಲಿ ಸಾವಿರ ಎಕರೆಯಲ್ಲಿ 11 ಎಕರೆ ಮಾತ್ರ ವಿವಾದಕ್ಕೆ ಈಡಾಗಿದೆ. ಯಾರಿಗೂ ಅನ್ಯಾಯವಾಗಲು ಸರ್ಕಾರ ಬಿಡುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಕಾನೂನಾತಕವಾಗಿ ಇಲ್ಲದ ಭೂಮಿ ವಾಪಸ್ ಪಡೆಯಲಾಗುತ್ತದೆ. ಇದನ್ನು ವಿರೋಧಪಕ್ಷಗಳು ರಾಜಕೀಯಕ್ಕೆ ದುರ್ಬಳಕೆ ಮಾಡಿಕೊಳ್ಳುತ್ತಿವೆ. ಉಪಚುನಾವಣೆಯಲ್ಲಿ ಸೋಲುತ್ತೇವೆ ಎಂಬ ಭಯದಿಂದ ವಕ್ಫ್ ವಿಚಾರವನ್ನು ವಿವಾದ ಮಾಡಲಾಗುತ್ತಿದೆ ಎಂದು ಟೀಕಿಸಿದರು. ಮುಂದಿನ ಜನದಲ್ಲಿ ಮುಸಲಾನನಾಗಿ ಹುಟ್ಟಬೇಕು ಎಂದು ಹೇಳಿದ್ದು ಯಾರು, ಈಗ ಅದೇ ಜೆಡಿಎಸ್ ನಾಯಕರು ವಕ್ಫ್ ವಿವಾದದ ಕುರಿತು ವ್ಯತಿರಿಕ್ತ ಹೇಳಿಕೆ ನೀಡುತ್ತಿದ್ದಾರೆ. ಎಚ್‌ಡಿಕೆಯವರು ವರ್ಷದ ಹಿಂದೆ ಆರ್‌ಎಸ್‌ಎಸ್ ಬಗ್ಗೆ ಏನು ಹೇಳಿದ್ದರು, ಅವರಿಗೆ ತಮ ಮಾತಿನ ಮೇಲೆ ಬದ್ಧತೆ ಇಲ್ಲವೇ ಎಂದು ಪ್ರಶ್ನಿಸಿದರು. ಸಂಖ್ಯಾಬಲದ ಕೊರತೆಯಿಂದಾಗಿ ಕಾಂಗ್ರೆಸ್ ಜೆಡಿಎಸ್ ಜೊತೆ ಮೈತ್ರಿ ಮಾಡಿಕೊಂಡು ಸರ್ಕಾರ ಮಾಡಿತ್ತು. ಆದರೆ ಕುಮಾರಸ್ವಾಮಿ ಕುರ್ಚಿ ಸಿಕ್ಕಾಗ ಜಾತ್ಯತೀರಾಗುತ್ತಾರೆ. ಅದು ಹೋದಾಗ ಕಮ್ಯುನಲ್ ಆಗುತ್ತಾರೆ. ಬಿಜೆಪಿಯವರು ಕುರ್ಚಿ ಕೊಟ್ಟರೆ ಕಮ್ಯುನಲ್ ಆಗಿ ಮುಂದುವರೆಯುತ್ತಾರೆ. ಅಧಿಕಾರಕ್ಕಾಗಿ ಸಿದ್ಧಾಂತಗಳು ಯಾವ ರೀತಿ ಬೇಕಾದರೂ ಬದಲಾಗಬಹುದೇ ಎಂದು ಪ್ರಶ್ನಿಸಿದರು.




## ವಿಜಯಪುರಕ್ಕೆ ಬಿಜೆಪಿ ತಂಡ ಭೇಟಿ: ಯತ್ನಾಳ್‌ಗಾಗಿ ತಂಡ ಪುನಾರಚನೆ

• ಉದಯವಾಹಿನಿ, ಬೆಂಗಳೂರು

ವಿಜಯಪುರ ಜಿಲ್ಲೆಯ ಹೊನವಾಡದಲ್ಲಿ ವಕ್ಫ್ ಕಾಯಿದೆಯಿಂದ ಜನರಿಗೆ, ಅದರಲ್ಲೂ ರೈತರಿಗೆ ತೊಂದರೆ ಆಗಿದೆ ಎಂಬ ಆರೋಪ ಕೇಳಿ ಬಂದಿದೆ. ಈ ಸಂಬಂಧ ಜನರ ಅಹವಾಲು ಆಲಿಸಲು, ಜನರ ಧ್ವನಿ ಎತ್ತಲು ಕರ್ನಾಟಕ ಬಿಜೆಪಿಯು ಶಾಸಕ ಗೋವಿಂಗ್ ಕಾರಜೋಳ ನೇತೃತ್ವದಲ್ಲಿ 'ಬಿಜೆಪಿ ಪರಿಶೀಲನಾ ತಂಡ' ರಚನೆ ಮಾಡಿದೆ. ಈ ತಂಡಕ್ಕೆ ತಡವಾಗಿ ಬಸನಗೌಡ ಪಾಟೀಲ್ ಅವರನ್ನು ಸೇರ್ಪಡೆಗೊಳಿಸಲಾಗಿದೆ. ತಂಡುವ ಮಂಗಳವಾರ ಅಕ್ಟೋಬರ್ 20ರಂದು ವಿಜಯಪುರಕ್ಕೆ ಭೇಟಿ ನೀಡಲಿದೆ.

ಹೌದು, ವಕ್ಫ್ ಮಂಡಳಿ, ಕಾಯಿದೆಯಿಂದ ರೈತರಿಗೆ ತೊಂದರೆ ಆಗುತ್ತಿದೆ. ರೈತರು ಜಮೀನು ಕಳೆದುಕೊಳ್ಳಲಿದ್ದಾರೆ. ಅವರಿಗೆ ನೋಟಿಸ್ ಜಾರಿ ಮಾಡಲಾಗಿದೆ ಎಂದೆಲ್ಲ ವರದಿ ಆಗಿದೆ. ಇದರ ಬೆನ್ನಲ್ಲೆ ಬಿಜೆಪಿಯು ಪರಿಶೀಲನಾ ತಂಡ ರಚಿಸಿತ್ತು. ಆದರೆ ವಿಜಯಪುರ ಸ್ಥಳೀಯ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನೇ ಬಿಟ್ಟು ತಂಡ ರಚಿಸಲಾಗಿತ್ತು. ಇದಕ್ಕೆ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ತಂಡ ಬಹಿರಷ್ಕರಿಸುವುದಾಗಿ ಹೇಳುತ್ತಿದ್ದಂತೆ ತಂಡವನ್ನು ಪುನಾರಚರಿಸುವ ಮೂಲಕ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರು ಯತ್ನಾಳ್ ಆಕ್ರೋಶಕ್ಕೆ ಮಣಿದಿದ್ದಾರೆ. ಯತ್ನಾಳ್ ಅವರನ್ನು ಸೇರ್ಪಡೆ ಗೊಳಿಸಿ, ವಿಜಯಪುರ ಭೇಟಿಗೂ ಮುನ್ನಾ ದಿನವೇ ತಂಡದ ಸದಸ್ಯರು ಹೆಸರನ್ನು ಪ್ರಕಟಿಸಿದ್ದಾರೆ. ಈ ತಂಡದಲ್ಲಿ ಹಿರಿಯ ಬಿಜೆಪಿ ನಾಯರಕಿದ್ದಾರೆ. ಅವರೆಲ್ಲವು ಮಂಗಳವಾರ ವಿಜಯ ಪುರ ಜಿಲ್ಲೆಯಾದ್ಯಂತ ವಕ್ಫ್ ಬೋರ್ಡ್ ಕಾಯ್ದೆಯಿಂದ ಆಗುತ್ತಿ ರುವ ಅನ್ಯಾಯ, ವಕ್ಫ್ ಬೋರ್ಡ್‌ನಿಂದ ರೈತರು ಎದುರಿಸುತ್ತಿರುವ ಅಹವಾಲುಗಳನ್ನು ಸ್ವೀಕರಿಸಲಿದ್ದಾರೆ. ಬಿಜೆಪಿ ನಿಯೋಗವು ವಿಜಯಪುರ ಜಿಲ್ಲೆಯಾದ್ಯಂತ ಭೇಟಿ ನೀಡಲಿದೆ. ಭೂಮಿ ಕಳೆದುಕೊಳ್ಳುವ ಆತಂಕದಲ್ಲಿರುವ ಕುಟುಂಬಗಳನ್ನು ಭೇಟಿ ಮಾಡಲಿದ್ದಾರೆ. ಖುದ್ದು ಜಮೀನು ಪರಿಶೀಲಿಸಿ ವರದಿ ತಯಾರಿಸಲಿದ್ದಾರೆ ಎಂದು ಬಿಜೆಪಿ ಮಾಹಿತಿ ನೀಡಿದೆ.



ಉದಯವಾಹಿನಿ ಚಿತ್ರ

**ಬಿಜೆಪಿ ಪರಿಶೀಲನಾ ತಂಡದಲ್ಲಿ ಯಾರಿದ್ದಾರೆ**

- ಶಾಸಕ ಗೋವಿಂದ ಕಾರಜೋಳ
- ಸಂಸದ ರಮೇಶ್ ಜಿಗಜಿಣಗಿ
- ಶಾಸಕ ಬಸನಗೌಡ ಪಾಟೀಲ್ ಯತ್ನಾಳ್
- ಶಾಸಕ ಹರೀಶ್ ಪೂಂಜಾ
- ಶಾಸಕ ಮಹೇಶ್ ಟೆಂಗಿನಕಾಯಿ
- ಮಾಜಿ ಎಂಎಲ್‌ಸಿ ಅರುಣ್ ಶಹಾಪುರ
- ರೈತ ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಕಲ್ಮರುಡಪ್ಪ
- ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಎಂ.ಬಿ.ಜಿರಲಿ

## ಆನೇಕಲ್‌ವರೆಗೂ ಮೆಟ್ರೊ ವಿಸ್ತರಣೆಗೆ ಆಗ್ರಹ

• ಉದಯವಾಹಿನಿ, ಆನೇಕಲ್

ತಾಲ್ಲೂಕು ಕಚೇರಿ ಮುಂಭಾಗದಲ್ಲಿ ಕನ್ನಡ ಚಳವಳಿ ವಾಟಾಳ್ ಪಕ್ಷದಿಂದ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ತಮಟೆ ಚಳವಳಿ ನಡೆಸಿದರು. ತಮಿಳುನಾಡಿನ ಹೊಸೂರನ್ನು ಕರ್ನಾಟಕಕ್ಕೆ ಸೇರಿಸಬೇಕು. ಆನೇಕಲ್‌ವರೆಗೆ ಮೆಟ್ರೊ ವಿಸ್ತರಣೆ ಮಾಡಬೇಕು ಕಂಪನಿಗಳಲ್ಲಿ ಕನ್ನಡಿಗರಿಗೆ ಉದ್ಯೋಗ ಮೀಸ ಲಾತಿ ನೀಡಬೇಕು ಎಂಬ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಪ್ರತಿಭಟನೆ ನಡೆಸಿದರು.

ಪಕ್ಷದ ಅಧ್ಯಕ್ಷ ವಾಟಾಳ್ ನಾಗರಾಜ್ ಮಾತನಾಡಿ, ನೂರಾರು ವರ್ಷಗಳ ಹಿಂದೆ ತಮಿಳುನಾಡಿನ ಹೊಸೂರಿನಲ್ಲಿ ಕನ್ನಡ ಭಾಷಿಕರು ಹೆಚ್ಚಿದ್ದರು. ಹಾಗಾಗಿ ಹೊಸೂರು ಕರ್ನಾಟಕಕ್ಕೆ ಸೇರಬೇಕಾಗಿತ್ತು. ರಾಜ್ಯ ಸರ್ಕಾರ ಯಾವುದೇ ಕಾಳಜಿ ವಹಿಸಿಲ್ಲ. ಕನ್ನಡ ರಾಜ್ಯೋತ್ಸವ ಸಮೀಪಿಸುತ್ತಿದೆ. ನ. 1 ನಂತರ ತಮಿಳುನಾಡಿನ ಸಿಎಂಯೊಂದಿಗೆ ರಾಜ್ಯ ಸರ್ಕಾರ ಸಭೆ ನಡೆಸಿ ತಮಿಳುನಾಡಿನ ಹೊಸೂರು, ತಾಳವಾಡಿ ಕರ್ನಾಟಕಕ್ಕೆ ಸೇರಿಸಬೇಕು ಎಂದು ಆಗ್ರಹಿಸಿದರು. ಆನೇಕಲ್‌ವರೆಗೆ ಮೆಟ್ರೊ ವಿಸ್ತರಣೆ ಮಾಡಬೇಕು. ಆನೇಕಲ್-ಬೆಂಗಳೂರು ನಗರಕ್ಕೆ ಸಮೀಪದಲ್ಲಿದೆ. ಮೆಟ್ರೊ ವಿಸ್ತರಣೆ ಮಾಡದಿದ್ದರೆ ಚಳವಳಿ ಪ್ರಾರಂಭಿಸಲಾಗುವುದು. ಗಡಿನಾಡಿನಲ್ಲಿ ಕನ್ನಡ ಪ್ರೇಮ ಹೆಚ್ಚಾಗಿದೆ. ಇಲ್ಲಿ ಎಲ್ಲಾ ರಾಜ್ಯದವರು ವಾಸವಾಗಿದ್ದಾರೆ. ಇಲ್ಲಿಯ ಕೈಗಾರಿಕೆ ಪ್ರದೇಶಗಳು ಕನ್ನಡಿಗರಿಗೆ ನ್ಯಾಯ ದೊರಕಿಸಲಿಲ್ಲ. ಕನ್ನಡಿಗರ ಉದ್ಯೋಗ ನೀಡಬೇಕು. ಕೈಗಾರಿಕೆಗಳಿಗೆ ಲಕ್ಷಾಂತರ ಎಕರೆ ಜಮೀನು ನೀಡಲಾಗಿದೆ.



> **ನೀರು, ಸಂಪನ್ಮೂಲ ಕೊಡಲಾಗಿದೆ. ಪ್ರತಿ ಕಾರ್ಖಾನೆಯಲ್ಲಿ ಕನ್ನಡಿಗರಿಗೆ ಕಡ್ಡಾಯವಾಗಿ ಉದ್ಯೋಗ ನೀಡಬೇಕು ಎಂದು ಆಗ್ರಹಿಸಿದರು. ಸರ್ಕಾರ ಈ ಬಗ್ಗೆ ಸಮೀಕ್ಷೆ ನಡೆಸಬೇಕು. ಸಮಗ್ರ ಅಧ್ಯಯನ ನಡೆಸುವ ಮೂಲಕ ಕನ್ನಡಿಗರ ಸ್ಥಿತಿಗತಿ ತಿಳಿಸಬೇಕು. ಕರ್ನಾಟಕದಲ್ಲಿನ ಅಂಗಡಿ ಮಳಿಗೆ ಕಡ್ಡಾಯವಾಗಿ ನಾಮಫಲಕದಲ್ಲಿ 90ರಷ್ಟು ಕನ್ನಡ ಬಳಸಬೇಕು. ಇಲ್ಲವಾದಲ್ಲಿ ನವೆಂಬರ್ 15ರ ನಂತರ ಬೋರ್ಡ್ ಕಿತ್ತು ಸುಡಲಾಗುವುದು ಎಂದರು.**

## ಜೋಶಿ ಸಹೋದರ ಬಿಡುಗಡೆಗೆ ಹೈಕೋರ್ಟ್ ಆದೇಶ

• ಉದಯವಾಹಿನಿ, ಬೆಂಗಳೂರು

ಲೋಕಸಭೆ ಟಿಕೆಟ್ ಕೊಡಿಸುವುದಾಗಿ 2 ಕೋಟಿ ರೂ. ಸುಲಿಗೆ ಮಾಡಿದ ಆರೋಪದಲ್ಲಿ ಬಂಧಿತರಾಗಿರುವ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರ ಸಹೋದರ ಮತ್ತಿತರರ ಬಿಡುಗಡೆಗೆ ಹೈಕೋರ್ಟ್ ಆದೇಶ ನೀಡಿದೆ. ಅದೇ ರೀತಿ ಎಫ್‌ಐಆರ್ ರದ್ದುಗೊಳಿಸುವಂತೆ ಪೊಲೀಸರಿಗೆ ಸೂಚಿಸಿದೆ.

ಬಿಜೆಪಿಯಿಂದ ಟಿಕೆಟ್ ಕೊಡಿಸುವ ಆರೋಪಕ್ಕಾಗಿ ಪೊಲೀಸ್ ಕಸ್ಟಡಿಯಲ್ಲಿದ್ದ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರ ಸಹೋದರ ಗೋಪಾಲ್ ಜೋಶಿ, ಅವರ ಪುತ್ರ ಅಜಯ್ ಜೋಶಿ ಮತ್ತು ಎಸ್. ವಿ. ವಿಜಯಲಕ್ಷ್ಮಿ ಅವರ ವಿರುದ್ಧ ದಾಖಲಾಗಿರುವ ಎಫ್‌ಐಆರ್‌ಗೆ ಹೈಕೋರ್ಟ್ ಸೋಮವಾರ ತಡೆ ನೀಡಿದೆ. ಅವರನ್ನು ಕೂಡಲೇ ಬಿಡುಗಡೆ ಮಾಡುವಂತೆಯೂ ಆದೇಶ ಹೊರಡಿಸಿದೆ. ಲೋಕಸಭಾ ಚುನಾವಣೆಗೆ ಟಿಕೆಟ್ ಕೊಡಿಸುವುದಾಗಿ 2 ಕೋಟಿ ರೂ. ಸುಲಿಗೆ ಮಾಡಿದ್ದಾರೆ ಎಂದು ಮಾಜಿ ಶಾಸಕ ದೇವಾನಂದ್ ಫೂಲ್ ಸಿಂಗ್ ಚವ್ಹಾಣ್ ಅವರ ಪತ್ನಿ ಬೆಂಗಳೂರಿನ ಬಸವೇಶ್ವರ ನಗರ ಪೊಲೀಸ್ ಠಾಯಲ್ಲಿ ದೂರು ದಾಖಲಿಸಿದ್ದರು. ಇವರ ವಿರುದ್ಧ ಎಫ್ ಐಆರ್ ದಾಖಲಾಗಿತ್ತು. ದೇವಾನಂದ್ ಚವ್ಹಾಣ್ ವಿಜಯಪುರ ಜಿಲ್ಲೆ ನಾಗಠಾಣ ಕ್ಷೇತ್ರದ ಮಾಜಿ ಶಾಸಕರಾಗಿದ್ದಾರೆ. ತಮ್ಮ ವಿರುದ್ಧ ದಾಖಲಾಗಿರುವ ಎಫ್ ಐಆರ್ ರದ್ದುಪಡಿಸುವಂತೆ ಕೋರಿ ಸಹೋದರ ಗೋಪಾಲ ಜೋಶಿ, ಸಹೋದರಿ ವಿಜಯಲಕ್ಷ್ಮಿ ಜೋಶಿ, ಅಜಯ್ ಜೋಶಿ ಹೈಕೋರ್ಟ್ ಮೆಟ್ಟಿಲೇರಿದ್ದರು.

ಗೋಪಾಲ ಜೋಶಿ, ಇತರರು ಸಲ್ಲಿಸಿದ್ದ ಅರ್ಜಿಯ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರು ಎಫ್‌ಐಆರ್ ರದ್ದುಪಡಿಸಬೇಕು ಇವರನ್ನು ಕೂಡಲೇ ಬಿಡುಗಡೆ ಮಾಡಬೇಕು ಎಂದು ಆದೇಶ ಹೊರಡಿಸಿದರು.




# 3 ತಿಂಗಳಲ್ಲಿ ವರದಿ ಪಡೆದು ಜಾರಿ: ಡಿಸಿಎಂ ಘೋಷಣೆ

## ಒಳಮೀಸಲಾತಿ ಜಾರಿಗೆ ಸರ್ಕಾರ ಬದ್ಧ, ಸಚಿವ ಸಂಪುಟ ಸಭೆಯಲ್ಲಿ ಡಿಕೆಶಿ ಹೇಳಿಕೆ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಸರ್ಕಾರ ಕೊಟ್ಟ ಮಾತಿನಂತೆ ಒಳ ಮೀಸಲಾತಿ ಜಾರಿಗೆ ಬದ್ಧವಾಗಿದ್ದು, ಈ ಸಂಬಂಧ ನಿನ್ನೆ ಸಚಿವ ಸಂಪುಟ ಸಭೆಯಲ್ಲಿ, ನಿವೃತ್ತ ಹೈಕೋರ್ಟ್ ನ್ಯಾಯಮೂರ್ತಿಗಳ ನೇತೃತ್ವದ ಸಮಿತಿ ರಚಿಸಿ ಮೂರು ತಿಂಗಳಲ್ಲಿ ವರದಿ ನೀಡುವಂತೆ ಹೇಳಿದ್ದೇವೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಮಾದಿಗ ಸಮುದಾಯಕ್ಕೆ ಒಳಮೀಸಲು ಆದಷ್ಟು ಶೀಘ್ರ ಜಾರಿಗೆ ತರಬೇಕು ಎಂದು ಮಾಜಿ ಸಚಿವರಾದ ಎಚ್ ಆಂಜನೇಯ, ಶಿವಣ್ಣ, ರಾಜ್ಯಸಭೆ ಸದಸ್ಯ ಎಲ್ ಹನುಮಂತಯ್ಯ, ಮಾಜಿ ಸಂಸದ ಚಂದ್ರಪ್ಪ ಅವರ ನೇತೃತ್ವದ ನಿಯೋಗವು ಡಿಸಿಎಂ ಡಿ.ಕೆ. ಶಿವಕುಮಾರ್ ಅವರನ್ನು ಸದಾಶಿವನಗರ ನಿವಾಸದಲ್ಲಿ ಮಂಗಳವಾರ ಭೇಟಿ ಮಾಡಿ ಮನವಿ ಸಲ್ಲಿಸಿತು. ಈ ವೇಳೆ ಸಮಿತಿಗೆ ಮೂರು ತಿಂಗಳಿಗಿಂತ ಹೆಚ್ಚು ಕಾಲಾವಕಾಶ ನೀಡಬಾರದು. ಮೂರು ತಿಂಗಳ ನಂತರ ಶೀಘ್ರ, ಒಳಮೀಸಲಾತಿ ಜಾರಿಯಾಗಬೇಕು ಎಂದು ನಿಯೋಗವು ಉಪಮುಖ್ಯಮಂತ್ರಿಗಳ ಬಳಿ ಮನವಿ ಮಾಡಿತು.

ನಂತರ ಈ ಬಗ್ಗೆ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಶಿವಕುಮಾರ್ ಅವರು, ಸುಪ್ರೀಂ ಕೋರ್ಟ್ ಆದೇಶದಂತೆ ಒಳ ಮೀಸಲಾತಿ ಜಾರಿ ವಿಚಾರವಾಗಿ ನಾವು ಪ್ರಣಾಳಿಕೆಯಲ್ಲಿ ಭರವಸೆ ನೀಡಿದ್ದೆವು. ಚಿತ್ರದುರ್ಗದ ಸಮಾವೇಶದಲ್ಲೂ ನಾವು ಈ ವಿಚಾರವಾಗಿ ಜನರಿಗೆ ಮಾತು ಕೊಟ್ಟಿದ್ದು, ಅದಕ್ಕೆ ನಾವು ಬದ್ಧರಾಗಿದ್ದೇವೆ. ಒಳಮೀಸಲಾತಿ ವಿಚಾರದಲ್ಲಿ ಜನಸಂಖ್ಯೆ ಆಧಾರದ ಹಾಗೂ ಎಲ್ಲಾ ವರ್ಗಕ್ಕೂ ನ್ಯಾಯ ಸಿಗಬೇಕು ಎಂಬ ಉದ್ದೇಶದಿಂದ ಈ ತೀರ್ಮಾನ ಮಾಡಲಾಗಿದೆ ಎಂದು ತಿಳಿಸಿದರು. ಕಾಂಗ್ರೆಸ್ ಪಕ್ಷ ಸದಾ ಸಾಮಾಜಿಕ ನ್ಯಾಯಕ್ಕೆ ಸದಾ ಬದ್ಧವಾಗಿದೆ. ಸಂವಿಧಾನ ಆರಂಭದಿಂದ ಇಲ್ಲಿಯವರೆಗೂ ಸಾಮಾಜಿಕ ನ್ಯಾಯ ಕಾಪಾಡುತ್ತಾ ಬಂದಿದೆ. ಸರ್ವರಿಗೂ ಸಮಬಾಳು, ಸಮಪಾಲು ತತ್ವ ಮುಂದುವರಿಸಿಕೊಂಡು ಹೋಗುತ್ತೇವೆ. ನಮ್ಮ ಸರ್ಕಾರದ ತೀರ್ಮಾನವನ್ನು ಸ್ವಾಗತಿಸಿ ಪಕ್ಷಾತೀತವಾಗಿ ನಾಯಕರುಗಳು ಬಂದು ಅಭಿನಂದನೆ ಸಲ್ಲಿಸಿದ್ದಾರೆ ಎಂದು ಹೇಳಿದರು. ಸಮಿತಿ ವರದಿ ವಿಳಂಬವಾದರೆ ನೇಮಕಾತಿಯೂ ವಿಳಂಬವಾಗಲಿದೆ ಎಂದು ಕೇಳಿದಾಗ, ಮೂರು ತಿಂಗಳಲ್ಲಿ ವರದಿ ನೀಡಲು ನಾವು ಸೂಚಿಸಿದ್ದು, ಅವರು ಮೂರು ತಿಂಗಳಲ್ಲಿ ವರದಿ ನೀಡುವ ವಿಶ್ವಾಸವಿದೆ ಎಂದು ತಿಳಿಸಿದರು.

ಕೋವಿಡ್ ಅವಧಿಯ ಹಗರಣಗಳ ಸಂಬಂಧ ಕುನ್ಹಾ ಅವರ ವರದಿ ಮೇಲೆ ಉಪಸಮಿತಿ ಸಭೆ ಬಗ್ಗೆ ಕೇಳಿದಾಗ, ಕುನ್ಹಾ ಅವರ ವರದಿ ನೋಡಿ, ನನಗಗೇ ಕೊರೋನಾ ಬರುವಂತೆ ಕಾಣುತ್ತಿದೆ. ಅಷ್ಟು ಗಾಬರಿಯಾಗಿದೆ. ನಾವು ಅವರಿಂದ ಹೆಚ್ಚಿನ ಮಾಹಿತಿ ಕೇಳಿದ್ದೇವೆ. ವರದಿಯಿಂದಲೇ ಕೊರೋನಾ ಹರಡುವಂತಿದೆ. ಈ ಬಗ್ಗೆ ಆರೋಗ್ಯ ಸಚಿವರು ಮಾತನಾಡುತ್ತಾರೆ ಎಂದು ತಿಳಿಸಿದರು.



ಉದಯವಾಹಿನಿ ಚಿತ್ರ

**ಮೂರು ತಿಂಗಳ ನಂತರ ಜಾರಿ**

> **ಜಯನಗರಕ್ಕೆ ಅನುದಾನ ನೀಡಿಲ್ಲ ಎಂಬ ಬಿಜೆಪಿ ಶಾಸಕರ ಆರೋಪದ ಬಗ್ಗೆ ಕೇಳಿದಾಗ, ನಾನೇ ಅನುದಾನ ಕೊಟ್ಟಿಲ್ಲ. ಅವರು ನಮ್ಮ ಸರ್ಕಾರದ ಮೇಲೆ ಮಾಡಿರುವ ಆರೋಪಗಳನ್ನು ಸಾಬೀತುಪಡಿಸಲಿ ಅವರು ನಮ್ಮ ತೆರಿಗೆ, ನಮ್ಮ ಹಕ್ಕು ಪ್ರತಿಭಟನೆ ಮಾಡುತ್ತಾರಂತೆ ಎಂದು ಕೇಳಿದಾಗ, ತಡ ಮಾಡುವುದು ಬೇಡ, ಕೂಡಲೇ ಮಾಡಲಿ. ಅವರು ನನ್ನ ಭೇಟಿಗೆ ಬಂದಿದ್ದರು. ಅವರು ಪ್ರತಿಭಟನೆ ಮಾಡಬೇಕು ಎಂದು ತಿಳಿಸಿದರು.**

> **ಗಂಗಾ ಮತಸ್ಥರು ಬೀದಿಗೆ ಬರಲು ಡಿ.ಕೆ. ಶಿವಕುಮಾರ್ ಅವರೇ ಕಾರಣ ಎಂಬ ಕುಮಾರಸ್ವಾಮಿ ಅವರ ಹೇಳಿಕೆ ಬಗ್ಗೆ ಕೇಳಿದಾಗ, ಕುಮಾರಣ್ಣ ಚುನಾವಣೆ ಮಾಡುತ್ತಿದ್ದಾರೆ, ಮಾಡಲಿ. ನಮಗೆ ಕುಮಾರಣ್ಣ, ಗೌಡರ ಬಗ್ಗೆ ಮಾತನಾಡಲು ಸಮಯವಿಲ್ಲ. ನಾವುಂಟು, ಆ ಕ್ಷೇತ್ರ ಹಾಗೂ ಅದರ ಜನತೆಯ ಉದ್ಧಾರವುಂಟು. ನಾವು ಆ ಕೆಲಸ ಮಾಡುತ್ತೇವೆ ಎಂದು ತಿಳಿಸಿದರು.**

# ಅಂತರಾಳದಿಂದ... EDITORIAL

## ಬಾಲ್ಯ ವಿವಾಹಕ್ಕೆ ಕೊನೆ ಯಾವಾಗ

ವಿಜ್ಞಾನ, ತಂತ್ರಜ್ಞಾನಗಳು ಇಷ್ಟೆಲ್ಲ ಮುಂದುವರಿದಿದ್ದರೂ, ಆಧುನಿಕ ಜೀವನಶೈಲಿ ಸಮಾಜದಲ್ಲಿ ಕ್ರಮೇಣ ಬೇರು ಬಿಡುತ್ತಿರುವಾಗಲೂ, ಜಾಗತೀಕರಣಕ್ಕೆ ಭಾರತ ಒಗ್ಗಿಕೊಂಡು ಬಹುತೇಕ ಭಾರತಿಯರು ಮಾರುಕಟ್ಟೆ ಆರ್ಥಿಕತೆಯನ್ನು ಒಪ್ಪಿಕೊಂಡ ಮೇಲೂ ಅಜ್ಞಾನ ಮೌಲ್ಯಗಳು, ಶತಮಾನಗಳ ಹಿಂದಿನ ಕಂದಾಚಾರಗಳು ನಮ್ಮ ಸಮಾಜವನ್ನು ಇಂದಿಗೂ ನಿಯಂತ್ರಿಸುತ್ತಿರುವುದು ದುರಂತವಾಗಿದೆ. ಇಂತಹ ಅತ್ಯಂತ ಅಪಾಯಕಾರಿ ಕಂದಾಚಾರಗಳಲ್ಲಿ ಬಾಲ್ಯ ವಿವಾಹ ಪದ್ಧತಿಯೂ ಒಂದು ಇದರ ಸಂಪೂರ್ಣ ನಿಯಂತ್ರಣಕ್ಕಾಗಿ ಸರಕಾರ ಹಲವಾರು ಕ್ರಮಗಳನ್ನು ಕೈಗೊಂಡಿದ್ದರೂ ಈ ಬಾಲ್ಯ ವಿವಾಹಗಳು ದೇಶದಲ್ಲಿ ಅಲ್ಲಲ್ಲಿ ನಡೆಯುತ್ತಲೇ ಇವೆ ಎಂಬುದು ಆತಂಕಕಾರಿ ಸಂಗತಿಯಾಗಿದೆ.



ಬಾಲ್ಯ ವಿವಾಹ ಪದ್ಧತಿಯನ್ನು ತಡೆಯಲು ಸರಕಾರ ಕಾಯ್ದೆಗಳನ್ನು ಮಾಡಿ, ಆಗಾಗ ಈ ಕಾಯ್ದೆಗಳಿಗೆ ತಿದ್ದುಪಡಿ ತಂದು ಇನ್ನಷ್ಟು ಬಿಗಿಯಾದ ಕ್ರಮಗಳನ್ನು ಕೈಗೊಂಡಿದ್ದರೂ ಕೂಡ ಇವುಗಳು ಪರಿಣಾಮಕಾರಿಯಾಗಿ ಜಾರಿಯಾಗುತ್ತಿಲ್ಲ. ಹೀಗಾಗಿ ಬಾಲ್ಯ ವಿವಾಹಗಳು ನಡೆಯುತ್ತಲೇ ಇವೆ ಎಂದು ಸುಪ್ರೀಂ ಕೋರ್ಟ್ ಕೂಡ ಇತ್ತೀಚೆಗೆ ಕಳವಳವನ್ನು ವ್ಯಕ್ತಪಡಿಸಿದೆ. ಬೆಳೆಯುವ ಬಾಲಕರು ಹಾಗೂ ಬಾಲಕಿಯರ ಮೇಲೆ ಇದು ಅತ್ಯಂತ ಕೆಟ್ಟ ಪರಿಣಾಮವನ್ನು ಉಂಟು ಮಾಡುತ್ತದೆ ಎಂದು ಕೋರ್ಟ್ ಏನೂ ತಿಳಿಯದ ವಯಸ್ಸಿನಲ್ಲಿ ಆಟೋಟಗಳ ಲೋಕದಲ್ಲಿ ಇರುವ ಬಾಲಕಿಯರು ಮತ್ತು ಬಾಲಕರ ಇಷ್ಟಕ್ಕೆ ವಿರುದ್ಧವಾಗಿ ಈ ಬಾಲ್ಯ ವಿವಾಹಗಳು ನಡೆಯುತ್ತಿವೆ. ಇಂತಹ ಮಕ್ಕಳು ತಮ್ಮ ಬಾಲ್ಯವನ್ನು ಕಳೆದುಕೊಳ್ಳುವ ಜೊತೆಗೆ ಬದುಕಿನಲ್ಲಿ ಗೊಂದಲಕ್ಕೀಡಾಗುತ್ತಾರೆ. ವಿಶೇಷವಾಗಿ ಮದುವೆಯಾಗುವ ಗಂಡು ಮಕ್ಕಳು ಹೆಚ್ಚಿನ ಜವಾಬ್ದಾರಿಯನ್ನು ಹೊರ ಬೇಕಾಗುತ್ತದೆ. ಈ ಬಾಲ್ಯ ವಿವಾಹಗಳು ಮಕ್ಕಳ ಸ್ವಾತಂತ್ರ್ಯ ಸಂತೋಷವನ್ನು ಕಸಿದು ಕೊಳ್ಳುತ್ತವೆ. ಹಾಗಾಗಿ ಇವುಗಳನ್ನು ತಡೆಯುವ ನಿಟ್ಟಿನಲ್ಲಿ ಜಿಲ್ಲಾಮಟ್ಟದಲ್ಲಿ ಅಧಿಕಾರಿಗಳನ್ನು ನೇಮಕ ಮಾಡ ಬೇಕಾಗಿದೆ ಎಂದು ಹೇಳಿದ ಸುಪ್ರೀಂ ಕೋರ್ಟ್, ವಿಶೇಷವಾಗಿ ಬಾಲ್ಯ ವಿವಾಹವನ್ನು ತಡೆಯಲು ವಿಶೇಷ ಪೊಲೀಸ್ ಘಟಕಗಳನ್ನು ಬಳಸಿಕೊಳ್ಳಬೇಕು ಹಾಗೂ ಇಂತಹ ಪ್ರಕರಣಗಳನ್ನು ತ್ವರಿತವಾಗಿ ವಿಚಾರಣೆ ನಡೆಸಲು ವಿಶೇಷವಾದ ತ್ವರಿತ ನ್ಯಾಯಾಲಯಗಳನ್ನು ಆರಂಭಿಸಬೇಕಾಗಿದೆ ಎಂದು ಸರಕಾರಕ್ಕೆ ಸೂಚನೆ ನೀಡಿದೆ.

**ಬಾಲ್ಯ ವಿವಾಹಗಳನ್ನು ತಡೆಯಲು ಸರಕಾರ ಎಷ್ಟೇ ಕ್ರಮಗಳನ್ನು ಕೈಗೊಂಡಿದ್ದರೂ ಪೊಲೀಸರ ಕಣ್ಣುತಪ್ಪಿಸಿ ಇಂತಹ ಮದುವೆಗಳು ನಡೆಯುತ್ತಲೇ ಇವೆ. ಕಾನೂನನ್ನು ಇನ್ನಷ್ಟು ತಿದ್ದುಪಡಿ ತಂದು ಬಾಲ್ಯ ವಿವಾಹಕ್ಕೆ ಸಂಬಂಧಿಸಿದ ನಿಶ್ಚಿತಾರ್ಥವನ್ನು ನಿಷೇಧಿಸುವ ಕುರಿತು ಪರಿಶೀಲನೆ ನಡೆಸಬೇಕಾಗಿದೆ ಎಂದು ಸುಪ್ರೀಂ ಕೋರ್ಟ್ ಸಲಹೆ ನೀಡಿದೆ. ಈ ಕಾಯ್ದೆಯ ಅಡಿಯಲ್ಲಿ ದಂಡವನ್ನು ತಪ್ಪಿಸಿಕೊಳ್ಳಲು ನಿಶ್ಚಿತಾರ್ಥವನ್ನು ಬಳಸಿಕೊಳ್ಳಲಾಗುತ್ತಿದೆ. ಅವುಗಳನ್ನು ತಡೆಯಲು ನಿರ್ದಿಷ್ಟವಾದ ಕ್ರಮವನ್ನು ಕೈಗೊಳ್ಳಬೇಕಾದ ಅಗತ್ಯವಿದೆ ಎಂದು ಕೋರ್ಟ್ ಹೇಳಿದೆ.**

ಕೆಲವೆಡೆ ಸಾಮೂಹಿಕ ಮದುವೆಗಳು ನಡೆಯುವ ಸಂದರ್ಭಗಳಲ್ಲೂ ಆಯೋಜಕರ ಕಣ್ಣಪ್ಪಿಸಿ ಇಂತಹ ಮದುವೆಗಳು ನಡೆಯುತ್ತವೆ. ಪ್ರಭಾವಿ ರಾಜಕಾರಣಿಗಳು ಹಾಗೂ ಉದ್ಯಮಪತಿಗಳು ನಡೆಸುವ ಮದುವೆಗಳ ಸಂದರ್ಭಗಳಲ್ಲೂ ಪೊಲೀಸರ ಹಾಗೂ ಸಮಾಜದ ಹಿರಿಯರ ಕಣ್ಣು ತಪ್ಪಿಸಿ ಇಂತಹ ಮದುವೆಗಳು ನಡೆಯುತ್ತವೆ. ಕೆಲವು ಕಡೆ ರಾಜಕಾರಣಿಗಳು ತಮ್ಮ ರಾಜಕೀಯಕ್ಕೆ ಅನುಕೂಲವಾಗಲೆಂದು ಸಾಮೂಹಿಕ ಮದುವೆ ನಡೆಸುತ್ತಾರೆ. ಇಂತಹ ಸಂದರ್ಭಗಳಲ್ಲಿ ಪೊಲೀಸರು ಕೂಡ ನಿಷ್ಕ್ರಿಯರಾಗುತ್ತಾರೆ. ಕಾಯ್ದೆಯ ಪ್ರಕಾರ 21 ವರ್ಷಕ್ಕಿಂತ ಕಡಿಮೆ ವಯಸ್ಸಿನ ಗಂಡು ಮಕ್ಕಳು ಹಾಗೂ 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಹೆಣ್ಣು ಮಕ್ಕಳನ್ನು ವಿವಾಹ ಯೋಗ್ಯರಲ್ಲ ಎಂದು ಪರಿಗಣಿಸಲಾಗುತ್ತದೆ. ಆದರೆ ಇಂತಹ ಕಾಯ್ದೆಗೆ ಮತ್ತಷ್ಟು ತಿದ್ದುಪಡಿ ತರಲು ಸಂಸತ್ತಿನಲ್ಲಿ ವಿಧೇಯಕವನ್ನು ತಂದಿದ್ದರೂ ಸ್ಥಾಯಿ ಸಮಿತಿಗೆ ಪರಿಶೀಲಿಸಲು ಅದನ್ನು ವರ್ಗಾಯಿಸಲಾಗಿದೆ. ಆದರೆ ಇದನ್ನು ತ್ವರಿತವಾಗಿ ಪರಿಶೀಲನೆ ನಡೆಸದೆ ಮುಂದೂಡಲಾಗುತ್ತಿದೆ ಎಂದು ಸುಪ್ರೀಂಕೋರ್ಟ್ ಹೇಳಿದೆ.


ಮೋದಿ ಸರಕಾರ ಪದೇ ಪದೇ ಏಕರೂಪ ನಾಗರಿಕ ಸಂಹಿತ ಹಾಗೂ ತ್ರಿವಳಿ ತಲಾಖ್ ನಿಷೇಧ ಜಾರಿಗೆ ಕ್ರಮ ಮುಂತಾದವುಗಳ ಬಗ್ಗೆ ಪ್ರಚಾರ ಮಾಡುತ್ತ ತನ್ನ ಬೆನ್ನನ್ನು ತಾನೇ ತಟ್ಟಿಕೊಳ್ಳುತ್ತಿದ್ದರೂ ಬಾಲ್ಯ ವಿವಾಹಗಳನ್ನು ಕಟ್ಟುನಿಟ್ಟಾಗಿ ನಿರ್ಬಂಧಿಸಲು ಹೆಚ್ಚಿನ ಆಸಕ್ತಿಯನ್ನು ತೋರಿಸುತ್ತಿಲ್ಲ.

ಬಾಲ್ಯ ವಿವಾಹಗಳು ಯಾವುದೋ ಒಂದು ಪ್ರದೇಶಕ್ಕೆ ಯಾವುದೋ ಧರ್ಮ ಹಾಗೂ ಜಾತಿಗೆ ಸೀಮಿತವಾಗಿಲ್ಲ. ಎಲ್ಲಾ ಸಮುದಾಯಗಳಲ್ಲೂ ಇದು ವ್ಯಾಪಕವಾಗಿ ನಡೆಯುತ್ತಿವೆ. ಇಂತಹ ವಿಚಾರಗಳಲ್ಲಿ ನ್ಯಾಯಾಲಯಗಳು ಸರಕಾರಕ್ಕೆ ನಿರ್ದೇಶನವನ್ನು ಮಾತ್ರ ನೀಡಬಹುದು. ಆದರೆ ಈ ಸಮಸ್ಯೆಗಳಿಗೆ ನಿಜವಾದ ಪರಿಹಾರವನ್ನು ಕೋರ್ಟ್ ಹೊರಗೆ ಸಾಮಾಜಿಕ ಜೀವನದಲ್ಲಿ ಹುಡುಕಬೇಕಾಗಿದೆ.

ವಾಸ್ತವವಾಗಿ ಬಡತನ, ಹಿಂದುಳಿದಿರುವಿಕೆ ಮತ್ತು ಶಿಕ್ಷಣದ ಕೊರತೆಯಿಂದಾಗಿ ಬಾಲ್ಯ ವಿವಾಹಗಳು ನಡೆಯುತ್ತಿವೆ.

ಹಾಗಾಗಿ ಹೆಣ್ಣು ಮಕ್ಕಳಿಗೆ ಶಿಕ್ಷಣದ ಜೊತೆಗೆ ಸ್ವಾವಲಂಬನೆಯಿಂದ ಇಂತಹ ಅನಿಷ್ಠ ಪದ್ಧತಿಗಳನ್ನು ತೊಲಗಿಸಬಹುದು. ಬಾಲ್ಯವಿವಾಹ, ವರದಕ್ಷಿಣೆ, ಜಾತಿಪದ್ಧತಿಯಂತಹ ಅನಿಷ್ಟ ಮಾತ್ರವಲ್ಲ, ಅಮಾನವೀಯ ಕಂದಾಚಾರಗಳನ್ನು ತೊಲಗಿಸಲು ಸರಕಾರದ ಕ್ರಮಗಳು ಮಾತ್ರ ಸಾಲದು. ನಮ್ಮ ಸಮಾಜದ ಪ್ರಗತಿಪರ ಮಠಾಧೀಶರು, ಧಾರ್ಮಿಕ ನಾಯಕರು ಹಾಗೂ ಚಿಂತಕರು, ಪತ್ರಕರ್ತರು ಜನರಲ್ಲಿ ಜಾಗೃತಿ ಮೂಡಿಸಲು ಮುಂದಾಗಬೇಕು. ಆಗ ಮಾತ್ರವೇ ಮೌಢ್ಯ ಮತ್ತು ಕಂದಾಚಾರಗಳನ್ನು ಒದ್ದೋಡಿಸಿ ಹೊಸ ಭಾರತದ ನಿರ್ಮಾಣಕ್ಕೆ ಮಾರ್ಗ ಸುಗಮಗೊಳಿಸಬಹುದು.

# ರಾಮಾಯಣ



## ಶ್ರೀ ರಾಮನು ಆ ಸೊಪ ದೇಶವನ್ನು ಪಡೆದದ್ದು

• ಹಿಂದಿನ ಸಂಚಿಕೆಯಿಂದ 17ನೆಯ ಅಧ್ಯಾಯ

ವಿಶ್ವಾಮಿತ್ರಮುನಿಯು ಮಾರನೆಯ ದಿವಸ ಪ್ರಾತಃಕಾಲದಲ್ಲಿ ರಘುನಾಥಸ್ವಾಮಿಯನ್ನು ಕೊಂಡಾಡುತ್ತ ಗಂಭೀರಧ್ವನಿಯಿಂದ ಆತನನ್ನು ಕುರಿತು ಶ್ರೀರಾಮ, ನೀನು ಮಹಾತ್ಮನು ಮಹಾ ಕೀರ್ತಿವಂತನು, ನಿನ್ನ ಚರಿತ್ರದಿಂದ ನಾನು ಸುಪ್ರೀತನಾದೆನು. ಆದ್ದರಿಂದ ನನ್ನ ವಶವಾಗಿರುವ ಸಮಸ್ತ ಮಂತ್ರಾಸ್ತ್ರಗಳನ್ನೂ ಕೊಡುತ್ತೇನೆ ಆ ಅಸ್ತ್ರಗಳಿಂದ ಸಮಸ್ತ ದೇವಾಸುರ ಯಕ್ಷ ಗಂಧರ್ವರನ್ನೂ ಯುದ್ಧದಲ್ಲಿ ಪ್ರಯಾಸವಿಲ್ಲದೆ ಜಯಿಸಬಹುದು ಆದಕಾರಣ ನಿನಗೆ ಆ ಮಂತ್ರಾಸ್ತ್ರಗಳನ್ನು ಉಪದೇಶಮಾಡುತ್ತೇನೆ.

ದಿವ್ಯವಾದ ದಂಡಚಕ್ರ ಧರ್ಮಚಕ್ರ ಕಾಲಚಕ್ರ ವಿಷ್ಣುಚಕ್ರ ಇಂದ್ರಚಕ್ರ ವಜ್ರಾಸ್ತ್ರ ಶೈವಸಂಬಂಧವಾದ ತ್ರಿಶೂಲ, ಬ್ರಹ್ಮಶಿರಸ್ಸು ಐಷೀಕಾಸ್ತ್ರ ಬ್ರಹ್ಮಾಸ್ತ್ರ ಮೋದಕೀಶಿಖರಿಗಳೆಂಬ ಎರಡು ಗದೆಗಳು, ಧರ್ಮಪಾಶ ಕಾಲಪಾಶ ವರುಣಪಾಶ ಶುಷ್ಕಾಶನಿ ಆದ್ರಾಶನಿ ಎಂಬ ಸಿಡಿಲಿನ ಅಸ್ತ್ರಗಳು, ಪೈನಾಕಾಸ್ತ್ರ, ನಾರಾಯಣಾಸ್ತ್ರ ಆಗ್ನೇಯಾಸ್ತ್ರ ದೈವಾಸ್ತ್ರ ವಾಯವ್ಯಾಸ್ತ್ರ ಹಯಗ್ರೀವಾಸ್ತ್ರ ಕ್ರೌಂಚಾಸ್ತ್ರ ಶಕ್ತಿದ್ವಯಾಸ್ತ್ರ ಕಂಕಾಳಾಸ್ತ್ರ ಮುಸಲಾಸ್ತ್ರ ಕಪಾಲಾಸ್ತ್ರ ಕಂಕಣಾಸ್ತ್ರ ವಿದ್ಯಾಧರಾಸ್ತ್ರ ನಂದನಾಸ್ತ್ರ ಅಸಿರತ್ನಾಸ್ತ್ರ ಗಂಧರ್ವಾಸ್ತ್ರ ದೈವತಾಸ್ತ್ರ ಮಾನವಾಸ್ತ್ರ ಪ್ರಸ್ವಾಪನಾಸ್ತ್ರ ಪ್ರಶಮನಾಸ್ತ್ರ, ಸೌರಾಸ್ತ್ರ, ದರ್ಪಣಾಸ್ತ್ರ, ಶೋಷಣಾಸ್ತ್ರ ಸಂತಾಪನಾಸ್ತ್ರ, ವಿಲಾಪನಾಸ್ತ್ರ ಮದನಾಸ್ತ್ರ ದುರ್ಧರ್ಷಸ್ತ್ರ ಕಂದರ್ಪಾಸ್ತ್ರ ಪೈಶಾಚಾಸ್ತ್ರ ಮೋಹನಾಸ್ತ್ರ, ತಾಮಸಾಸ್ತ್ರ ಮೌಸಲಾಸ್ತ್ರ ಸಂವರ್ತಾಸ್ತ್ರ, ಪೌಷ್ಕಳಾಸ್ತ್ರ ಸತ್ಯಾಸ್ತ್ರ ಮಾಯಾಧರಾಸ್ತ್ರ ತೇಜಃಪ್ರಭಾವಾಸ್ತ್ರ, ಸೋಮಾಸ್ತ್ರ ಶಿಶಿರಾಸ್ತ್ರ, ಅತಿಭಯಂಕರವಾಗಿರುವಂಥ ತ್ವಾಷ್ಟಾಸ್ತ್ರ ವಾರುಣಾಸ್ತ್ರ ಶೀತೇಷ್ಟಸ್ತ್ರ ಮೊದಲಾದ ಮಂತ್ರಾಸ್ತ್ರಗಳನ್ನು ತೆಗೆದುಕೊ ಎಂದು ಹೇಳಿದನು. ಶ್ರೀರಾಮನು ಸ್ನಾನವನ್ನು ಮಾಡಿ ಶುಚಿಯಾಗಿ ಮೂಡಣ ಮುಖವಾಗಿ ನಿಂತು ಸಮಸ್ತ ಮಂತ್ರಜಾಲವನ್ನೂ ಉಪದೇಶಮಾಡಿಸಿಕೊಂಡು ಜಪವನ್ನು ಮಾಡುತ್ತಿದ್ದನು ಆಗ ಸಮಸ್ತ ಮಂತ್ರಾಸ್ತ್ರಗಳೂ ರಘುನಾಥನ ಸಮೀಪಕ್ಕೆ ಬಂದು ಕೈ ಮುಗಿದುಕೊಂಡು ಅತ್ಯಂತ ಸಂತೋಷದಿಂದ ಆತನನ್ನು ಕುರಿತು ಎಲೈ ರಘುನಾಥನೆ ನಾವು ನಿನ್ನ ಸೇವಕರು. ನಿನ್ನ ಸಮೀಪಕ್ಕೆ ಬಂದೆವು. ನಾವು ಮಾಡಬೇಕಾದ ಕಾರ್ಯವನ್ನು ಅಪ್ಪಣೆಮಾಡು ಎಂದು ಹೇಳಿ ಆತನ ವಶವಾದವು. ಶ್ರೀರಾಮನು ಅತ್ಯಂತ ಪ್ರೀತಿಯಿಂದ ವಿಶ್ವಾಮಿತ್ರಮುನಿಗೆ ಅಭಿವಂದಿಸಿ ಆತನ ಸಂಗಡ ಮುಂದಕ್ಕೆ ಹೊರಟನು

**ಶ್ರೀ ರಾಮನು ಅಸೊಪ ಸಂಹಾರವನ್ನು ಕಲಿತುದು**

ಆಮೇಲೆ ಶ್ರೀರಾಮನು ವಿಶ್ವಾಮಿತ್ರಮುನೀಶ್ವರನನ್ನು ಕುರಿತು ಮಹಾತ್ಮರೆ, ನಿಮ್ಮ ಕೃಪೆಯಿಂದ ಮಂತ್ರಾಸ್ತ್ರಗಳನ್ನು ಪಡೆದದ್ದರಿಂದ ಸಮಸ್ತ ದೇವತೆಗಳಿಂದಲೂ ಜಯಿಸಲು ಶಕ್ಕರಲ್ಲದವರನ್ನೂ ಜಯಿಸಲಾಪೆನು.

ಮುಂದುವರಿಯುವುದು...

# ದೈನಂದಿನ ಬದುಕಿನಲ್ಲಿ ಕನ್ನಡ



ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

ಅನ್ಯಪ್ರಾಂತೀಯರೊಡನೆ ಕನ್ನಡ ಸಂಸ್ಕೃತಿ-ಸಾಹಿತ್ಯ, ಕರ್ನಾಟಕದ ಪ್ರವಾಸಿ ಕೇಂದ್ರಗಳು, ವಿಶಿಷ್ಟ ತಿಂಡಿ-ತಿನಿಸು ಗಳು, ಉಡುಪುಗಳ ಬಗ್ಗೆ ಹೆಮ್ಮೆಯಿಂದ ಹೇಳಿಕೊಳ್ಳಿ. ಸ್ವಾಭಿಮಾನವಿರಲಿ; ಅಹಂಕಾರ ಬೇಡ. ಕನ್ನಡ ಭಾಷೆ ಸಂಸ್ಕೃತಿಗಳನ್ನು ಪರಿಚಯಿಸುವ ಪುಸ್ತಕಗಳನ್ನು ಓದಿ. ಈ ವಿಷಯಕ್ಕೆ ಸಂಬಂಧಿಸಿದಂತೆ ಬಂದಿರುವ ಇಂಗ್ಲಿಷ್ ಪುಸ್ತಕಗಳನ್ನು ಕೊಂಡು, ಇತರರೂ ಓದುವಂತೆ ಮಾಡಿ.

'ಕರ್ನಾಟಕದಲ್ಲಿರುವ ಎಲ್ಲಾ ವಾಣಿಜ್ಯ ಮತ್ತು ವ್ಯವಹಾರ ಸಂಸ್ಥೆಗಳ ನಾಮಫಲಕಗಳು ಕನ್ನಡದಲ್ಲಿಯೇ ಇರತಕ್ಕದ್ದು. ಎಲ್ಲೆಲ್ಲಿ ಇತರ ಭಾಷೆಗಳನ್ನು ಬಳಸಬೇಕಾಗುತ್ತದೆಯೋ ಅಲ್ಲೆಲ್ಲಾ ಮೊದಲು ಕನ್ನಡದಲ್ಲಿ ಪ್ರಧಾನವಾಗಿ ಬರೆದು ನಂತರ ಇತರ ಭಾಷೆಗಳಲ್ಲಿ ಅದರಡಿ ಬರೆಯತಕ್ಕದ್ದು ಎಂದು '11-1-1985 2412 ನಾಮಫಲಕ ಪ್ರದರ್ಶನ' ಆಜ್ಞೆ ಹೇಳುತ್ತದೆ 20-1-1986ರ 26-ಕಾನೂನು ಉಲ್ಲಂಘನೆ ದಂಡ'ದ ಆಜ್ಞೆಯ ಪ್ರಕಾರ ಕನ್ನಡವನ್ನು ಪ್ರಧಾನವಾಗಿ ಬಳಸದಿರುವುದು ಶಿಕ್ಷಾರ್ಹ ಅಪರಾಧ. ಇದು ನಿಮಗೆ ತಿಳಿದಿರಲಿ.

ಡಾ. ಸರೋಜಿನಿ ಮಹಿಷಿ ವರದಿಯನ್ನು ಸರ್ಕಾರ ಒಪ್ಪಿದೆ. ಅದರನ್ವಯ 'ಡಿ' ವರ್ಗದ ಹುದ್ದೆಗಳಲ್ಲಿ 100%, 'ಸಿ' ವರ್ಗದ ಹುದ್ದೆಗಳಲ್ಲಿ ಶೇಕಡ 80 ರಷ್ಟು ಸ್ಥಳೀಯರಿಗೇ ಕೊಡಬೇಕು. ಸ್ಥಳೀಯ ಎಂದರೆ ಕರ್ನಾಟಕದಲ್ಲಿ 15 ವರ್ಷಗಳು ವಾಸವಾಗಿದ್ದು, ಕನ್ನಡ ಓದಲು ಬರೆಯಲು ಬರಬೇಕು. ಇದನ್ನು ಪಾಲಿಸದಿದ್ದರೆ ಕಾನೂನು ಉಲ್ಲಂಘನೆ ಆಗುತ್ತದೆ.

ಕನ್ನಡದ, ಕನ್ನಡಿಗನ ವಿಷಯ ಬಂದಾಗ ಭೇದಭಾವ ಮರೆತು ಒಂದಾಗಿ, ಒಗ್ಗಟ್ಟನ್ನು ಎಂದೂ ಮರೆಯಬೇಡಿ.

ಭಿನ್ನಾಭಿಪ್ರಾಯಗಳಿದ್ದರೆ ಒಳಗೇ ಪರಿಹರಿಸಿಕೊಳ್ಳಿ.

ಕನ್ನಡದ ಹೆಸರಿನಲ್ಲಿ ಹಣ ಮಾಡಿಕೊಳ್ಳುವುದು ತಾನ್ನುಡಿಗೆ ಬಗೆಯಬಹುದಾದ ಒಂದು ದ್ರೋಹವೆಂಬುದನ್ನು ನೆನಪಿಡಿ; ಇತರರಿಗೂ ತಿಳಿಸಿ. ಅಂತಹ ನಿದರ್ಶನ ಗಮನಕ್ಕೆ ಬಂದರೆ ನಿರ್ದಾಕ್ಷಿಣ್ಯವಾಗಿ ತಡೆಯಿರಿ. ನಿಮ್ಮ ಪ್ರದೇಶದಲ್ಲಿ (ಬಡಾವಣೆ, ವಿದ್ಯಾಸಂಸ್ಥೆ, ಕಾರ್ಖಾನೆ ಕಚೇರಿ) ಕನ್ನಡದ ವಾತಾವರಣ ಮೂಡಿಸಲು ನಿಮ್ಮ ಸಂಘಟನೆಯಿಂದ ಮಾತ್ರ ಸಾಧ್ಯ.

ಎಲ್ಲಾ ಸಭೆಗಳ ಎಲ್ಲಾ ಕಾವ್ಯಕಲಾಪಗಳೂ ಪೂರ್ತಿ ಕನ್ನಡದಲ್ಲೇ ಇರಲಿ. ಸಭೆಗಳಲ್ಲಿ ಕನ್ನಡ ಹಾಡುಗಳು ಮಾತ್ರ ಕೇಳಿಬರಲಿ.

ಕನ್ನಡದ ಹಿರಿಯರನ್ನು ಕರೆಯಿಸಿ, ಗೌರವಿಸಿ.

ರಾಜ್ಯೋತ್ಸವ, ರಾಮೋತ್ಸವ, ಗಣೇಶೋತ್ಸವ ಇವೇ ಮೊದಲಾದ ಉತ್ಸವಗಳಿಗೆ ಕರ್ನಾಟಕದ ಗಾಯಕರನ್ನೇ ಕರೆಯಿಸಿ. ಸಂಗೀತ ಕಚೇರಿಗಳಲ್ಲಿ ಹಾಡುವ ಹೆಚ್ಚಿನ ಸಂಖ್ಯೆಯ ಕೃತಿಗಳು ಕನ್ನಡದವೇ ಆಗಿರಲು ಒತ್ತಾಯಿಸಿ. ಅನ್ಯ ಭಾಷೆಯ ಕೃತಿಗಳೇ ಹೆಚ್ಚಾಗಿ ಕೇಳಿಬಂದಲ್ಲಿ ಅಂಥವನ್ನು ನಿಲ್ಲಿಸಲು ಹಿಂದು ಮುಂದು ನೋಡಬೇಡಿ.

ನಿಮ್ಮ ಕ್ಷೇತ್ರದಿಂದ ಕನ್ನಡಿಗರೇ, ಅದರಲ್ಲೂ ಕನ್ನಡಪರ ವ್ಯಕ್ತಿಗಳೇ ಆಯ್ಕೆಯಾಗುವಂತೆ ಸಹಕರಿಸಿ. ಕಾರ್ಮಿಕ ಸಂಘಗಳಲ್ಲಿಯೂ ಕನ್ನಡಿಗರೇ ಆಯ್ಕೆಯಾಗುವಂತೆ ಯತ್ನಿಸಿ. ಆಗಾಗ್ಗೆ ನಿಮ್ಮ ಸಂಘದ ಸದಸ್ಯರೆಲ್ಲ ಕರ್ನಾಟಕದ ಐತಿಹಾಸಿಕ ಸ್ಥಳಗಳಿಗೆ ಪ್ರವಾಸ ಹೋಗಿ, ಕರ್ನಾಟಕದ ಉಜ್ವಲ ಇತಿಹಾಸದ ದರ್ಶನದ ಮೂಲಕ ನಿಮಗೆ ಕನ್ನಡ ತಾಯಿಯ ದರ್ಶನವೂ ಆಗುತ್ತದೆ. ಇನ್ನೊಂದು ಸಂಘಟನೆ ಕನ್ನಡದ ಹಿತರಕ್ಷಣೆಗೆ ಕೇಳಿಕೊಂಡಾಗ ಅಥವಾ ಸ್ವಇಚ್ಛೆಯಿಂದ ಅದರ ಜೊತೆ ಮನಃಪೂರ್ವಕ ಸಹಕರಿಸಿ, ನೀವೂ ಅವರ ಸಹಾಯವನ್ನು ಪಡೆಯಿರಿ.

**ಕನ್ನಡಪರ ಚಳವಳಿ ಸಭೆ**

ಪರಸ್ಪರ ಸಂದೇಹ, ಅಸೂಯೆ, ಸ್ಪರ್ಧೆ ಬೇಡ. ಕನ್ನಡಪರ ಚಳವಳಿಗಳಲ್ಲಿ, ಸಭೆ, ಸಮ್ಮೇಳನಗಳಲ್ಲಿ 1. ಭಾಗವಹಿಸಿ. ನಿಮ್ಮ ಸಂಘ ಟನೆಯ ಹೆಸರು, ಬಾವುಟ ಅಲ್ಲೆಲ್ಲ ರಾರಾಜಿಸಲಿ.

ಕನ್ನಡಕ್ಕೆ, ಕನ್ನಡಿಗನಿಗೆ ಯಾವುದೇ ಅನ್ಯಾಯವಾದರೂ ಸಿಡಿದೇಳಿ. ನಿಮ್ಮ ಪ್ರದೇಶದ ನಿರಕ್ಷರಿಗಳಿಗೆ ಕನ್ನಡ ಕಲಿಸುವ ವ್ಯವಸ್ಥೆ ಮಾಡಿ. ನಿಮ್ಮ ಬಡಾವಣೆಗಳಿಗೆ, ರಸ್ತೆಗಳಿಗೆ, ಹೊಸಹಳ್ಳಿಗಳಿಗೆ ಕರ್ನಾಟಕದ ಹೆಸರಿಡಿ. (ಕವಿಗಳ, ಸಂತರ, ರಾಜನೀತಿ ವಿಶಾರದರ, ದೇಶಪ್ರೇಮಿಗಳ, ನದಿಗಳ ಹೆಸರುಗಳು ಆಗ ಬಹುದು). ಆ ಹೆಸರುಗಳು ಕನ್ನಡತನದ ಕಂಪನ್ನು ಹರಡುವಂತಿರಬೇಕು.

ಮಹಿಷಿ ವರದಿ, ಆಡಳಿತ ಭಾಷಾ ಆಜ್ಞೆ, ನಾಮಫಲಕದ ಆಜ್ಞೆ, ಇಂತಹ ಸರ್ಕಾರದ ಹಲವು ಒಳ್ಳೆಯ ವರದಿ-ಆಜ್ಞೆಗಳು ಹೊರಬಂದಿವೆ.

ಅವನ್ನು ನೀವು ತಿಳಿದು ಕೊಳ್ಳಬೇಕು. ನೀವು ತಿಳಿಯದಿದ್ದರೆ ಸರ್ಕಾರವೂ ಅತ್ತ ಗಮನ ಹರಿಸುವುದಿಲ್ಲ. ನಿಮ್ಮ ಸಂಘಟನೆ ತಾನೇ ಕನ್ನಡದ ಕಾವಲು ಸಮಿತಿಯೂ ಆಗಿರಲಿ, ಜಾಗೃತ ದಳವೂ ಆಗಿರಲಿ, ಕನ್ನಡ ಸೇನೆಯೂ ಆಗಿರಲಿ.

### ಸಂಘಟನೆಗೆ ಸಂಬಂಧಿಸಿದಂತೆ

- **ಕರ್ನಾಟಕದ ಇಂದಿನ ಉಳಿವು, ಬೆಳವಣಿಗೆಗಳಿಗೆ ಕನ್ನಡಿಗರ ಸಂಘಟನೆಯೊಂದೇ ಮಾರ್ಗವೆಂಬುದನ್ನು ನೆನಪಿಡಿ.**
- **ಹಳ್ಳಿ, ನಗರ, ಬಡಾವಣೆ, ಶಾಲಾ ಕಾಲೇಜು, ಕಾರ್ಖಾನೆ. ಕಚೇರಿಗಳಲ್ಲಿ ಕನ್ನಡಪರ ಸಂಘ, ಸಂಸ್ಥೆಗಳನ್ನು ಸ್ಥಾಪಿಸಿ ಈ ವಿಷಯದಲ್ಲಿ ಪೈಪೋಟಿ ಇಲ್ಲದಂತೆ ನೋಡಿಕೊಳ್ಳಿ.**
- **ಎಲ್ಲಾ ಸಂಘ ಸಂಸ್ಥೆಗಳಿಗೆ ಸರಿಯಾದವರನ್ನು ಆಯ್ಕೆಮಾಡಿ. ಒಮ್ಮೆ ಆಯ್ಕೆ ಮಾಡಿದ ಮೇಲೆ ಅವರ ಜೊತೆ ಸಹಕರಿಸಿ, ಅವರಿಂದ ಕೆಲಸ ಮಾಡಿಸಿ. ಪದಾಧಿಕಾರಿಗಳ ಪ್ರಾಮಾಣಿಕತೆ ಕ್ರಿಯಾಶೀಲತೆಗಳು ಸದಸ್ಯರ ಎಚ್ಚರ ವನ್ನವಲಂಬಿಸಿವೆ.**
- **ಸಂಘ ಸಂಸ್ಥೆಗಳ ಧ್ಯೇಯವಾಕ್ಯ ಕನ್ನಡ, ಕನ್ನಡಿಗ, ಕರ್ನಾಟಕ. ಇವುಗಳ ಹಿತಚಿಂತನೆಯೊಂದೇ ಅವುಗಳ ಮೊದಲು ಮತ್ತು ಕೊನೆಯ ಆದರ್ಶವಾಗಿರಲಿ.**






## ಸಾಮಾಜಿಕ ಕಳಕಳಿ

ಹೆಚ್.ಎಸ್.ಪ್ರತಿಮಾ ಹಾಸನ್
ಸಾಹಿತಿ,ಶಿಕ್ಷಕಿ,ಸಾಮಾಜಿಕ ಚಿಂತಕಿ.ಹಾಸನ

### ದಿನಕ್ಕೊಂದು ಮುಕ್ತಕ -10

ಮಾನವನು ಸಂತಸದಿ ಪ್ರೀತಿಯನು ಹಂಚುತಿರೆ
ದಾನವದು ಒಂಟಿಯಲಿ ಇರುವವರಿಗೆ
ಮಾನಸಿಕ ಯಾತನೆಯ ಚಿಂತೆಯಲಿ ನಡೆಯದಿರೆ
ಗಾನವದು ಇರದಿರಲು ಲಕ್ಷ್ಮಿ ದೇವಿ....

ಈ ಮೇಲಿನ ಮುಕ್ತಕದಂತೆ ಮಾನವನು ಸಂತೋಷದಿಂದ ಪ್ರೀತಿಯಿಂದ ಜೀವಿಸಬೇಕು. ಎಲ್ಲರಿಗೂ ಪ್ರೀತಿ ವಿಶ್ವಾಸವನ್ನು ಹಂಚಬೇಕು. ದಾನವನ್ನು ಪ್ರೀತಿಯಾಗಿ ನೀಡಬೇಕು. ಅದರಲ್ಲೂ ಒಂಟಿಯಾಗಿರುವವರಿಗೆ ಪ್ರೀತಿ ವಿಶ್ವಾಸದ ಅವಶ್ಯಕತೆ ಇರುತ್ತದೆ. ಮಾನಸಿಕ ಯಾತನೆಯ ಚಿಂತೆಯಲ್ಲಿ ನಡೆಯದಿರಲಿ ಅದು ಮನುಷ್ಯನ ಮನಸ್ಸಿಗೆ ಬಹಳಷ್ಟು ತೊಂದರೆ ಏನು ಉಂಟು ಮಾಡುತ್ತದೆ. ಅದೇ ಗುಣಗಾನ ಇರಬಾರದೆಂಬುದು. ಈ ಮುಕ್ತ ಕದ ಅರ್ಥ. ಮಾನಸಿಕ ಖಿನ್ನತೆಯು ಹಲವಾರು ಸಮಸ್ಯೆಗಳಿಗೆ ಎಡೆ ಮಾಡಿಕೊಡುತ್ತದೆ. ಹಲವು ಜನಗಳನ್ನು ದೂರಮಾಡುತ್ತದೆ. ನಮಗೆ ಮಾನಸಿಕ ಖಿನ್ನತೆ ಇದೆ ಎಂದರೆ ಮನಸ್ಸು ದುರ್ಬಲವಾಗಿದೆ ಎಂದರ್ಥ. ಮಾನಸಿಕ ಖಿನ್ನತೆಯು ದುರ್ಬಲ ಮನಸ್ಥಿತಿ ಮತ್ತು ಚಟುವಟಿಕೆಗಳ ಬಗ್ಗೆ ಕಡಿಮೆ ಒಲವಿರುವ ಸ್ಥಿತಿ. ಇದು ವ್ಯಕ್ತಿಯ ಆಲೋಚನೆಗಳು, ನಡವಳಿಕೆ, ಪ್ರೇರಣೆ, ಭಾವನೆಗಳು ಮತ್ತು ಯೋಗಕ್ಷೇಮದ ಪ್ರಜ್ಞೆಯ ಮೇಲೆ ಪರಿಣಾಮ ಬೀರಬಹುದು. ಮನಸ್ಸು ಎಂಬುದು ಸೂಕ್ಷ್ಮವಾದದ್ದು. ಇಂತಹ ಸೂಕ್ಷ್ಮವಾದ ಮನಸ್ಸಿಗೆ ನೋವಾದರೆ ಅದನ್ನು ತಡೆಯುವಂತಹ ಶಕ್ತಿಯ ಅದಕ್ಕಿಲ್ಲ. ಇದು ದುಃಖ, ಆಲೋಚನೆ ಮತ್ತು ಏಕಾಗ್ರತೆಯ ತೊಂದರೆ ಮತ್ತು ಹಸಿವು ಮತ್ತು ನಿದ್ರೆಯಲ್ಲಿ ಗಮನಾರ್ಹ ಹೆಚ್ಚಳ ಅಥವಾ ಇಳಿಕೆಯನ್ನು ಒಳಗೊಂಡಿರಬಹುದು.



# ಜಯನಗರ ಹೊರತು ಪಡಿಸಿ ಬೆಂಗಳೂರು ರಸ್ತೆಗಳ ಅಭಿವೃದ್ಧಿಗೆ

## 10 ಕೋಟಿ ರೂ ಮಂಜೂರು: ವಿವಾದ ಹುಟ್ಟು ಹಾಕಿದ ಡಿಸಿಎಂ ಆದೇಶ

• ಉದಯವಾಹಿನಿ, ಬೆಂಗಳೂರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಪ್ರತಿ ವಿಧಾನಸಭಾ ಕ್ಷೇತ್ರದ ರಸ್ತೆಗಳ ಅಭಿವೃದ್ಧಿಗೆ ಉಪಮುಖ್ಯಮಂತ್ರಿ ಹಾಗೂ ಬೆಂಗಳೂರು ಅಭಿವೃದ್ಧಿ ಸಚಿವ ಡಿ.ಕೆ.ಶಿವಕುಮಾರ್ ಅವರು ನೀಡಿರುವ ಇತ್ತೀಚಿನ ಆದೇಶವು ಪ್ರಮುಖ ವಿರೋಧ ಪಕ್ಷವಾದ ಬಿಜೆಪಿಗೆ ಚರ್ಚೆ ಮಾಡಲು ಅವಕಾಶ ಒದಗಿಸಿಕೊಟ್ಟಿದೆ.



ಬಿಜೆಪಿ ಶಾಸಕ ಪ್ರತಿನಿಧಿಸುವ ಜಯನಗರ ವಿಧಾನಸಭಾ ಕ್ಷೇತ್ರವನ್ನು ಈ ಅನುದಾನ ಹಂಚಿಕೆಯಿಂದ ಹೊರಗಿಟ್ಟಿರುವುದು ವ್ಯಾಪಕ ಟೀಕೆಗೆ ಕಾರಣವಾಗಿದೆ. ಸರ್ಕಾರದ ಕ್ರಮಗಳು ಸೇಡಿನ ರಾಜಕಾರಣಕ್ಕೆ ಸಮಾನವಾಗಿದೆ, ಕಾಂಗ್ರೆಸ್‌ಗೆ ಮತ ಹಾಕದ ನಾಗರಿಕರನ್ನು ಸರ್ಕಾರ ಶಿಕ್ಷಿಸುತ್ತಿದೆ ಎಂದು ಬಿಜೆಪಿ ಆರೋಪಿಸಿದೆ. ಡಿಸಿಎಂ ಬ್ರ್ಯಾಂಡ್ ಬೆಂಗಳೂರಿನ ಬಗ್ಗೆ ಮಾತನಾಡುತ್ತಾರೆ. ಅವರ ಬ್ರ್ಯಾಂಡ್ ಬೆಂಗಳೂರು ಕನಸು ಜಯನಗರವನ್ನು ಹೊರತುಪಡಿಸುತ್ತದೆಯೇ ಎಂದು ಜಯನಗರ ಶಾಸಕ ಸಿ.ಕೆ.ರಾಮಮೂರ್ತಿ ಪ್ರಶ್ನಿಸಿದ್ದಾರೆ.


**ಬಿಜೆಪಿಗೆ ಚರ್ಚೆ ಮಾಡಲು ಅವಕಾಶ**

ತಮ್ಮ ಕ್ಷೇತ್ರಕ್ಕೆ ಉದ್ಯಾನವನಗಳು, ರಸ್ತೆಗಳು ಮತ್ತು ಚರಂಡಿಗಳನ್ನು ನಿರ್ವಹಿಸಲು ಹಣದ ಅಗತ್ಯವಿದೆ ಎಂದು ಅವರು ಹೇಳಿದರು. ಇದು ಕಾಂಗ್ರೆಸ್ ಸರ್ಕಾರದ ಸೇಡಿನ ರಾಜಕಾರಣವನ್ನು ಎತ್ತಿ ತೋರಿಸುತ್ತದೆ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಹೇಳಿದ್ದಾರೆ. ಬೆಂಗಳೂರಿನ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 10 ಕೋಟಿ ರೂ. ಹಾಗೂ ಬೆಂಗಳೂರು ನಗರ ಜಿಲ್ಲೆಯ ಭಾಗವಾಗಿರುವ ಆನೇಕಲ್‌ಗೆ 5 ಕೋಟಿ ರೂ. ಸೇರಿದಂತೆ ಒಟ್ಟು 265 ಕೋಟಿ ರೂ ಅನುದಾನ ಮಂಜೂರು ಮಾಡಲು ಡಿಸಿಎಂ ಡಿ.ಕೆ ಶಿವಕುಮಾರ್ ಆದೇಶ ಹೊರಡಿಸಿದ್ದಾರೆ. ಬಿಬಿಎಂಪಿಯ ಹಿರಿಯ ಅಧಿಕಾರಿಯೊಬ್ಬರು ಆದೇಶಕ್ಕೆ ಸ್ಪಷ್ಟನೆ ನೀಡಿದ್ದಾರೆ, ಕೆಲವು ಕಾರಣಗಳಿಂದ ಈ ಗೊಂದಲ ಉಂಟಾಗಿದೆ, ತಾರತಮ್ಯವಿಲ್ಲದೆ ಹಣ ಮಂಜೂರು ಮಾಡಲಾಗುವುದು ಎಂದು ತಿಳಿಸಿದ್ದಾರೆ.

ಯಲಹಂಕ ವಿಧಾನಸಭೆಯನ್ನು ಎರಡು ಬಾರಿ ಆದೇಶದಲ್ಲಿ ಉಲ್ಲೇಖಿಸಲಾಗಿದೆ, ಇದು ಸಮಸ್ಯೆಗೆ ಕಾರಣ ಎಂದು ನಾನು ನಂಬುತ್ತೇನೆ. ಡಿಸಿಎಂ ಬೆಂಗಳೂರಿನ ಅಭಿವೃದ್ಧಿ ಗುರಿ ಹೊಂದಿದ್ದು, ತಾರತಮ್ಯ ಮಾಡುವುದಿಲ್ಲ. ದೋಷಗಳಿಲ್ಲದ ಪರಿಷ್ಕೃತ ಆದೇಶವನ್ನು ಶೀಘ್ರದಲ್ಲೇ ಹೊರಡಿಸಲಾಗುವುದು ಎಂದಿದ್ದಾರೆ. ಬೆಂಗಳೂರಿನ ರಸ್ತೆಗಳ ಕಳಪೆ ಸ್ಥಿತಿಯಿಂದಾಗಿ ಹಣ ಬಿಡುಗಡೆ ಮಾಡಲು ನಿರ್ಧರಿಸಲಾಗಿದೆ, ಕಳೆದ ವಾರದ ದಾಖಲೆಯ ಮಳೆಯ ನಂತರ ರಸ್ತೆಗಳು ಹದಗೆಟ್ಟಿದೆ, ಇದು ಸಾಮಾನ್ಯ ಜೀವನದ ಮೇಲೆ ತೀವ್ರ ಪರಿಣಾಮ ಬೀರಿತ್ತು. ವಿಶೇಷವಾಗಿ ಉತ್ತರ ಬೆಂಗಳೂರು ಮತ್ತು ಮಹದೇವಪುರ, ಬೊಮ್ಮನಹಳ್ಳಿ ಮತ್ತು ಸರ್ಜಾಪುರ ರಸ್ತೆಯ ಐಟಿ ಬೆಲ್ಟ್‌ಗಳಲ್ಲಿ ಭಾರೀ ಮಳೆಯಿಂದಾಗಿ ಸಾವಿರಾರು ಗುಂಡಿಗಳು ಮತ್ತೆ ತಲೆ ಎತ್ತಿದ್ದು, ವಾಹನ ಸವಾರರು ತೀವ್ರ ತೊಂದರೆ ಅನುಭವಿಸುವಂತಾಗಿದೆ.

# ರಾತ್ರೋರಾತ್ರಿ ರೈತರ ಜಮೀನು ವಕ್ಫ್ ಆಸ್ತಿ ಎಂದು ಘೋಷಣೆ

• ಉದಯವಾಹಿನಿ, ಬೆಂಗಳೂರು



**ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಪ್ರಶ್ನೆ**

ತಲತಲಾಂತರಗಳಿಂದ ಬಂದಿರುವ ಪಿತ್ರಾರ್ಜಿತ ಆಸ್ತಿಯನ್ನು ರಾತ್ರೋರಾತ್ರಿ ವಕ್ಫ್ ಆಸ್ತಿ ಎಂದು ಘೋಷಿಸಲಾಗಿದೆ. ರೈತರ ಜಮೀನು ವಕ್ಫ್ ಪಾಲಾಗಿದೆ. ರೈತರು ಬೀದಿಗೆ ಬಂದರೆ ಏನು ಮಾಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಪ್ರಶ್ನಿಸಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ವಿಜಯೇಂದ್ರ, ರಾಜ್ಯ ಸರ್ಕಾರ ಮಣ್ಣು ತಿನ್ನುವ ಕೆಲಸ ಮಾಡುತ್ತಿದೆ. ರೈತರ ಕೃಷಿ ಭೂಮಿಯನ್ನು ವಕ್ಫ್ ಬೋರ್ಡ್‌ಗೆ ವರ್ಗಾಯಿಸಿದೆ. ಈ ಬಗ್ಗೆ ಬಿಜೆಪಿ ಹೋರಾಟ ನಡೆಸಲಿದೆ. ರೈತರ ಪರ ನಾವು ನಿಂತಿದ್ದೇವೆ. ಅವರೊಂದಿಗೆ ಧ್ವನಿಗೂಡಿಸುತ್ತೇವೆ ಎಂದರು. ಅಲ್ಪಸಂಖ್ಯಾತರನ್ನು ಎತ್ತಿಕಟ್ಟುವ ಕೆಲಸವನ್ನು ಕಾಂಗ್ರೆಸ್ ಸರ್ಕಾರ ಮಾಡುತ್ತಿದೆ. ಈ ಹಿಂದಿನಿಂದಲೂ ಕಾಂಗ್ರೆಸ್ ಜಾತಿ, ಧರ್ಮದ ಆಧಾರದಲ್ಲಿ ವಿಭಜನೆ ಕೆಲಸ ಮಾಡುತ್ತಿದೆ. ಸಚಿವ ಜಮೀರ್ ಅಹ್ಮದ್ ನೇತೃತ್ವದಲ್ಲಿ ಇಂದು ರಾಜ್ಯದಲ್ಲಿ ಬೆಂಕಿ ಹಚ್ಚುವ ಕೆಲಸ ನಡೆಯುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ವಿಜಯಪುರದ ಪ್ರತಿ ತಾಲ್ಲೂಕುಗಳಿಗೂ ಬಿಜೆಪಿ ತಂಡ ಭೇಟಿ ಕೊಡಲಿದೆ.

ರೈತರ ಸಮಸ್ಯೆ, ಸಂಕಷ್ಟ ಆಲಿಸಲಿದೆ. ರೈತರಿಗೆ ಕಾನೂನು ಸಹಾಯದಿಂದ ಹಿಡಿದು ಯಾವುದೇ ಸಹಾಯವನ್ನು ಬೇಕಾದರೂ ಬಿಜೆಪಿ ಕೊಡಲಿದೆ.

ರೈತರಿಗೆ ಧೈರ್ಯ ತುಂಬುವ ಕೆಲಸವನ್ನು ಬಿಜೆಪಿ ಮಾಡಲಿದೆ. ರೈತರೊಂದಿಗೆ ಗಟ್ಟಿಯಾಗಿ ಬಿಜೆಪಿ ನಿಲ್ಲಲಿದೆ ಎಂದು ಹೇಳಿದರು.

# ಇಡಿಯಿಂದ ಬಂಧನ ಭೀತಿ: ಮುಡಾ ಮಾಜಿ ಆಯುಕ್ತ ನಾಪತ್ತೆ

• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ-ಇಡಿ ತನಿಖೆಯನ್ನು ಚುರುಕುಗೊಳಿಸಿದೆ. ಮುಡಾ ಹಗರಣ ಪ್ರಕರಣ ದಲ್ಲಿ ಭಾಗಿಯಾಗಿರುವ ಆರೋಪದಲ್ಲಿ ಮಾಜಿ ಆಯುಕ್ತರು, ಬಿಲ್ಡರ್ ಗಳ ಮನೆ ಮೇಲೆ ಇಡಿ ಅಧಿಕಾರಿಗಳು ದಾಳಿ ಮುಂದುವರೆಸಿದ್ದು, ಪರಿಶೀಲನೆ ನಡೆಸಿದ್ದಾರೆ. ಈ ನಡುವೆ ಮುಡಾ ಮಾಜಿ ಆಯುಕ್ತ ದಿನೇಶ್ ಕುಮಾರ್ ನಾಪತ್ತೆಯಾಗಿದ್ದಾರೆ.

ನಿನ್ನೆ ಮುಡಾ ಮಾಜಿ ಆಯುಕ್ತ ಡಾ.ನಟೇಶ್, ದಿನೇಶ್ ಕುಮಾರ್, ಬಿಲ್ಡರ್ ಮಂಜುನಾಥ್ ಅವರ ಬೆಂಗಳೂರಿನ ಮನೆಗಳ ಮೇಲೆ ಇಡಿ ಅಧಿಕಾರಿಗಳು ದಾಳಿ ನಡೆಸಿ ಪರಿಶೀಲನೆ ನಡೆಸಿದ್ದರು. ಮುಡಾ ಮಾಜಿ ಆಯುಕ್ತ ದಿನೇಶ್ ಕುಮಾರ್ ಅವರ ಮನೆ ಮೇಲೆ ಇಡಿ ಅಧಿಕಾರಿಗಳು ದಾಳಿ ನಡೆಸಿದ್ದ ವೇಳೆ ದಿನೇಶ್ ಕುಮಾರ್ ವಾಕಿಂಗ್‌ಗೆ ಹೋಗಿದ್ದರು. ಹೀಗೆ ಹೋದವರೇ ಇಡಿ ಕಣ್ತಪ್ಪಿಸಿ ನಾಪತ್ತೆಯಾಗಿದ್ದಾರೆ.

ಇಡಿಯಿಂದ ಬಂಧನ ಭೀತಿ ಎದುರಾಗಿರುವ ಹಿನ್ನೆಲೆಯಲ್ಲಿ ದಿನೇಶ್ ಕುಮಾರ್ ನಾಪತ್ತೆಯಾಗಿದ್ದು, ಅವರ ಪತ್ತೆಗಾಗಿ ಹುಡುಕಾಟ ನಡೆಸಲಾಗುತ್ತಿದೆ. ಇನ್ನೊಂದೆಡೆ ಇಡಿ ಅಧಿಕಾರಿಗಳು ಇಂದು ದಿನೇಶ್ ಕುಮಾರ್ ಅವರ ಮನೆಗೆ ತೆರಳಿ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ಅಂಟಿಸಿದ್ದಾರೆ. ಅವರ ಕುಟುಂಬದವರಿಗೂ ದಿನೇಶ್ ಕುಮಾರ್ ಅವರಿಗೆ ವಿಚಾರಣೆಗೆ ಹಾಜರಾಗುವಂತೆ ತಿಳಿಸುವಂತೆ ಸೂಚಿಸಿದ್ದಾರೆ.

# ವಕ್ಫ್ ವಿವಾದ ಸೋಲುವ ಭೀತಿಯಿಂದ

## ಬಿಜೆಪಿ-ಜೆಡಿಎಸ್ ನವರು ಮಾಡುತ್ತಿರುವ ಕುತಂತ್ರ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ನಡೆಯುತ್ತಿರುವ ಮೂರು ವಿಧಾನಸಭೆಗಳ ಉಪಚುನಾವಣೆಯಲ್ಲಿ ಸೋಲು ಭೀತಿಯಿಂದ ಬಿಜೆಪಿ-ಜೆಡಿಎಸ್ ವಕ್ಫ್ ವಿವಾದವನ್ನ ಮಾಡ್ತಿವೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಆರೋಪಿಸಿದ್ದಾರೆ.

ವಿಕಾಸಸೌಧದಲ್ಲಿ ಈ ಕುರಿತು ಮಾತನಾಡಿದ ಸಚಿವ ಪ್ರಿಯಾಂಕ್ ಖರ್ಗೆ, ಮತ್ತೆರಡು ಜಿಲ್ಲೆ ರೈತರ ಜಮೀನು ಮತ್ತು ಸಿಂದಗಿ ಮಠದ ಜಾಗ ವಕ್ಫ್ ಆಸ್ತಿ ಅಂತಾ ನಮೂದು ಆಗಿರೋ ವಿಚಾರ ಬಿಜೆಪಿ-ಜೆಡಿಎಸ್ ಮಾಡ್ತಿರೋ ರಾಜಕೀಯ ಎಂದು ಕಿಡಿಕಾರಿದ್ದಾರೆ.

ವಕ್ಫ್ ವಿವಾದಕ್ಕೆ ಸಂಬಂದಿಸಿದಂತೆ ಸಚಿವ ಎಂ.ಬಿ. ಪಾಟೀಲ್ ಈಗಾಗಲೇ ವಿವರಣೆ ಕೊಟ್ಟಿದ್ದಾರೆ. ಯಾರು ಬೇಕಾದರೂ ಇದು ನಮ್ಮ ಆಸ್ತಿ ಕ್ಲೈಮ್ ಮಾಡಬಹುದು ಎಂದು ಹೇಳಿದ್ದಾರೆ. ಅದಕ್ಕೆ ಬೇಕಾಗಿರೋದು ದಾಖಲಾತಿ. ದಾಖಲಾತಿ ಇದ್ದರೆ ಏನು ತೊಂದರೆ ಇಲ್ಲ ಅಂತಾ ಸಚಿವರು ಹೇಳಿದ್ದಾರೆ. ವಕ್ಫ್ ಅದಾಲತ್ ಆದಾಗ ನಮ್ಮ ಜಾಗ ಅಂತಾ ಕೆಲವರು ಹೇಳಿದ್ದಾರೆ. ಆದರೆ ಅದಕ್ಕೆ ಯಾರು ಆತಂಕ ಪಡೋ ಅಗತ್ಯ ಇಲ್ಲ. ಈಗಾಗಲೇ ಸರ್ಕಾರ ಇದರ ಬಗ್ಗೆ ಸ್ಪಷ್ಟನೆ ಕೊಟ್ಟಿದೆ. ರೈತರ ಜಾಗ ಸರ್ಕಾರ ವಾಪಸ್ ಪಡೆಯಲ್ಲ. ಯಾರು ಆತಂಕ ಪಡುವ ಅಗತ್ಯವಿಲ್ಲ.

**ಸಚಿವ ಪ್ರಿಯಾಂಕ್ ಖರ್ಗೆ ವಾಗ್ದಾಳಿ**

ಈ ವಿಚಾರದಲ್ಲಿ ಬಿಜೆಪಿ ಹಾಗೂ ಜೆಡಿಎಸ್‌ನವರು ರಾಜಕೀಯ ಮಾಡುತ್ತಿದ್ದಾರೆ. ಯಾವುದು ದಾಖಲಾತಿ ಇರುತ್ತೋ ಆ ಆಸ್ತಿ ರೈತರಿಗೆ ಇರುತ್ತೆ. ಆದರು ಬಿಜೆಪಿ-ಜೆಡಿಎಸ್ ಅವರು ವಿವಾದ ಮಾಡ್ತಿದ್ದಾರೆ. ಉಪಚುನಾವಣೆಯಲ್ಲಿ ಬಿಜೆಪಿ-ಜೆಡಿಎಸ್‌ಗೆ ಸೋಲುವ ಭೀತಿ ಇದೆ. ಹೀಗಾಗಿ



☛ ಉದಯವಾಹಿನಿ ಚಿತ್ರ

ವಿವಾದ ಮಾಡ್ತಿದ್ದಾರೆ. ಹಿಂದೂ-ಮುಸ್ಲಿಂ ಅಂತಾ ಮಾಡಿದ್ರೆ ಗೆಲ್ಲಬಹುದು ಅನ್ನೋದು ಇವರ ಪ್ಲ್ಯಾನ್ ಎಂದು ಆರೋಪಿಸಿದ್ದಾರೆ.

ವಕ್ಫ್ ವಿವಾದಕ್ಕೆ ಸಂಬಂದಿಸಿದಂತೆ ಕೇಂದ್ರ ಸಚಿವ ಕುಮಾರಸ್ವಾಮಿ ಅನುಕೂಲಕ್ಕೆ ತಕ್ಕಂತೆ ನಡೆದುಕೊಳ್ಳುತ್ತಿದ್ದಾರೆ. ರಾಜಕೀಯ ಲಾಭ ಮಾಡೋಕೆ ಇವರು ಹೀಗೆ ಹೇಳ್ತಿದ್ದಾರೆ. ಕೆಲವು ವರ್ಷಗಳ ಹಿಂದೆ ಮುಂದಿನ ಜನ್ಮದಲ್ಲಿ ನಾನು ಮುಸ್ಲಿಂ ಆಗಿ ಹುಟ್ಟಬೇಕು ಅಂತಾ ದೇವೇಗೌಡ್ರು ಹೇಳಿದ್ರು. ಈ ಮಾತನ್ನು ಕುಮಾರಸ್ವಾಮಿ ಅವರು ಮರೆತಂತೆ ಕಾಣುತ್ತಿದೆ. ಓಲೈಕೆ ರಾಜಕೀಯ ಮಾಡ್ತಿರೋರು ಯಾರು ಅಂತಾ ಪ್ರಶ್ನೆ ಮಾಡಿದ್ರು. ಇದೇ ಕುಮಾರಸ್ವಾಮಿ ಆರ್‌ಎಸ್‌ಎಸ್ ಬಗ್ಗೆ ಏನ್ ಮಾತಾಡಿದ್ರು ಎಲ್ಲರಿಗೂ ಗೊತ್ತಿದೆ. ಲೇಖನ ಕೂಡಾ ಬರೆದಿದ್ದರು. ಅಧಿಕಾರ ಕೊಟ್ಟಾಗ ಎಲ್ಲವೂ ಉಲ್ಟಾ ಆಗುತ್ತಾ. ಕುಮಾರಸ್ವಾಮಿ ಅವರು ಅಂದು ವಿರೋಧ ಮಾಡಿ ಇಂದು ಅಧಿಕಾರಕ್ಕಾಗಿ ಹೀಗೆ ಮಾತಾಡೋದು ಸರಿಯಲ್ಲ ಎಂದು ಸಚಿವ ಪ್ರಿಯಾಂಕ್ ಖರ್ಗೆ ವಾಗ್ದಾಳಿ ನಡೆಸಿದ್ದಾರೆ.


## ಕವನ



ವಿ.ಎಂ.ಎಸ್.ಗೋಪಿ
• ಉದಯವಾಹಿನಿ, ವಿಶೇಷ

ದೀಪಾವಳಿ

ಬಂತೋ.. ಬಂತೋ.. ದೀಪಾವಳಿ ಬಂತೋ..
ತಂತೋ.. ತಂತೋ.. ಸಡಗರ ತಂತೋ..
ಸಿರಿ ತಂದಿತಪ್ಪ ಈ ಬೆಳಕಿನ ಹಬ್ಬ
ಸಂತಸದ ರೂಪ ಈ ದೀಪಾವಳಿ ಹಬ್ಬ
ಮನೆಯ ಅಂಗಳದಿ ಬಣ್ಣದ ರಂಗೋಲಿ
ಮನೆಯ ಬಾಗಿಲು ಮಾವಿನ
ತೋರಣ
ಸಾಲು ಸಾಲು ಹಣತೆಯ ದೀಪ
ಅಂಗಳ ತುಂಬಿ ಬೆಳಗಿತೇ ದೀಪ
ಊರ ತುಂಬೇಲ್ಲಾ ಹೊಸತು ನೋಡಾ
ನಾಡಿನ ಜನದ ಹಿಗ್ಗು ನೋಡಾ
ಹಬ್ಬದ ಸಿರಿಗೆ ತುಪ್ಪದ ಘಮ ಘಮ
ಹಸಿರಿನ ಗರಿಗೆ ಸಂಭ್ರಮದ ಸಮ ಸಮ
ಹರಿಯುವ ನೀರಲ್ಲಿ ತಲೆ ಎಣ್ಣೆ ಸ್ನಾನ
ನಾರಿಯರ ಮುಡಿ ತುಂಬ ಮಲ್ಲಿಗೆ
ತರ ತರಹದ ಪಟಾಕಿ
ಬೆಳಕು ಬೀರಿ ಸಿಡಿಯುತ್ತೆ
ದೀಪಗಳ ಸಾಲು ಈ ದೀಪಾವಳಿ ಹಬ್ಬ
ಸಂತಸದ ರೂಪ ಈ ದೀಪಾವಳಿ ಹಬ್ಬ.



# ಮಹಿಳಾ ಕಾರ್ಮಿಕರ ಭದ್ರತೆಗೆ ಧಕ್ಕೆ: ಬೆಳಕು ಮೂಡುವ ಮೊದಲು ಕೆಲಸ

## ಮೀನುಗಾರಿಕೆ ಬಂದರಿನಲ್ಲಿ ದುಡಿಯುವ ಮಹಿಳೆಯರು ಕರುಳು ಚುಂಯ್ ಎನ್ನುವಂತೆ ಸಂಕಟವನ್ನು ಬಿಚ್ಚಿಡುತ್ತಾರೆ

• ಉದಯವಾಹಿನಿ, ಮಂಗಳೂರು

ಬೆಳಕು ಮೂಡುವ ಮೊದಲು ಇವರ ಕೆಲಸ ಆರಂಭವಾಗುತ್ತದೆ. ಕತ್ತಲಲ್ಲೇ ಬಂದು ಅರೆಬರೆ ಬೆಳಕಿನಲ್ಲಿ ಸಿದ್ಧತೆ ಮಾಡಿಕೊಂಡು ದುಡಿಯಲು ಶುರು ಮಾಡಿದರೆ ಮಧ್ಯಾಹ್ನದವರೆಗೆ ಪುರುಸೊತ್ತಿಲ್ಲ. ಅದರ ಮಧ್ಯೆ ದೇಹಬಾಧೆ ತೀರಿಸಿಕೊಳ್ಳಬೇಕೆಂದರೆ ಪಡಿಪಾಟಲು. ಹಣ, ಪರ್ಸ್, ಮೊಬೈಲ್ ಫೋನ್ ಕಳೆದುಹೋಗದಂತೆ ಇಟ್ಟುಕೊಳ್ಳುವುದು ಮತ್ತೊಂದು ಸವಾಲು.

**ಕತ್ತಲಲ್ಲೇ ಅರೆಬರೆ ಬೆಳಕಿನಲ್ಲಿ ಸಿದ್ಧತೆ**

ಎಲ್ಲ ಸಹಿಸಿದರೂ ಕೊನೆಗೆ ಸಿಗುವುದು 'ಬಿಡಿಗಾಸು' ಮಾತ್ರ... ಕೋಟ್ಯಂತರ ಮೊತ್ತದ ವಾಣಿಜ್ಯ ವಹಿವಾಟು ನಡೆಯುವ ಮಂಗಳೂರು ಮೀನುಗಾರಿಕೆ ಬಂದರಿನಲ್ಲಿ ದುಡಿಯುವ ಮಹಿಳೆಯರು ಕರುಳು ಚುಂಯ್ ಎನ್ನುವಂತೆ ಸಂಕಟವನ್ನು ಬಿಚ್ಚಿಡುತ್ತಾರೆ. ಆದರೆ ಅವರ ನೋವಿನ ದನಿ ಸಂಬಂಧಪಟ್ಟವರ ಕಿವಿಗೆ ಇನ್ನೂ ಬಿದ್ದಿಲ್ಲ, ಬಿದ್ದರೂ ಪರಿಹಾರ ಕಾಣುವ ಗೋಜಿಗೆ ಅಡೆತಡೆ ಒಂದೆರಡಲ್ಲ. ಬಂದರಿನ ಮೀನುಗಾರಿಕೆ ಧಕ್ಕೆ ಮುಂಜಾನೆ ಮೂರೂವರೆ ವೇಳೆಗೆ ಚುರುಕಾಗುತ್ತದೆ. ಮೀನು ಹಿಡಿದುಕೊಂಡು ಬರುವ ಬೋಟ್‌ಗಳು ದಡ ಸೇರುವ ಸಮಯ ಅದು. ಬೋಟ್‌ಗಳು ಬಂದ ಕೂಡಲೇ ಪುರುಷರ ತಂಡ ಮೇಲೇರಿ ಮೀನು ಇಳಿಸುತ್ತಾರೆ. ಬುಟ್ಟಿಗಳಿಗೆ 'ಕೈನೀಡಿ' ಏಲಂ ನಡೆಯುವ ಜಾಗಕ್ಕೆ ತೆಗೆದುಕೊಂಡು ಹೋಗುವುದು ಮಹಿಳೆಯರು. ಇನ್ನೂ ಸ್ವಲ್ಪ ಹೊತ್ತಾದರೆ ಮೀನು ಖರೀದಿ ಆರಂಭವಾಗುತ್ತದೆ. ಹೋಟೆಲ್‌ನವರು ಕೆಜಿಗಟ್ಟಲೆ ಮೀನು ಕತ್ತರಿಸಿಕೊಂಡೇ ಇಲ್ಲಿಂದ ತೆಗೆದುಕೊಂಡು ಹೋಗುತ್ತಾರೆ. ಇಲ್ಲೂ ಮಹಿಳೆಯರದು ಪ್ರಮುಖ ಕೆಲಸ. ಈ ಎಲ್ಲ ಕೆಲಸಗಳಲ್ಲಿ ಕಡಿಮೆ ಎಂದರೂ 500ರಷ್ಟು ಮಹಿಳಾ ಕಾರ್ಮಿಕರು ಇದ್ದಾರೆ. ಆದರೆ ಅವರ ಅಗತ್ಯಕ್ಕೆ ಬೇಕಾದ ಸೌಕರ್ಯಗಳು ಇಲ್ಲ.

ಕುದ್ರೋಳಿಯಿಂದ ಬರುವ '....' (ಹೆಸರು ಹೇಳಲು ಆತಂಕ) ಮುಂಜಾನೆ ಮೂರೂವರೆಗೆ ಮನೆಯಿಂದ ಹೊರಡುತ್ತಾರೆ. ಬಂದರಿನ ಸಮೀಪ ತಲುಪುತ್ತಿದ್ದಂತೆ ಕೆಲವು ಕಡೆ ಕತ್ತಲು, ಕೆಲವೆಡೆ ಮಂದ ಬೆಳಕು. ಇವರಿಗೆ ಮೀನು ಕತ್ತರಿಸುವ ಕೆಲಸ. ಕುಳಿತುಕೊಳ್ಳುವ ಜಾಗ ಸ್ವಚ್ಛ ಮಾಡಲು ನೀರಿನ ವ್ಯವಸ್ಥೆ ಇಲ್ಲ. ದೂರದಿಂದ ನೀರು ತೆಗೆದುಕೊಂಡು ಬರಬೇಕು. ಮಳೆಗಾಲದಲ್ಲಿ ಕಾಲುಜಾರಿ ಬೀಳುವ ಆತಂಕ.


ಉದಯವಾಹಿನಿ ಚಿತ್ರ

> ಬೋಟೊಂದಕ್ಕೆ ಸಂಬಂಧಿಸಿ ಒಟ್ಟು 30 ಮಂದಿ ಕೆಲಸಕ್ಕೆ ಇರುತ್ತಾರೆ. 10 ಮಂದಿ ಮೀನು ಹಿಡಿಯಲು ಹೋಗುತ್ತಾರೆ. 10 ಮಂದಿ ಮೀನು ಇಳಿಸುತ್ತಾರೆ. 10 ಮಂದಿ ಮೀನು ತುಂಬಿದ ಬುಟ್ಟಿ ತೆಗೆದುಕೊಂಡು ಹೋಗುತ್ತಾರೆ. ಅವರು ಮಹಿಳೆಯರು. ಬೋಟ್ ಮಾಲೀಕರು ಕೊಟ್ಟ ಹಣವನ್ನು ಮೂರು ಹಂತದ ಕಾರ್ಮಿಕರು ಹಂಚಿಕೊಳ್ಳುತ್ತಾರೆ. ಈ ಪೈಕಿ ಮಹಿಳೆಯರಿಗೆ ಸಿಗುವ ಪಾಲು ಕಡಿಮೆ ಎಂಬ ದೂರು ಕೂಡ ಇದೆ.

### ಬದುಕು ಬಹಳ ದುಸ್ತರ

ಮುಂಜಾನೆ ಬರಲು ಸಾಧ್ಯವಾಗದ ಕೆಲವು ಮಹಿಳೆಯರು ರಾತ್ರಿ ಬಂದು ಇಲ್ಲೇ ತಂಗುತ್ತಾರೆ. ಅವರಿಗೆ ಪ್ರತ್ಯೇಕ ಕೊಠಡಿಗಳಾಗಲಿ, ಮರೆಯಾಗಲಿ ಇಲ್ಲ. ಕೆಲಸ ಆರಂಭಿಸುವ ಮೊದಲು ಮತ್ತು ನಂತರ ಬಟ್ಟೆ ಬದಲಿಸುವುದಕ್ಕೂ ಒಂದಿಷ್ಟು ಖಾಸಗಿ ಜಾಗ ಇಲ್ಲ. ಈ ಕೆಲಸವಲ್ಲದೆ ಬೇರೆ ಕೆಲಸ ಇಲ್ಲಾ. ಬದುಕು ಬಹಳ ದುಸ್ತರ. ಆದ್ದರಿಂದ ಎಲ್ಲವನ್ನೂ ಸಹಿಸುತ್ತಿದ್ದೇವೆ ಎನ್ನುತ್ತಾರೆ, ಕೃಷ್ಣಾಪುರದಿಂದ ಬಂದು ತಂಗುವ ಉತ್ತರ ಕರ್ನಾಟಕದ ಒಬ್ಬರು ಮಹಿಳೆ.

ನಾಲ್ಕು ಗಂಟೆಯ ವೇಳೆ ಕೆಲಸ ಆರಂಭವಾಗುತ್ತದೆ. ನಮಗೆ ನಿರ್ದಿಷ್ಟ ಹೋಟೆಲ್‌ಗಳ ಗಿರಾಕಿಗಳಿದ್ದಾರೆ. 16 ವರ್ಷಗಳಿಂದ ಇದೇ ಕೆಲಸ. ಆರಂಭದಲ್ಲಿ ಇದ್ದ ಕೆಜಿಗೆ 10 ಈಗಲೂ ಮುಂದುವರಿಯುತ್ತಿದೆ. ಸ್ವಲ್ಪ ಹೆಚ್ಚು ಕೊಡಿ ಎಂದರೆ ಬೇರೆ ಕಡೆಗೆ ಹೋಗುತ್ತೇವೆ ಎನ್ನುತ್ತಾರೆ. ಬೇರೆ ಗತಿ ಇಲ್ಲದೆ ಒಪ್ಪಿಕೊಳ್ಳುತ್ತೇವೆ' ಎಂದು ಮಹಿಳೆ ಹೇಳಿದರು.

ಪರ್ಸ್, ಮೊಬೈಲ್ ಫೋನ್ ಕಳವು ಇಲ್ಲಿ ಸಾಮಾನ್ಯ. ಕಷ್ಟಪಟ್ಟು ದುಡಿದು ತೆಗೆದಿಟ್ಟ ಹಣವನ್ನು ಎಷ್ಟೋ ಬಾರಿ ಕಳೆದುಕೊಂಡಿದ್ದೇವೆ. ಪುಂಡರ ಕಾಟವೂ ಇದೆ. ಹೀಗಾಗಿ ಕತ್ತಲಿರುವ ಕಡೆ ಒಬ್ಬಿಬ್ಬರು ಓಡಾಡುವುದಿಲ್ಲ. ಬಾತ್ ರೂಮ್‌ನಲ್ಲಿ ಸ್ವಚ್ಛತೆ ಎಂಬುದು ಇಲ್ಲವೇ ಇಲ್ಲ. ಕೆಲವೊಮ್ಮೆ ನಮಗೆ ಮೀಸಲಿರುವ ಬಾತ್‌ರೂಂನಲ್ಲಿ ಪುರುಷರು ಕುಳಿತುಕೊಂಡಿರುತ್ತಾರೆ.

ಅಪಾಯಕ್ಕೆ ಸಿಲುಕುವುದು ಬೇಡ ಎಂದು ಬೆಳಕು ಹರಿಯುವ ಮೊದಲು ಎಲ್ಲಾ ಬಾಧೆಯನ್ನೂ ಅದುಮಿಟ್ಟುಕೊಂಡು ಕೆಲಸ ಮಾಡುತ್ತೇವೆ' ಎಂದು ಮೀನು ಬುಟ್ಟಿಗೆ 'ಕೈ ನೀಡುವ' ಬೋಳಾರದ ತಿಳಿಸಿದರು.

ಗುರುರಾಜ್, ಮಂಗಳೂರು ದಕ್ಷಿಣ ಇನ್ಸ್‌ಪೆಕ್ಟರ್ ಪೊಲೀಸ್ ಗಸ್ತು ಸಮರ್ಪಕವಾಗಿದೆ. ಕೆಲವು ಕಡೆಗಳಲ್ಲಿ ಬೀದಿದೀಪ ಮತ್ತು ಸಿಸಿಟಿವಿ ವ್ಯವಸ್ಥೆ ಆಗಬೇಕು. ಈ ಬಗ್ಗೆ ಮಹಾನಗರ ಪಾಲಿಕೆಗೆ ಮನವಿ ಮಾಡಲಾಗಿದೆ. ಪಾಲಿಕೆ ಅಧಿಕಾರಿಗಳು ಪರಿಶೀಲನೆ ನಡೆಸಿದ್ದಾರೆ.

---


## ಸೋಮಾರಿ ಜೀವನಶೈಲಿ ಬಿಟ್ಟುಬಿಡಿ, ಪಾರ್ಶ್ವವಾಯುವಿನಿಂದ ರಕ್ಷಣೆ ಪಡೆಯಿರಿ

• ಉದಯವಾಹಿನಿ, ಚಿತ್ರದುರ್ಗ

ಚಿತ್ರದುರ್ಗ ಮದರ್ ತೆರೇಸಾ ಸ್ಕೂಲ್ ಆಫ್ ನರ್ಸಿಂಗ್ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಸ್ಪತ್ರೆ ಮತ್ತು ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮರವರ ಸಹಯೋಗದೊಂದಿಗೆ ವಿಶ್ವ ಸ್ಟ್ರೋಕ್ ದಿನ 2024 ಮಾನಸಿಕ ಆರೋಗ್ಯದ ಕುರಿತು ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಜಿಲ್ಲಾ ಶಸ್ತ್ರಚಿಕಿತಕ ಡಾಕ್ಟರ್ ಎಸ್ ಎ ರವೀಂದ್ರ, ಮಾತನಾಡಿ ಪಾರ್ಶ್ವವಾಯುಗೆ ಅಧಿಕಾರ ಮಧುಮೇಹ ಅನಾರೋಗ್ಯಕರ ಆಹಾರ ಪದ್ಧತಿಯೇ ಮದ್ಯಪಾನ ಧೂಮಪಾನ ಬೊಜ್ಜು ಮುಖ್ಯ ಕಾರಣಗಳಾಗಿವೆ ಸಾರ್ವಜನಿಕರು ಆರೋಗ್ಯ ಕಾರ್ಯಕರ್ತರು ನರ್ಸಿಂಗ್ ವಿದ್ಯಾರ್ಥಿಗಳು ಪ್ರಾರಂಭಿಕ ಲಕ್ಷಣಗಳನ್ನು ಗುರುತಿಸಿ ನಾಲ್ಕರಿಂದ ಐದು ಗಂಟೆಯ ಒಳಗೆ ಜಿಲ್ಲಾ ಆಸ್ಪತ್ರೆಯ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ವಿಭಾಗಕ್ಕೆ ಕರೆತಂದರೆ ಚಿಕಿತ್ಸೆ ಆರೈಕೆ ನೀಡಲಾಗುತ್ತದೆ.

ಈ ಸಮಯವನ್ನ ಗೋಲ್ಡನ್ ಅವರ್ ಎಂದು ಕರೆಯುತ್ತೇವೆ ಸಂಪೂರ್ಣ ಗುಣಮುಖರಾಗಬಹುದು ಸೋಮಾರಿ ಜೀವನಶೈಲಿ ಬಿಟ್ಟುಬಿಡಿ ಪಾರ್ಶ್ವವಾಯುವಿನಿಂದ ರಕ್ಷಣೆ ಪಡೆಯಿರಿ ಎಂದರು. ನರರೋಗ ತಜ್ಞ ಶ್ರೀ ಬಸವೇಶ್ವರ ವೈದಿಕೀಯ ಕಾಲೇಜು ಆಸ್ಪತ್ರೆ, ಚಿತ್ರದುರ್ಗ ಡಾಕ್ಟರ್ ಕಿರಣ್ ಗೌಡ ಮಾತನಾಡಿ ಪಾರ್ಶ್ವವಾಯು ಅಥವಾ ಮೆದುಳಿನ ಆಘಾತ ಮೆದುಳಿನ ಭಾಗಕ್ಕೆ ಕಡಿಮೆ ಆಮ್ಲಜನಕ ಪೂರೈಕೆಯಿಂದಾಗಿ ಉಂಟಾಗುವ ಸ್ಥಿತಿ ಸಮತೋಲನ ಅಥವಾ ಸಮನ್ವಯದ ನಷ್ಟ ಒಂದು ಅಥವಾ ಎರಡು ಕಣ್ಣುಗಳ ದೃಷ್ಟಿ ನಷ್ಟ ಮುಖದ ಒಂದು ಬದಿಯಲ್ಲಿ ದೌರ್ಬಲ್ಯ ಕೈ ಅಥವಾ ಕಾಲಿನ ದೌರ್ಬಲ್ಯ ಅಥವಾ ಮರಗಟ್ಟುವಿಕೆಯ ಸ್ಪಷ್ಟಮಾತು ಅಥವಾ ಮಾತನಾಡಲು ತೊಂದರೆ ಈ ಲಕ್ಷಣಗಳು ಕಂಡುಬಂದಲ್ಲಿ ಕೂಡಲೇ ರೋಗಿಯನ್ನ ನಾಲ್ಕರಿಂದ ಐದು ಗಂಟೆಯ ಒಳಗೆ ಆಸ್ಪತ್ರೆಗೆ ಕರೆತನ್ನಿ. ಚಿಕಿತ್ಸೆಯನ್ನ ನೀಡಿ ಮುಂದೆ ಉಂಟಾಗುವಂತಹ ಅನಾಹುತಗಳನ್ನು ತಪ್ಪಿಸಬಹುದು. ಜಿಲ್ಲಾ ಮಾನಸಿಕ ರೋಗಗಳ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾಕ್ಟರ್ ಜಿ ಓ ನಾಗರಾಜ್ ಪ್ರಾಸ್ತಾವಿಕವಾಗಿ ಮಾತನಾಡಿದರು.


ಉದಯವಾಹಿನಿ ಚಿತ್ರ

ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲರು ಮಂಜುಳಾ ಅಧ್ಯಕ್ಷ ನುಡಿಗಳನ್ನಾಡಿದರು ಸುಷ್ಮಾ ರಾಣಿ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ಕ್ರೀಡೆ ಮತ್ತು ಆರೋಗ್ಯ ಕುರಿತು ಮಾತನಾಡಿದರು. ಕಾರ್ಯಕ್ರಮದಲ್ಲಿ ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿ ಎನ್‌ಎಸ್ ಮಂಜುನಾಥ್ ಕಾರ್ಯಕ್ರಮದ ನಿರೂಪಣೆ ನಡೆಸಿಕೊಟ್ಟರು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ ಮುಗಪ್ಪ ವಂದನಾರ್ಪಣೆ ಮಾಡಿದರು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ ಜಾನಕಿ ಫಿಜಿಯೋಥೆರಪಿಸ್ಟ್ ಭವನ ಸೈಕಾಲಜಿಸ್ಟ್ ರೂಪ ಸ್ಪೀಚ್ ಥೆರಪಿಸ್ಟ್ ದಿವ್ಯ ನ್ಯುರೋ ನರ್ಸಿಂಗ್ ಆಫೀಸರ್ ತಿಪ್ಪೇಶ್ ಜಿಲ್ಲಾ ಸಂಯೋಜಕ ಶರತ್ ಪಿ ನರ್ಸಿಂಗ್ ಕಾಲೇಜ್, ವಿದ್ಯಾರ್ಥಿಗಳು ನರ್ಸಿಂಗ್ ಕಾಲೇಜ್ ಉಪನ್ಯಾಸಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

> ಪಾರ್ಶ್ವ ವಾಯುವಿನ ವಿವಿಧ ಬಗೆಗಳು ನೀಡಬಹುದಾದ ಚಿಕಿತ್ಸಾ ಕ್ರಮಗಳು ಆರೈಕೆ ಅನುಸರಣೆ ನರ್ಸಿಂಗ್ ಕೇರ್ ಸ್ಪೀಚ್ ತೆರಪಿ ಫಿಜಿಯೋಥೆರಪಿ ಕ್ಲೀನಿಕಲ್ ಸೈಕಾಲಜಿ ಕೌನ್ಸಿಲಿಂಗ್‌ಗಳು ಅಗತ್ಯವಾಗಿ ಬೇಕಾಗಿರುತ್ತದೆ ಈ ನಿಟ್ಟಿನಲ್ಲಿ ಜಿಲ್ಲಾ ಆಸ್ಪತ್ರೆಯ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ಸಂಪೂರ್ಣ ಸಜ್ಜಾಗಿ ಕರ್ತವ್ಯ ನಿರ್ವಹಿಸುತ್ತಿದೆ ಇದರ ಉಪಯೋಗ ಪಡೆದುಕೊಳ್ಳಿ ಇತರರಿಗೂ ತಿಳಿಸಿ
> -ಡಾ.ಕಿರಣ್ ಗೌಡ, ನರರೋಗ ತಜ್ಞ

---

## ಕೆರೆ ದಂಡೆಯಲ್ಲಿ ಮಾಂಸದ ತ್ಯಾಜ್ಯ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಕ್ಕಜಾಜೂರು

ಗ್ರಾಮದಲ್ಲಿರುವ ಕೋಳಿ ವ್ಯಾಪಾರಿಗಳು, ಮಾಂಸಾಹಾರಿ ಹೋಟೆಲ್ ನಡೆಸುವವರು ಕೆರೆ, ಹಳ್ಳ, ಸೇತುವೆ ಬಳಿ ತ್ಯಾಜ್ಯ ಸುರಿಯುತ್ತಿರುವ ಕಾರಣ ನೀರು ಮಲಿನಗೊಳ್ಳುತ್ತಿದೆ. ಬೀದಿನಾಯಿಗಳ ಹಾವಳಿ ಹೆಚ್ಚಾಗುತ್ತಿದ್ದು ಸಾರ್ವಜನಿಕರು ಆತಂಕಗೊಂಡಿದ್ದಾರೆ. ಗುಂಜಿಗನೂರು ರೈಲ್ವೆ ಗೇಟ್, ಅದರ ಸಮೀಪದ ಹಳ್ಳ, ಸೇತುವೆ ಹಾಗೂ ರಸ್ತೆ ಬದಿಯಲ್ಲಿ ತ್ಯಾಜ್ಯ ತಂದು ಎಸೆದು ಹೋಗುತ್ತಿದ್ದಾರೆ.

**ಮಲಿನಗೊಂಡ ನೀರು**

ರಸ್ತೆ ಬದಿಯಲ್ಲಿ ಮುಂಜಾನೆ ಹಾಗೂ ಸಂಜೆ ಹೆಚ್ಚಿನ ಸಂಖ್ಯೆಯ ಬರುವ ವಾಯು ವಿಹಾರಿಗಳು ಹಾಗೂ ಗುಂಜಿಗನೂರು ಗೊಲ್ಲರಹಟ್ಟಿ, ಎಸ್. ಎಚ್. ಗೊಲ್ಲರ ಹಟ್ಟಿ, ಬಾಣಗೆರೆ ಮೊದಲಾದ ಗ್ರಾಮಗಳಿಂದ ಹಾಲು ಮಾರಲು ಬರುವವರ ಮೇಲೆ ನಾಯಿಗಳು ದಾಳಿ ಮಾಡುವುದರಿಂದ ತೀವ್ರ ಆತಂಕ ಸೃಷ್ಟಿಯಾಗಿದೆ. ಹೊಳಲ್ಕೆರೆ ರಸ್ತೆ ಬದಿಯಲ್ಲೂ ಕೋಳಿ, ಕುರಿ ಮಾಂಸದ ಅಂಗಡಿಯವರು, ಮಾಂಸಹಾರಿ ಹೋಟೆಲ್‌ನವರು ತಮ್ಮ ಅಂಗಡಿ ಹಾಗೂ ಹೋಟೆಲ್‌ಗಳ ತ್ಯಾಜ್ಯವನ್ನು ರಾತ್ರಿ ವೇಳೆ ತಂದು ರಸ್ತೆ ಬದಿ ಹಾಕಿ ಹೋಗುತ್ತಾರೆ. ಇಲ್ಲೂ ನಾಯಿಗಳ ಹಾವಳಿ ಹೆಚ್ಚಾಗಿದ್ದು, ಸಾರ್ವಜನಿಕರ ಮೇಲೆ ಎಗರಿ ಬರುತ್ತವೆ. ಈ ಕುರಿತು ಗ್ರಾಮ ಪಂಚಾಯಿತಿಯವರಿಗೆ ಹಲವು ಬಾರಿ ಮಾಹಿತಿ ನೀಡಿದರೂ ಯಾರೊಬ್ಬರೂ ಸ್ಪಂದಿಸುತ್ತಿಲ್ಲ ಎಂದು ಬನಶಂಕರಿ ಬಡಾವಣೆ, ರೇವತಿ ಗಾರ್ಡನ್, ಗಿರಿಜಮ್ಮ ಬಡಾವಣೆಯ ನಿವಾಸಿಗಳು ಬೇಸರ ವ್ಯಕ್ತಪಡಿಸುತ್ತಾರೆ.

**ಕೆರೆ ಸೇರುತ್ತಿರುವ ಮಾಂಸದ ತ್ಯಾಜ್ಯ:** ಗ್ರಾಮದ ಮಾರುತಿನಗರ ಬಡಾವಣೆ ಬಳಿ ಇರುವ ಬಸವನಪಾದ ಕೆರೆ ತಟದಲ್ಲಿ ಕೋಳಿ ಅಂಗಡಿಯವರು ಮಾಂಸದ ತುಂಡುಗಳು ಹಾಗೂ ಕೋಳಿಯ ಪುಕ್ಕವನ್ನು ತಂದು ರಾಶಿ ಹಾಕಿ ಹೋಗುತ್ತಿದ್ದಾರೆ.

ಇದರಿಂದಾಗಿ, ಮಾಂಸದಲ್ಲಿನ ಕೊಳಕು ತ್ಯಾಜ್ಯ ಕೆರೆ ನೀರು ಸೇರುತ್ತಿದೆ. ಇದರಿಂದಾಗಿ, ಕೆರೆ ದುರ್ನಾತದ ಜತೆಗೆ ಮಲಿನವಾಗುತ್ತಿದೆ.

---

## ಆನೆಯ ಮೃತದೇಹ ನೋಡಲು ಬಂದ ಗಜಪಡೆ

• ಉದಯವಾಹಿನಿ, ಚಿಕ್ಕಮಗಳೂರು

ಭದ್ರಾ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಮೃತಪಟ್ಟಿದ್ದ ಆನೆಯ ಮೃತದೇಹ ನೋಡಲು ಗಜಪಡೆಯೇ ನೆರೆದಿದ್ದ ಮನಕಲಕುವ ದೃಶ್ಯ ಅರಣ್ಯ ಇಲಾಖೆ ಇರಿಸಿದ್ದ ಕ್ಯಾಮೆರಾದಲ್ಲಿ ಸೆರೆಯಾಗಿದೆ.


ಉದಯವಾಹಿನಿ ಚಿತ್ರ

ಇತ್ತೀಚೆಗೆ ಆನೆಯೊಂದು ಸಹಜವಾಗಿ ಮೃತಪಟ್ಟಿತ್ತು. ಅದರ ಮೃತದೇಹ ಹೇಗೆ ಕೊಳೆಯಲಿದೆ, ಯಾವ ಯಾವ ಪ್ರಾಣಿ, ಪಕ್ಷಿಗಳು ಭಕ್ಷಣೆ ಮಾಡಲಿವೆ ಎಂಬುದನ್ನು ತಿಳಿಯಲು ಅಧ್ಯಯನದ ದೃಷ್ಟಿಯಿಂದ ವನ್ಯಜೀವಿ ವಿಭಾಗದ ಅಧಿಕಾರಿಗಳು ಕ್ಯಾಮೆರಾ ಅಳವಡಿಕೆ ಮಾಡಿದ್ದರು.

**ಗಜಪಡೆಯ ಮನಕಲಕುವ ದೃಶ್ಯ**

17 ಆನೆಗಳ ಹಿಂಡು ಬಂದು ಮೃತದೇಹದ ಬಳಿ ಸಂತಾಪ ಸೂಚಿಸುವ ರೀತಿಯಲ್ಲಿ ನಿಂತಿರುವುದು ಸೆರೆಯಾಗಿದೆ. ಬಳಿಕ ಚಿರತೆ, ಕಾಡುಹಂದಿ ಕೂಡ ಆನೆಯ ಮೃತದೇಹ ತಿಂದಿರುವುದು ಸೆರೆಯಾಗಿದೆ. ಈ ರೀತಿಯ ಹಲವು ವೈಜ್ಞಾನಿಕ ಅಧ್ಯಯನಗಳನ್ನು ಭದ್ರಾ ವನ್ಯಜೀವಿ ವಿಭಾಗದಲ್ಲಿ ಮಾಡಲಾಗುತ್ತಿದೆ.

ಭದ್ರಾ ಅರಣ್ಯದಲ್ಲಿ ಮುತ್ತುಗದ ಮರಗಳು ಸಾಮಾನ್ಯವಾಗಿ ಜನವರಿ, ಫೆಬ್ರುವರಿ ಮತ್ತು ಮಾರ್ಚ್‌ನಲ್ಲಿ ಹೂವು ಬಿಡುತ್ತವೆ. ಆದರೆ, ಕಳೆದ ವರ್ಷ ನವೆಂಬರ್‌ನಲ್ಲೇ ಹೂವು ಅರಳಿರುವುದು ಗೊತ್ತಾಗಿದೆ.

ಹವಾಮಾನ ಬದಲಾವಣೆ ಆಗುತ್ತಿರುವುದಕ್ಕೆ ಇದು ಸಾಕ್ಷಿಯಾಗಿದೆ. ಈ ರೀತಿಯ ಹಲವು ವೈಜ್ಞಾನಿಕ ಅಧ್ಯಯನಗಳು ವನ್ಯಜೀವಿ ವಿಭಾಗದಲ್ಲಿ ನಡೆಯುತ್ತಿದೆ ಎಂದು ಭದ್ರಾ ಹುಲಿ ಸಂರಕ್ಷಿತ ಪ್ರದೇಶದ ಕ್ಷೇತ್ರ ನಿರ್ದೇಶಕ ಯಶಪಾಲ್ ಕ್ಷೀರಸಾಗರ ತಿಳಿಸಿದರು.

---


## ವಕ್ಫ್ ಬೋರ್ಡ್ ಕಾಯ್ದೆ ಹಿಂಪಡಿಯುವಂತೆ ಸರ್ಕಾರಕ್ಕೆ ಆಗ್ರಹ

• ಉದಯವಾಹಿನಿ, ಜೇವರ್ಗಿ

ತಾಲ್ಲೂಕಿನ ಪ್ರವಾಸಿ ಮಂದಿರದಲ್ಲಿ ವಿಧಾನಪರಿಷತ್ತಿನ ವಿರೋಧ ಪಕ್ಷದ ನಾಯಕರಾದ ಚಲುವಾದಿ ನಾರಾಯಣಸ್ವಾಮಿಯವರು ಸುದ್ದಿಗೋಷ್ಠಿ ನಡೆಸಿದರು.

ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ರಾಜ್ಯ ಅಧ್ಯಕ್ಷರಾದ ವಿಜಯೇಂದ್ರ, ಯಡಿಯೂರಪ್ಪನವರ ಆದೇಶದ ಮೇರೆಗೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅತಿವೃಷ್ಟಿಯಾಗಿ ಹಾನಿಗೊಳಗಾದ ಬೆಳೆಗಳ ವೀಕ್ಷಣೆ ಮಾಡುವಂತೆ ಶಾಸಕರಿಗೂ ಮತ್ತು ಜಿಲ್ಲೆಯ ಎಲ್ಲಾ ಬಿಜೆಪಿ ಮುಖಂಡರಿಗೆ ಆದೇಶ ಮಾಡಿದ್ದರು ಅದರ ಅನ್ವಯವಾಗಿ ರಾಜ್ಯದ ಸುಮಾರು ಕಡೆ ತಿರುಗಾಡಿ ನಾನು ಬೆಳೆ ವೀಕ್ಷಣೆ ಮಾಡಿ ರೈತರಿಗಾದ ಹಾನಿಯನ್ನು ಸರ್ಕಾರಕ್ಕೆ ಮುಟ್ಟಿಸುವ ಕೆಲಸವನ್ನು ಮಾಡುತ್ತಿದ್ದೇವೆ ಎಂದು ಹೇಳಿದರು.

ಈ ಭಾಗದಲ್ಲಿ ಅತಿ ಹೆಚ್ಚು ಮಳೆ ಬಂದು ಬೆಳೆಗಳು ಹಾನಿಯಾಗಿವೆ ರೈತರು ಕಂಗಲಾಗಿದ್ದಾರೆ ಬೆಳೆಗಳಿಗೆ ಹಾಕಿದ ಗೊಬ್ಬರ ಮತ್ತು ಬೀಜದ ಸಾಲದ ಭಾರ ರೈತನ ಎಗಲ ಮೇಲೆ ಬೆಳೆಗಳ ಹಾನಿಯಾಗಿದ್ದ ರೈತರು ಕೆಲವೊಂದು ಕಡೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.


ಉದಯವಾಹಿನಿ ಚಿತ್ರ

ಇದನ್ನು ಕಂಡು ಸರಕಾರ ಕಣ್ಣು ಮುಚ್ಚಿ ಕುಳಿತಿದೆ ಕೂಡಲೇ ಬೆಳೆ ಪರಿಹಾರ ಘೋಷಣೆ ಮಾಡಬೇಕು ಎಂದು ಹೇಳಿದರು.

ವಕ್ ಬೋರ್ಡ್ ಕಾಯದೆನ್ನು ಕೂಡಲೇ ಕೇಂದ್ರ ಸರ್ಕಾರ ಹಿಂಪಡೆಯಬೇಕು. ಗ್ರಾಮ ಪಂಚಾಯಿತಿಗಳ ಮಟ್ಟದಲ್ಲಿ ಈ ಒಂದು ಕಾನೂನು ಜಾರಿಗೆ ಮಾಡಿದೆ ಇದನ್ನು ಕೂಡಲೇ ಹಿಂಪಡೆಯಬೇಕು. ಗ್ರಾಮಮಟ್ಟದಲ್ಲಿರುವ ದಲಿತರು ಮತ್ತು ಹಿಂದುಳಿದ ವರ್ಗಗಳ ಆಸ್ತಿಯನ್ನು ವಕ್ತ ಬೋರ್ಡಿಗೆ ಬರ್ಸಿಕೊಳ್ಳುತ್ತಿದ್ದಾರೆ ಇದನ್ನು ಕೂಡಲೇ ತಡೆಯಬೇಕು. ಅಲ್ಪಸಂಖ್ಯಾತರು ತಮ್ಮ ಕಬ್ರ್, ಸ್ಥಾನ ಮತ್ತು ಮಸತಿಗಳು ಮಾತ್ರ ಬೋರ್ಡ್ ಪಡೆದುಕೊಳ್ಳಿ. ಉಳಿದ ಆಸ್ತಿಗಳು ಕೂಡ ವಕ್ತ್ ಬೋರ್ಡ್‌ಗೆ ಬರ್ಸಿಕೊಳ್ಳುವುದು ಅಕ್ಷಮ್ಯ ಅಪರಾಧ. ಮುಂದಿನ ದಿನಗಳಲ್ಲಿ ಈ ಭಾಗದ ನಾಯಕರು ವಿರುದ್ಧ ಹೋರಾಟ ಮಾಡಲು ನಮ್ಮ ಪಕ್ಷ ಸಜ್ಜಾಗುತ್ತಿದೆ ಎಂದು ಹೇಳಿದರು.

> ಕಲಬುರ್ಗಿಯ ಉಸ್ತುವಾರಿ ಸಚಿವರು ಮತ್ತು ಕೆಕೆಆರ್‌ಡಿಬಿ ಅಧ್ಯಕ್ಷರ ಮೇಲೆ ಕಿಡಿಕಾರಿದರು. ಕೇವಲ ಕ್ಷೇತ್ರದ ಅಭಿವೃದ್ಧಿ ಮಾಡದೆ ತಮ್ಮ ಅಭಿವೃದ್ಧಿಯನ್ನು ಮಾಡಿಕೊಳ್ಳುತ್ತಿದ್ದಾರೆ ಇಲ್ಲಿಯನ ಉಸ್ತುವಾರಿ ಸಚಿವರು ಮತ್ತು ಜೇವರಿಗೆ ಶಾಸಕರು. ಕೆಕೆಆರ್ ಡಿ ಬಿ ಯಲ್ಲಿ ಬರುವ ಹಣವನ್ನು ತೆಲಂಗಾಣ ಚುನಾವಣೆಗೆ 500 ಕೋಟಿ ವರ್ಗಾವಣೆ ಮಾಡಿದ್ದಾರೆ. ಇಂಥವರ ಕೈಯಲ್ಲಿ ಅಧಿಕಾರ ಇದ್ದರೆ ಈ ಭಾಗದ ಜನತೆ ಯಾವ ರೀತಿ ಅಭಿವೃದ್ಧಿ ಹೊಂದಬೇಕು. ಮುಂಬರುವ ಚುನಾವಣೆಗಳಲ್ಲಿ ಇಂಥವರನ್ನು ತಿರಸ್ಕರಿಸಿ ಒಳ್ಳೆಯ ನಾಯಕರನ್ನು ಗೆಲ್ಲಿಸಿ ಕಳಿಸಬೇಕು -ನಾರಾಯಣಸ್ವಾಮಿ

---

## ವಾಲ್ಮೀಕಿ ಭವನದಲ್ಲಿ ಮತಾಂತರ ಕ್ರಿಯೆ ನಡೆದಿಲ್ಲ : ಗುರುರಾಜ್

• ಉದಯವಾಹಿನಿ, ಜೇವರ್ಗಿ

ತಾಲ್ಲೂಕಿನಲ್ಲಿರುವ ಮಹಾಋಷಿ ವಾಲ್ಮೀಕಿ ಭವನದಲ್ಲಿ ಮತಾಂತರ ಕ್ರಿಯೆಗಳು ನಡೆದಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಹರಿಬಿಡಲಾಗಿದೆ ಆ ಸುದ್ದಿ ಶುದ್ಧ ಸುಳ್ಳು ಯಾವುದೇ ಮತಾಂತರ ಕಾರ್ಯ ನಡೆದಿಲ್ಲ ಕೇವಲ ಕ್ರಿಶ್ಚಿಯನ್ ಧರ್ಮೀಯರಿಗೆ ಪ್ರಾರ್ಥನೆ ಮಾಡಲು ಜಾಗ ನೀಡಿದ್ದೇವೆ ಪ್ರತಿ ಭಾನುವಾರ ಪ್ರಾರ್ಥನೆ ಮಾಡಿ ಬೀಗ ಹಾಕುತ್ತಿದ್ದರು ಎಂದು ಗುರುರಾಜ್ ಸುಬೇದಾರ್ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.


ಅದಕ್ಕಾಗಿ ಅಲ್ಲಿ ನಡೆದಿರುವ ಪ್ರಾರ್ಥನೆಯಲ್ಲಿ ನಮ್ಮ ಸಮಾಜದ ಯಾವುದೇ ಮುಖಂಡರು ಯುವಕರು ಭಾಗಿಯಾಗಿಲ್ಲ ಮತಾಂತರ ಕಾರ್ಯ ನಡೆದಿಲ್ಲ ಎಂದು ಹೇಳಿದರು.

ವಾಲ್ಮೀಕಿ ಸಮುದಾಯದ ತಾಲ್ಲೂಕ ಅಧ್ಯಕ್ಷರಾದ ಸುರೇಶ್ ಹವಾಲ್ದಾರ್ ನಮ್ಮ ಸಮಾಜದ ಭವನದಲ್ಲಿ ನಡೆದ ಕ್ರಿಯೆ ಮತಾಂತರ ಕ್ರಿಯೆ ನಡೆದಿಲ್ಲ ಶುದ್ಧ ಸುಳ್ಳು. ಅದಕ್ಕಾಗಿ ಇನ್ನು ಮುಂದೆ ಅಂತಹ ಕಾರ್ಯಗಳಾಗದಂತೆ ನೋಡಿಕೊಳ್ಳುತ್ತೇವೆ ಎಂದು ಅಧ್ಯಕ್ಷರು ಹೇಳಿದರು. 1.5 ಕೋಟಿ ರೂಪಾಯಿ ವೆಚ್ಚದಲ್ಲಿ ಭವನ ನಿರ್ಮಾಣವಾಗಿದೆ ಅದಕ್ಕೆ ಸರಿಯಾದ ನಿರ್ವಹಣೆ ಇಲ್ಲದೆ ಇನ್ನು ಲೋಕೋಪಯೋಗಿ ಇಲಾಖೆ ಸಮಾಜ ಕಲ್ಯಾಣ ಇಲಾಖೆ ಭವನ ಸಮಾಜದ ಮುಖಂಡರಿಗೆ ಒಪ್ಪಿಸದ ಇರುವುದಕ್ಕೆ ಅನೈತಿಕ ಕಾರ್ಯಗಳ ನಡೆಯುತ್ತಿದ್ದಾವೆ, ಇದು ಗಮನಕ್ಕೆ ಬಂದಿದೆ ಇನ್ನು ಮುಂದೆ ಈ ರೀತಿ ನಡೆಯುವುದಕ್ಕೆ ಬಿಡುವುದಿಲ್ಲ ಎಂದು ಹೇಳಿದರು.

ಈ ಸಂದರ್ಭದಲ್ಲಿ ದೇವೇಂದ್ರ ದೊರೆ, ರವಿ ದೊರೆ, ತಿರುಪತಿ ದೊರೆ, ಅಮಲಪ್ಪ ದೊರೆ, ಬಸವರಾಜ್ ಹರನೂರ ಉಪಸ್ಥಿತರಿದ್ದರು.

### ಶಾಸಕರ ಗಮನಕ್ಕೆ

ಕಿಡಿಗೇಡಿಗಳು ಭವನದ ಇಟಕಿಯ ಗ್ಲಾಸ್‌ಗಳು ಮತ್ತು ಮಧ್ಯಪಾನದ ಬಾಟಲಿಗಳು ಒಳಗಡೆ ಬೀಸಿದ್ದಾರೆ. ಮತ್ತು ಕಂಪೌಂಡ್ ಇಲ್ಲದ ಕಾರಣ ಈ ರೀತಿ ಕಾರ್ಯಗಳ ನಡೆಯುತ್ತಿದ್ದೇವೆ ಅದಕ್ಕಾಗಿ ಶಾಸಕರ ಗಮನಕ್ಕೆ ತಂದು 45 ಲಕ್ಷ ರೂಪಾಯಿ ಕಾಮಗಾರಿ ಮಾಡಿ ಅಂತ ಹೇಳಿದ್ದೇವೆ ತಕ್ಷಣವೇ ರಸ್ತೆ ಕಾಮಗಾರಿ ಮತ್ತು ಕಾಂಪೌಂಡ್ ವಾಲ್ ನಿರ್ಮಾಣಗೊಳ್ಳಲಿದೆ ಎಂದು ಹೇಳಿದರು.


ಉದಯವಾಹಿನಿ ಚಿತ್ರ

> ಇನ್ನು ಮುಂದೆ ಇಂತಹ ಕಾರ್ಯಗಳು ನಡೆಯದಂತೆ ನೋಡಿಕೊಳ್ಳುತ್ತೇವೆ
> -ಸುರೇಶ್ ಹವಾಲ್ದಾರ್

---

## ಹೆದ್ದಾರಿ ವಿಸ್ತರಣೆಯಲ್ಲಿ ಭೂಮಿ ಕಳೆದುಕೊಂಡವರ ಬದಲು ಅನ್ಯರಿಗೆ ಹಣ

● ಅಧಿಕಾರಿಗಳು ಸರಿಯಾಗಿ ದಾಖಲೆಗಳ ಪರಿಶೀಲನೆ ಮಾಡದೆ ಪರಿಹಾರ ಹಣವನ್ನು ಬೇರೆಯವರ ಖಾತೆಗೆ ಜಮಾ ಮಾಡಿ ಎಡವಟ್ಟು

• ಉದಯವಾಹಿನಿ, ರಾಯಚೂರು

ರಾಷ್ಟ್ರೀಯ ಹೆದ್ದಾರಿ 748 ಎ ಬೆಳಗಾವಿ-ರಾಯಚೂರು ಹೆದ್ದಾರಿ ವಿಸ್ತರಣೆಯಲ್ಲಿ ಭೂಮಿ ಕಳೆದುಕೊಂಡವರ ಬದಲಿಗೆ ಅನ್ಯರ ಖಾತೆಗೆ ಹಣ ವರ್ಗಾವಣೆ ಮಾಡಲಾಗಿದ್ದು, ಇದೀಗ ಅದನ್ನು ವಸೂಲಿ ಮಾಡಲು ಅಧಿಕಾರಿಗಳು ಪರದಾಡುತ್ತಿದ್ದಾರೆ.

ವಿಶೇಷ ಭೂಸ್ವಾಧೀನ ಅಧಿಕಾರಿಗಳು ಸರಿಯಾಗಿ ದಾಖಲೆಗಳ ಪರಿಶೀಲನೆ ಮಾಡದೆ ಪರಿಹಾರ ಹಣವನ್ನು ಬೇರೆಯವರ ಖಾತೆಗೆ ಜಮಾ ಮಾಡಿ ಎಡವಟ್ಟು ಮಾಡಿದ್ದಾರೆ. ಹಣ ಪಡೆದವರೂ ಮರಳಿಸಲು ಸಿದ್ಧರಿಲ್ಲದ ಕಾರಣ ಅಧಿಕಾರಿಗಳು ಐವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿದ್ದಾರೆ.

ವಿಶೇಷ ಭೂಸ್ವಾಧೀನ ಅಧಿಕಾರಿ ನೋಟಿಸ್ ನೀಡಿದರೂ ಸರ್ಕಾರದ ಹಣ ಮರಳಿಸದ ಕಾರಣ ಜಂಟಿ ಖಾತೆದಾರರಾದ ಸಿದ್ದನಗೌಡ, ರುದ್ರಗೌಡ, ಶಂಕರಗೌಡ ಸೇರಿ ಇದಕ್ಕೆ ಕುಮ್ಮಕ್ಕು ನೀಡಿದ ಹಿರೇಹಣಗಿ ಪ್ರಾಥಮಿಕ ಶಾಲಾ ಶಿಕ್ಷಕ ಅಮರೇಶ, ವಿನಯಕುಮಾರ ವಿರುದ್ಧ ನೇತಾಜಿ ಪೊಲೀಸ್ ಠಾಣೆಯಲ್ಲಿ ಐಪಿಸಿ ಸೆಕ್ಷನ್ (1860) 420, 406, 149 ರ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

### ವಂಚನೆ ಪ್ರಕರಣ ದಾಖಲು

ವಿಶೇಷ ಭೂ-ಸ್ವಾಧೀನ ಅಧಿಕಾರಿಗಳು ವಿಚಾರಣೆ ನಂತರ ಹಣವನ್ನು ಹಿಂದಿರುಗಿಸುವಂತೆ ಆದೇಶಿಸಿ ಒಂದು ವಾರದೊಳಗಾಗಿ ಹಣ ಕಾರ್ಯಾಲಯಕ್ಕೆ ನೀಡುವಂತೆ ಸಿರವಾರ ತಹಶೀಲ್ದಾರ್ ಮೂಲಕ ನೋಟಿಸ್ ಜಾರಿ ಮಾಡಿದ್ದಾರೆ. ಹಣ ಪಡೆದವರು ಇದಕ್ಕೆ ಪ್ರತಿಕ್ರಿಯಿಸದ ಕಾರಣ ವಂಚನೆ ಪ್ರಕರಣ ದಾಖಲೆಯಾಗಿದೆ.

ಸಿರವಾರ ತಾಲ್ಲೂಕಿನ ಪಾತಾಪುರ ಗ್ರಾಮದ ಸರ್ವೆ ನಂ 35/2ರಲ್ಲಿ ವಿತರಿಸಿದ ಭೂ ಪರಿಹಾರ ಹಣವನ್ನು ಪಿ. ಸಿದ್ದನಗೌಡ, ರುದ್ರಗೌಡ, ಶಂಕರಗೌಡ ಅವರ ಒಪ್ಪಂದದಂತೆ ಮೂವರ ಜಂಟಿ ಖಾತೆಗೆ 2023ರ ಅಕ್ಟೋಬರ್ 9ರಂದು ರಂದು 1,19,64,711 ಜಮಾ ಮಾಡಲಾಗಿದೆ. ಇದರಲ್ಲಿ ಪಾತಾಪೂರು ಗ್ರಾಮದ ಶ್ರೀದೇವಿ ಮಲ್ಲಯ್ಯ ಸ್ವಾಮಿ ಅವರಿಗೆ ಸೇರಿದ್ದ ? 43,47,310 ಮನೆಯ ಪರಿಹಾರ ಹಣ ಹಾಗೂ ಉಟಗನೂರು ಬಸವಲಿಂಗ ತಾತಾ ದೇವಸ್ಥಾನ ಪರಿಹಾರ ಹಣವನ್ನು ತೆಗೆದುಕೊಂಡಿರುವುದು ಪೊಲೀಸ್ ವಿಚಾರಣೆಯ ಸಂದರ್ಭದಲ್ಲಿ ಬಹಿರಂಗವಾಗಿದೆ.


ಉದಯವಾಹಿನಿ ಚಿತ್ರ

ಇದರಲ್ಲಿ ಅವಾರ್ಡ್ ಪುಸ್ತಕದಂತೆ ಸಿದ್ದನಗೌಡ ಅವರು ಶೇಕಡ 10ರಷ್ಟು ಟಿಡಿಎಸ್ ಹೊರತುಪಡಿಸಿ 67 ಲಕ್ಷ ತೆಗೆದುಕೊಳ್ಳಬೇಕಾಗಿತ್ತು. ಆದರೆ, ಹಣ ಜಂಟಿ ಖಾತೆಗೆ ವರ್ಗಾವಣೆಯಾದ ಮರುದಿನವೇ ಶ್ರೀದೇವಿ ಮಲ್ಲಯ್ಯ ಸ್ವಾಮಿ ಅವರಿಗೆ ಸೇರಿದ ಪರಿಹಾರ ಹಣ ಸೇರಿ ಒಟ್ಟು 95 ಲಕ್ಷ ಹಣವನ್ನು ತನ್ನ ಖಾಸಗಿ ಖಾತೆಗೆ ವರ್ಗಾಯಿಸಿಕೊಂಡಿದ್ದಾರೆ. ಅಲ್ಲದೆ ರಾಜಶೇಖರ ತೋರಗಲ್ ಎನ್ನೂವವರಿಗೂ 11,66,000 ವರ್ಗಾಯಿಸಿರುವುದು ಜಂಟಿ ಬ್ಯಾಂಕ್ ಖಾತೆಯ ವಿವರದಿಂದ ತಿಳಿದು ಬಂದಿದೆ. ಪ್ರಕರಣದ ವಿಚಾರಣೆಯಲ್ಲಿ ರಾಜಶೇಖರ ತೋರಗಲ್, ಹಣ ವರ್ಗಾಯಿಸಿದ ಅಂದಿನ ವಿಶೇಷ ಭೂಸ್ವಾಧೀನ ಅಧಿಕಾರಿ ಹರ್ಷಾ ಶೆಟ್ಟಿ ಸೇರಿ ತಪ್ಪಿತಸ್ಥರ ವಿರುದ್ಧವೂ ಪ್ರಕರಣ ದಾಖಲು ಮಾಡಲು ಇಲಾಖೆ ಅಧಿಕಾರಿಗಳು ಸಿದ್ಧತೆ ನಡೆಸಿದ್ದಾರೆ. ಹಣ ಕೊಡದಿರುವ ಬಗ್ಗೆ ತಕರಾರು ಬಂದಾಗ ವಿಶೇಷ ಭೂಸ್ವಾಧಿನ ಅಧಿಕಾರಿ ರಾಜಕುಮಾರ ಜಾಧವ ಸ್ಥಳಕ್ಕೆ ಭೇಟಿ ನೀಡಿ ವಿಚಾರಿಸಿದ್ದರು. ಹೆಚ್ಚುವರಿಯಾಗಿ ಪಡೆದ ಹಣವನ್ನು ಮರಳಿ ಕಾರ್ಯಾಲಯಕ್ಕೆ ಡಿಡಿ ಮುಖಾಂತರ ನೀಡುವಂತೆ ಜಂಟಿ ಖಾತೆದಾರರಿಗೆ ಸೂಚಿಸಿದರೂ ಮರಳಿಸಿಲ್ಲ.

**ವಸೂಲಿ ಮಾಡಲು ಅಧಿಕಾರಿಗಳು ಪರದಾಟ**


ಶ್ರೀದೇವಿ ಮಲ್ಲಯ್ಯ ಸ್ವಾಮಿ ಅವರ ಆಸ್ತಿ ಮಾಲೀಕತ್ವದ ದೃಢೀಕರಣಕ್ಕಾಗಿ, ತಹಶೀಲ್ದಾರ್ ದಾಖಲಾತಿ ವರದಿ, ಸ್ಥಳ ಪರಿಶೀಲಿಸಿ ಪಂಚನಾಮೆ ವರದಿ, ಗ್ರಾಮ ಪಂಚಾಯಿತಿ ದಾಖಲೆಗಳು ಹಾಗೂ ವಿಶೇಷ ಭೂ-ಸ್ವಾಧೀನ ಅಧಿಕಾರಿ ಅವರ ಸ್ಥಾನಿಕ ವರದಿಯಿಂದ ಶ್ರೀದೇವಿಯವರ ಮನೆಯ ಪರಿಹಾರ ಹಣವೂ ಇದರಲ್ಲಿ ಸೇರಿರುವುದು ವಿಶೇಷ ಭೂಸ್ವಾಧೀನ ಅಧಿಕಾರಿಗಳ ಆದೇಶದಿಂದ ದೃಢವಾಗಿದೆ.

> ವಿಶೇಷ ಭೂ ಸ್ವಾಧೀನ ಅಧಿಕಾರಿ ಹರ್ಷಾ ಶೆಟ್ಟಿ ಅವಾರ್ಡ್ ಮಾಡಿರುವುದು ಲೋಪಗಳಿಂದ ಕೂಡಿದ್ದಲ್ಲದೆ ಜೆಎಂಸಿ ಸರ್ವೆ ಮಾಡದೆ ಇರುವುದರಿಂದ ಇಷ್ಟೆಲ್ಲ ಗೊಂದಲಕ್ಕೆ ಕಾರಣವಾಗಿದೆ. 2013 ಭೂ ಸ್ವಾಧೀನ ಹೊಸ ಕಾಯ್ದೆಯ ಪ್ರಕಾರ ಜೆಎಂಸಿ (ಜಂಟಿ ಭೂ-ಮಾಪನಾ ಸರ್ವೆ) ವರದಿಯಾದರಿಸಿ ಪರಿಹಾರ ಹಣ ನೀಡಬೇಕು ಎಂಬ ಕಾಯ್ದೆಯನ್ನು ಉಲ್ಲಂಘಿಸಲಾಗಿದೆ. ಡಿಶಾಂಕ್ ಎಂಬ ಖಾಸಗಿ ಆಯಪ್ ಬಳಸಿ ಹಣ ಪಾವತಿಸಲಾಗಿದೆ
> -ಶ್ರೀದೇವಿ ಮಲ್ಲಯ್ಯ ಸ್ವಾಮಿ

---

## ಮಿನಿ ನ್ಯೂಸ್

### ಕೊರವಂಜೇಶ್ವರ ಅಭಿವೃದ್ಧಿಗೆ ಧರ್ಮಸ್ಥಳ ಸಂಸ್ಥೆ 1ಲಕ್ಷ ರೂ.ಹಸ್ತಾಂತರ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಕೊರವಿ ಗ್ರಾಮದ ಕೊರವಂಜೇಶ್ವರ ದೇವಾಸ್ಥಾನದ ಜೀರ್ಣೋದ್ಧಾರಕ್ಕಾಗಿ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ವತಿಯಿಂದ ಶ್ರೀ ಕ್ಷೇತ್ರ ಧರ್ಮಸ್ಥಳದ ಪೂಜ್ಯ ವೀರೇಂದ್ರ ಹೆಗ್ಗಡೆಯವರು ಮಂಜೂರು ಮಾಡಿದ 1ಲಕ್ಷ ಮೊತ್ತದ ಡಿಡಿಯನ್ನು ಹಸ್ತಾಂತರಿಸಿದರು. ಕೊರವಿಯ ಕೊರವಂಜೇಶ್ವರ ದೇವಾಸ್ಥಾನದ ಸಮಿತಿಯ ಅಧ್ಯಕ್ಷ ಸತೀಶಚಂದ್ರ ಪಾಟೀಲರವರಿಗೆ ಜನಜಾಗೃತಿ ವೇದಿಕೆಯ ಯೋಜನಾಧಿಕಾರಿ ರಾಜೇಶ ಮತ್ತು ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಯೋಜನಾಧಿಕಾರಿ ಗೋಪಾಲ ಜಿ.1ಲಕ್ಷದ ಡಿಡಿ ವಿತರಿಸಿದರು.

ದೇವಾಸ್ಥಾನದ ಕಾರ್ಯದರ್ಶಿ ಸಚಿನ್ ಪಾಟೀಲ್,ಧರ್ಮಸ್ಥಳ ಸಂಸ್ಥೆಯ ಕೃಷಿ ಮೇಲ್ವಿಚಾರಕ ಸತೀಶ್ ಕೆ ಎಚ್,ವಲಯದ ಮೇಲ್ವಿಚಾರಕರಾದ ಅಮಾನ್,ಸೇವಾಪ್ರತಿನಿಧಿ ಅನಿತಾ ,ಕಮಿಟಿ ಸದಸ್ಯರು,ಊರಿನ ಗ್ರಾಮಸ್ಥರು,ಸ್ವಸಹಾಯ ಸಂಘದ ಸದಸ್ಯರು ಉಪಸ್ಥಿತರಿದ್ದರು.

### ಸೌಹಾರ್ದ ಸಂಯುಕ್ತ ಸಹಕಾರಿ ಸಂಘಗಳ ಪ್ರವೇಶ ತರಬೇತಿ


ಉದಯವಾಹಿನಿ ಚಿತ್ರ

• ಉದಯವಾಹಿನಿ ಸಿಂಧನೂರು

ಇಂದು ಸಿಂಧನೂರುನಲ್ಲಿ ನಡೆದ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ, ಕಲಬುರ್ಗಿ ಪ್ರಾಂತ ಹಾಗೂ ರಾಯಚೂರು ಸೌಹಾರ್ದ ಸಹಕಾರಿಗಳ ಒಕ್ಕೂಟ ನಿ, ಇವರುಗಳ ಸಹಯೋಗದೊಂದಿಗೆ ಜಾರಿಗೊಳಿಸಲಾಯಿತು. ನಂತರ ಕಾರ್ಯಕ್ರಮ ಉದ್ಘಾಟಿಸಿ ನಂತರ ಮಾತನಾಡಿದ ರಾಯಚೂರು ಜಿಲ್ಲೆಯ ನೂತನ ಸೌಹಾರ್ದ ಸಹಕಾರಿ ಸಂಘಗಳ ಒಕ್ಕೂಟದ ಅಧ್ಯಕ್ಷರಾದ ಎಂ.ದೊಡ್ಡಬಸವರಾಜ ಅವರು ರಾಯಚೂರು ಜಿಲ್ಲೆಯ ಸೌಹಾರ್ದ ಸಂಘಗಳ ಸಹಕಾರಿ ಸಂಘಗಳ ಪ್ರವೇಶ ತರಬೇತಿ ಉದ್ದೇಶಿಸಿ ಮಾತನಾಡಿದರು.

ರಾಜಶೇಖರ ಬಿ ನಿರ್ದೇಶಕರು ಜಿಲ್ಲಾ ಸೌಹಾರ್ದ ಸಹಕಾರಿ ಒಕ್ಕೂಟ, ಚಂದ್ರಶೇಖರ ಕರಡಕಲ್ ಸಂಪನ್ಮೂಲ, ಮಹಾಂತಪ್ಪ ಬೆಂಗಳೂರು ಸಂಯುಕ್ತ ಸಹಕಾರಿ ಟಾಸ್ಕ್ ಫೋರ್ಸ್ ಮುಖ್ಯಸ್ಥರು, ನಟರಾಜ ಜಿಲ್ಲಾ ಸಂಚಾಲಕರು ಸಂಯುಕ್ತ ಸಹಕಾರಿ ರಾಯಚೂರು, ಮಂಜುಳಾ ಪಾಟೀಲ್ ಮಾಜಿ ನಿರ್ದೇಶಕರು ಸಂಯುಕ್ತ ಸಹಕಾರಿ, ಹುಸೇನಸಾಬ ಬಿ ಪ್ರಭಾರಿ ಜಿಲ್ಲೆ ಸೌಹಾರ್ದ ಸಹಕಾರಿ ಒಕ್ಕೂಟ ಹಾಗೂ ಇತರರು ಉಪಸ್ಥಿತರಿದ್ದರು.

### ಜಪ್ತಿ ಮರಳು ವಿಲೇವಾರಿಗೆ ಎಸ್ಪಿ ಸೂಚನೆ

• ಉದಯವಾಹಿನಿ, ಸಿಂಧನೂರು

ನಗರದ ಪಿಡಬ್ಲ್ಯೂಡಿ ಕ್ಯಾಂಪ್‌ನಲ್ಲಿರುವ ಗ್ರಾಮೀಣ ಪೊಲೀಸ್ ಠಾಣೆಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಪುಟ್ಟಮಾದಯ್ಯ ಭೇಟಿ ನೀಡಿ ಜಪ್ತಿ ಮಾಡಿದ ಮರಳನ್ನು ನಿಯಮಾನುಸಾರ ವಿಲೇವಾರಿ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈ ವೇಳೆ ಮಾತನಾಡಿದ ಅವರು, ತಾಲ್ಲೂಕಿನ ಗೋಮರ್ಸಿ ಹಳ್ಳ, ತುಂಗಭದ್ರಾ ನದಿ ಪಾತ್ರದ ಗ್ರಾಮಗಳಾದ ಅಲಬನೂರು, ವಳಬಳ್ಳಾರಿ, ಹರೇಟ ನೂರು, ಕೆಂಗಲ್, ಸಾಲಗುಂದಾದಿಂದ ಟಿಪ್ಪರ್, ಟ್ರ್ಯಾಕ್ಟರ್‌ಗಳಲ್ಲಿ ಮರಳು ತುಂಬಿ ಅಕ್ರಮವಾಗಿ ಸಾಗಣೆ ಮಾಡಲಾಗುತ್ತಿದೆ ಎಂದು ದೂರುಗಳು ಬರುತ್ತಿವೆ.

ಸರ್ಕಾರಕ್ಕೆ ರಾಜಧನ ಭರಿಸದೆ ಮರಳು ಸಾಗಣೆ ಮಾಡುವುದು ಅಪರಾಧವಾಗಿದೆ. ಆದ್ದರಿಂದ ಮರಳು ಅಕ್ರಮ ಸಾಗಣೆ ಮಾಡುವ ಟಿಪ್ಪರ್, ಟ್ರ್ಯಾಕ್ಟರ್‌ಗಳನ್ನು ಮುಲಾಜಿಲ್ಲದೆ ಜಪ್ತಿ ಮಾಡಿ ಕಾನೂನು ಕ್ರಮ ಜರುಗಿಸಬೇಕು ಎಂದು ಸೂಚನೆ ನೀಡಿದರು. ಡಿವೈಎಸ್‌ಪಿ ಬಿ.ಎಸ್.ತಳವಾರ, ಸರ್ಕಲ್ ಇನ್ಸ್‌ಪೆಕ್ಟರ್ ವೀರಾರೆಡ್ಡಿ, ಗ್ರಾಮೀಣ ಪೊಲೀಸ್ ಠಾಣೆ ಸಬ್ ಇನ್ಸ್‌ಪೆಕ್ಟರ್ ಮಹ್ಮದ್ ಇಸಾಕ್, ಸಂಚಾರ ಪೊಲೀಸ್ ಠಾಣೆಯ ವೆಂಕಟೇಶ ಚವ್ಹಾಣ್ ಹಾಜರಿದ್ದರು.

### ಆರೋಗ್ಯ ಮತ್ತು ಶಿಕ್ಷಣ ಇಂದಿನ ಮೂಲಭೂತ ಅಗತ್ಯ : ಶಾಸಕ ಗುರ್ಮೆ

• ಉದಯವಾಹಿನಿ, ಶಿರ್ವ

ಆರೋಗ್ಯ ಮತ್ತು ಶಿಕ್ಷಣ ಇಂದಿನ ಮೂಲಭೂತ ಅಗತ್ಯವಾಗಿದ್ದು, ಪ್ರತಿಯೊಬ್ಬರಿಗೂ ಕೈಗೆಟುವಂತಿರಬೇಕು. ನಿಟ್ಟೆ ವಿವಿ ಕುಲಾಧಿಪತಿ ವಿನಯ ಹೆಗ್ಡೆ ಅವರ ಸಾಮಾಜಿಕ ಕಾಳಜಿಯಿಂದಾಗಿ ಅವರ ಸಂಸ್ಥೆಗಳು ಎರಡೂ ಕ್ಷೇತ್ರದಲ್ಲಿ ಸಮಾಜಕ್ಕೆ ಕೊಡುಗೆ ನೀಡುತ್ತಿವೆ ಎಂದು ಶಾಸಕ ಗುರ್ಮೆ ಸುರೇಶ್ ಶೆಟ್ಟಿ ಹೇಳಿದರು.

ಶಿರ್ವದ ವಿದ್ಯಾವರ್ಧಕ ಕ್ಯಾಂಪಸ್‌ನಲ್ಲಿ ಕಾರ್ಯ ನಿರ್ವಹಿಸುತ್ತಿರುವ ನಿಟ್ಟೆ ವಿಶ್ವವಿದ್ಯಾಲಯದ ಜಸ್ಟಿಸ್ ಕೆ.ಎಸ್.ಹೆಗ್ಡೆ ಗ್ರಾಮೀಣ ಆರೋಗ್ಯ ಕೇಂದ್ರದ ಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ನಿಟ್ಟೆ ವಿವಿ ನಿವೃತ್ತ ಕುಲಪತಿ ಡಾ.ಸತೀಶ್ ಕುಮಾರ್ ಭಂಡಾರಿ ಮಾತನಾಡಿ, ನಾಲ್ಕು ಜಿಲ್ಲೆಗಳಲ್ಲಿ ನಿಟ್ಟೆ ವಿವಿಯ 23 ಗ್ರಾಮೀಣ ಆರೋಗ್ಯ ಕೇಂದ್ರಗಳು ಕಾರ್ಯಾಚರಿಸುತ್ತಿದ್ದು, ತಿಂಗಳಿಗೆ ಎರಡು ಲಕ್ಷಕ್ಕೂ ಅಧಿಕ ಜನರಿಗೆ ಸೇವೆ ನೀಡುತ್ತಿವೆ. ಮೇಲ್ದರ್ಜೆಯ ಪ್ರಯೋಗಾಲಯಗಳ ಮೂಲಕ ಇಸಿಜಿ, ಟೆಲಿ ಕಾರ್ಡಿಯಾಲಜಿ ವ್ಯವಸ್ಥೆಯನ್ನು ಹೊಂದಿವೆ ಎಂದು ತಿಳಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಶಿರ್ವ ವಿದ್ಯಾವರ್ಧಕ ಸಂಘದ ಆಡಳಿತಾಧಿಕಾರಿ ಪ್ರೊ.ಭಾಸ್ಕರ್ ಶೆಟ್ಟಿ ಮಾತನಾಡಿ, ವಿನಯ್ ಹೆಗ್ಡೆ ಅವರ ಸಾಮಾಜಿಕ ಕಾಳಜಿಯ ಭಾಗವಾಗಿ ನಮ್ಮ ಸಂಸ್ಥೆಯ ಕ್ಯಾಂಪಸ್‌ನಲ್ಲಿ ವರ್ಷದ ಹಿಂದೆ ಆರಂಭವಾದದ ಕೇಂದ್ರದಲ್ಲಿ ಎಪ್ಪತ್ತರಿಂದ ಎಂಬತ್ತು ಜನ ಪ್ರತಿ ದಿನ ಸೇವೆ ಪಡೆದುಕೊಳ್ಳುತ್ತಿದ್ದಾರೆ. ತಿಂಗಳಿಗೆ 90 ಸಾವಿರಕ್ಕೂ ಅಧಿಕ ಮೌಲ್ಯದ ಔಷಧಿ ಉಚಿತವಾಗಿ ನೀಡುತ್ತಿದೆ ಎಂದರು.

# 2028ರಲ್ಲಿ ಲೋಕಸಭೆ ಸೀಟುಗಳ ಸೀಮಾ ನಿರ್ಣಯ ಪ್ರಕ್ರಿಯೆ ಆರಂಭ

## ದೇಶಾದ್ಯಂತ 2025ರಲ್ಲಿ ಆರಂಭವಾಗಿ 2026ರಲ್ಲಿ ಮುಕ್ತಾಯವಾಗಲಿದೆ ಜನಗಣತಿ ಪ್ರಕ್ರಿಯೆ, ಕೋವಿಡ್ ಕಾರಣ ನಾಲ್ಕು ವರ್ಷ ವಿಳಂಬ



2025ರಲ್ಲಿ ದೇಶಾದ್ಯಂತ ಜನಗಣತಿ

**ಹೊಸದಿಲ್ಲಿ:** ಕೋವಿಡ್ 19 ಕಾರಣದಿಂದ ವಿಳಂಬವಾಗಿದ್ದ ಸಾರ್ವತ್ರಿಕ ಜನಗಣತಿಯನ್ನು ಮುಂದಿನ ವರ್ಷ ನಡೆಸಲು ಕೇಂದ್ರ ಸರ್ಕಾರ ತಯಾರಿ ನಡೆಸಿದೆ. ನಾಲ್ಕು ವರ್ಷದ ವಿಳಂಬದ ಬಳಿಕ, ದೇಶದ ಜನಸಂಖ್ಯೆಯನ್ನು ಲೆಕ್ಕ ಹಾಕುವ ಅಧಿಕೃತ ಸಮೀಕ್ಷೆಯು 2025ರಲ್ಲಿ ಆರಂಭವಾಗಲಿದೆ ಎಂದು ಮೂಲಗಳು ಸೋಮವಾರ ತಿಳಿಸಿದೆ. ಈ ಪ್ರಕ್ರಿಯೆ 2025ರಲ್ಲಿ ಆರಂಭವಾಗಿ, 2026ರಲ್ಲಿ ಮುಕ್ತಾಯವಾಗುವ ನಿರೀಕ್ಷೆ ಇದೆ.

ಜನಗಣತಿ ಮುಗಿದ ಬಳಿಕ, ಅದರ ವರದಿ ಆಧಾರದಲ್ಲಿ ಲೋಕಸಭೆಯಲ್ಲಿನ ಕ್ಷೇತ್ರಗಳ ಸೀಮಾನಿರ್ಣಯ ಕಾರ್ಯ ಅರಂಭವಾಗಲಿದೆ. ಈ ಪ್ರಕ್ರಿಯೆ 2028ರ ವೇಳೆಗೆ ಪೂರ್ಣಗೊಳ್ಳುವ ನಿರೀಕ್ಷೆ ಇದೆ. ಇದು ಸಾಧ್ಯವಾದರೆ 2029ರ ಲೋಕಸಭೆ ಚುನಾವಣೆ ವೇಳೆ ವಿವಿಧ ರಾಜ್ಯಗಳಲ್ಲಿನ ಲೋಕಸಭೆ ಸೀಟುಗಳ ಸಂಖ್ಯೆಯಲ್ಲಿ ಬದಲಾವಣೆಯಾಗಲಿದ್ದು, ಒಟ್ಟು ಸಂಸತ್ ಸ್ಥಾನಗಳ ಸಂಖ್ಯೆ ಹೆಚ್ಚುವ ಸಾಧ್ಯತೆ ಇದೆ. ಜಾತಿ ಗಣತಿ ನಡೆಸುವಂತೆ ವಿವಿಧ ವಿರೋಧ ಪಕ್ಷಗಳು ಒತ್ತಾಯಿಸುತ್ತಿರುವುದರ ನಡುವೆ ಈ ಬೆಳವಣಿಗೆ ನಡೆದಿದೆ. ಆದರೆ ಜನಗಣತಿ ಕುರಿತು ಕೇಂದ್ರ ಸರ್ಕಾರ ಇನ್ನೂ ಸ್ಪಷ್ಟ ನಿರ್ಧಾರ ತೆಗೆದುಕೊಂಡಿಲ್ಲ ಎನ್ನಲಾಗಿದೆ. ಜನಗಣತಿ ಪ್ರಕ್ರಿಯೆ ಕುರಿತಾದ ವಿವರಗಳನ್ನು ಈವರೆಗೂ ಬಹಿರಂಗಪಡಿಸಿಲ್ಲ.

ಮುಂದಿನ ವರ್ಷ ನಡೆಯಲಿರುವ ಜನಗಣತಿಯು ಸಾಮಾನ್ಯ ವರ್ಗ ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಒಳಗಿನ ಉಪ ಜಾತಿಗಳ ಸಮೀಕ್ಷೆಗಳನ್ನು ಸಹ ಒಳಗೊಳ್ಳಬಹುದು ಎಂದು ಮೂಲಗಳು ತಿಳಿಸಿವೆ. ಈ ಮೊದಲು ಸಾಮಾನ್ಯವಾಗಿ ಧರ್ಮ ಮತ್ತು ಸಾಮಾಜಿಕ ವರ್ಗದ ವರ್ಗೀಕರಣದ ಜತೆಯಲ್ಲಿ ಸಾಮಾನ್ಯ, ಪರಿಶಿಷ್ಟ ಜಾತಿ ಹಾಗೂ ಪರಿ ಶಿಷ್ಟ ಪಂಗಡಗಳ ವರ್ಗೀಕರಣ ನಡೆಯುತ್ತಿತ್ತು.

**ದೇಶಾದ್ಯಂತ ಜಾತಿ ಗಣತಿ ನಡೆಸುವಂತೆ ಆಗ್ರಹಿಸಿ ವಿರೋಧ ಪಕ್ಷಗಳು ಸದ್ದು ಮಾಡುತ್ತಿವೆ. ಆದರೆ ಹತ್ತು ವರ್ಷಕ್ಕೊಮ್ಮೆ ನಡೆಯಬೇಕಾದ ಜನಗಣತಿ ನಾಲ್ಕು ವರ್ಷ ಕಳೆದರೂ ಇನ್ನೂ ನಡೆದಿಲ್ಲ. 2011ರಲ್ಲಿ ನಡೆಯಬೇಕಿದ್ದ ಜನಗಣತಿ 2025ರಲ್ಲಿ ಆರಂಭವಾಗಲಿದೆ ಎಂದು ವರದಿ ತಿಳಿಸಿದೆ. ಜನ ಗಣತಿ ಮುಗಿದ ಬಳಿಕ ಲೋಕಸಭೆ ಸೀಟುಗಳ ಸೀಮಾ ನಿರ್ಣಯ ಕೂಡ ನಡೆಯಲಿದೆ.**

ಜನಗಣತಿ ಕುರಿತಾದ ವರದಿ ಬೆನ್ನಲ್ಲೇ ಜಾತಿ ಗಣತಿ ಬಗೆಗಿನ ಚರ್ಚೆ ಮತ್ತೆ ಶುರುವಾಗಿದೆ. ಜಾತಿ ಗಣತಿ ನಡೆಸಲು ಕೇಂದ್ರ ಸರ್ಕಾರ ನಿರಾಕರಿಸುತ್ತಿರುವುದು ಇತರೆ ಹಿಂದುಳಿದ ವರ್ಗಗಳ (ಒಬಿಸಿ) ಸಮುದಾಯಗಳಿಗೆ ಎಸಗುತ್ತಿರುವ ದ್ರೋಹ ಎಂದು ಕಾಂಗ್ರೆಸ್ ನಾಯಕ ಮಾಣಿಕ್ಕಂ ಟ್ಯಾಗೋರ್ ವಾಗ್ದಾಳಿ ನಡೆಸಿದ್ದಾರೆ.

ರಿಜಿಸ್ಟ್ರಾರ್ ಜನರಲ್ ಮತ್ತು ಭಾರತೀಯ ಜನಗಣತಿ ಆಯುಕ್ತರಾಗಿರುವ ಮೃತ್ಯುಂಜಯ್ ಕುಮಾರ್ ನಾರಾಯಣ್ ಅವರ ಕೇಂದ್ರೀಯ ನಿಯೋಜನೆಯನ್ನು ಇತ್ತೀಚೆಗಷ್ಟೆ 2026ರ ಆಗಸ್ಟ್‌ವರೆಗೂ ವಿಸ್ತರಿಸಲಾಗಿತ್ತು. ಇದು ಜನಗಣತಿ ಶೀಘ್ರವೇ ಆರಂಭವಾಗಲಿದೆ ಎಂಬ ಸುಳಿವು ನೀಡಿದೆ.

2011ರಲ್ಲಿ ನಡೆದಿದ್ದ ಕೊನೆಯ ಜನಗಣತಿ ಪ್ರಕಾರ ದೇಶದಲ್ಲಿ 121 ಕೋಟಿ ಜನಸಂಖ್ಯೆ ಇರುವುದಾಗಿ ವರದಿಯಾಗಿತ್ತು. ಆಗ ಅದು ಶೇ 17.7ರಷ್ಟು ಬೆಳವಣಿಗೆ ತೋರಿಸಿತ್ತು. ಆದರೆ ಈಗ ಅದು 144 ಕೋಟಿಯನ್ನೂ ಮೀರಿ ಚೀನಾವನ್ನು ಹಿಂದಿಕ್ಕಿದೆ.

### ಸಮಯ ಬದಲಾಗುವ ಸಾಧ್ಯತೆ

**ಕೋವಿಡ್ ಕಾರಣದಿಂದ ಮುಂದೂಡಿಕೆ ಜನಗಣತಿಯು ಸಾಮಾನ್ಯವಾಗಿ ಪ್ರತಿ ಹತ್ತು ವರ್ಷಗಳಿಗೆ ಒಮ್ಮೆ ನಡೆಯುತ್ತದೆ. 2011ರಲ್ಲಿ ದೇಶಾದ್ಯಂತ ಜಾತಿ ಗಣತಿ ನಡೆದಿತ್ತು. ರಾಷ್ಟ್ರೀಯ ಜನಸಂಖ್ಯಾ ನೋಂದಣಿಯನ್ನು (ಎನ್‌ಪಿಆರ್) ಅಪ್‌ಡೇಟ್ ಮಾಡುವ ಈ ಪ್ರಕ್ರಿಯೆಯು 2021ರಲ್ಲಿ ನಿಗದಿಯಾಗಿತ್ತು. ಆದರೆ ಕೋವಿಡ್ ಸಾಂಕ್ರಾಮಿಕ ಕಾರಣದಿಂದ ಮುಂದೂಡಿಕೆಯಾಗಿತ್ತು. ನಂತರ ಗಣತಿ ನಡೆಸಲು ಕೇಂದ್ರ ಸರ್ಕಾರ ಮುಂದಾಗಿರಲಿಲ್ಲ. ಈ ಬದಲಾವಣೆಯಿಂದ ಇನ್ನು ಗಣತಿ ನಡೆಯುವ ನಿಗದಿತ ಸಮಯ ಕೂಡ ಬದಲಾಗುವ ಸಾಧ್ಯತೆ ಇದೆ.**

## ಮೈಕ್ರೋಸಾಫ್ಟ್ ಸಿಇಒ ಸತ್ಯ ನಾದೆಲ್ಲಾ ಭೇಟಿಯಾದ ಆಂಧ್ರ ಸಚಿವ ನಾರಾ ಲೋಕೇಶ್



**ಅಮರಾವತಿ:** ಆಂಧ್ರಪ್ರದೇಶದ ಸಚಿವ ನಾರಾ ಲೋಕೇಶ್ ಅವರು ಮಂಗಳವಾರ ಮೈಕ್ರೋಸಾಫ್ಟ್ ಸಿಇಒ ಸತ್ಯ ನಾದೆಲ್ಲಾ ಅವರನ್ನು ಭೇಟಿ ಮಾಡಿದ್ದು, ರಾಜ್ಯದಲ್ಲಿ ಡಿಜಿಟಲ್ ಪರಿವರ್ತನೆ ಮತ್ತು ಅವಕಾಶಗಳನ್ನು ಹೆಚ್ಚಿಸಲು ಸಹಕಾರಿ ಪ್ರಯತ್ನಗಳ ಬಯಕೆಯನ್ನು ವ್ಯಕ್ತಪಡಿಸಿದ್ದಾರೆ. ಪ್ರಸ್ತುತ ಯುಎಸ್‌ಎ ಪ್ರವಾಸದಲ್ಲಿರುವ ಲೋಕೇಶ್ ಅವರು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ರಾಜ್ಯದಲ್ಲಿ ಐಟಿಯನ್ನು ಮುನ್ನಡೆಸುವಲ್ಲಿ ಟೆಕ್ ದೈತ್ಯರ ಮಾರ್ಗದರ್ಶನ ಮತ್ತು ಬೆಂಬಲವನ್ನು ಕೋರುವುದಾಗಿ ಹೇಳಿದ್ದಾರೆ.

ಲೋಕೇಶ್ ಅವರು ಅಕ್ಟೋಬರ್ 29 ರಂದು ವೇಗಾಸ್‌ನಲ್ಲಿ ನಡೆಯಲಿರುವ ಅಲೈಯನ್ಸ್ ಸಿನರ್ಜಿ ಸಮೇಳನದಲ್ಲಿ ಭಾಗವಹಿಸಲಿದ್ದಾರೆ ಮತ್ತು ಅಕ್ಟೋಬರ್ 31 ರಂದು ಅಮೇರಿಕಾದ ಅಟ್ಲಾಂಟಾದಲ್ಲಿ ಮಾಜಿ ಮುಖ್ಯಮಂತ್ರಿ ಎನ್. ಟಿ. ರಾಮರಾವ್ ಅವರ ವಿಗ್ರಹವನ್ನು ಅನಾವರಣಗೊಳಿಸಲಿದ್ದಾರೆ.

ಅವರು ನಿನ್ನೆ ಟೆಸ್ಲಾ ಪ್ರಧಾನ ಕಛೇರಿಗೆ ಭೇಟಿ ನೀಡಿದರು ಮತ್ತು ಆಸ್ಟಿನ್‌ನಲ್ಲಿ ಅದರ ಮುಖ್ಯ ಹಣಕಾಸು ಅಧಿಕಾರಿ ವೈಭವ್ ತನೇಜಾ ಅವರನ್ನು ಭೇಟಿ ಮಾಡಿ ದರು ಮತ್ತು ಅನಂತಪುರ ಜಿಲ್ಲೆಯನ್ನು ಅದರ ಎಲೆಕ್ಟ್ರಿಕ್ ವಾಹನಗಳು ಮತ್ತು ಬ್ಯಾಟರಿ ಘಟಕ ಗಳಿಗೆ ಪರಿಪೂರ್ಣ ಸ್ಥಳವೆಂದು ಘೋಷಿಸಿದರು.

**ಆಂಧ್ರಪ್ರದೇಶದಲ್ಲಿ ಐಟಿ , ಎಐ ಮತ್ತು ಕೌಶಲ್ಯ ಅಭಿವದ್ಧಿಯನ್ನು ಅಭಿವದ್ಧಿಪಡಿಸುವಲ್ಲಿ ಅವರ ಅಮೂಲ್ಯವಾದ ಮಾರ್ಗದರ್ಶನ ಮತ್ತು ಬೆಂಬಲ ವನ್ನು ಕೋರಿದರು. ರಾಜ್ಯದಲ್ಲಿ ಡಿಜಿಟಲ್ ರೂಪಾಂತರ ಮತ್ತು ಅವಕಾಶಗಳನ್ನು ಹೆಚ್ಚಿಸಲು ಸಹಯೋಗದ ಪ್ರಯತ್ನಗಳನ್ನು ಎದುರು ನೋಡುತ್ತಿದ್ದೇನೆ ಎಂದು ಲೋಕೇಶ್ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.**

## ನಿರಾಶ್ರಿತರ ಕೆಲಸ ನಿಷೇಧ ಮಸೂದೆ ಅಂಗೀಕಾರ



92 ಮತಗಳ ವಿರುದ್ಧ 10 ಮತ ಗಳೊಂದಿಗೆ ಮಸೂದೆ

**ಜೆರುಸಲೇಮ್:** ಆಕ್ಷೇಪಣೆಗಳ ಹೊರತಾಗಿಯೂ ಪ್ಯಾಲೆಸ್ತೀನ್ ನಿರಾಶ್ರಿತರಿಗಾಗಿ ವಿಶ್ವಸಂಸ್ಥೆಯ ಸಂಸ್ಥೆ, ಇಸ್ರೇಲ್ ಮತ್ತು ಆಕ್ರಮಿತ ಪೂರ್ವ ಜೆರುಸಲೆಮ್‌ನಲ್ಲಿ ಕೆಲಸ ಮಾಡುವುದನ್ನು ನಿಷೇಧಿಸುವ ಮಸೂದೆಯನ್ನು ಇಸ್ರೇಲ್‌ನ ಸಂಸತ್ತು ಅಂಗೀಕರಿಸಿದೆ. ಕಳೆದ ವರ್ಷ ಹಮಾಸ್‌ನ ಮಾರಣಾಂತಿಕ ಅಕ್ಟೋಬರ್ 7ರ ದಾಳಿಯ ನಂತರ ಗಾಜಾದಲ್ಲಿ ಯುದ್ಧ ಪ್ರಾರಂಭವಾದಾಗಿನಿಂದ ಹೆಚ್ಚಿದ ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಕಾರ್ಯ ಕರ್ತರ ಬಗ್ಗೆ ಟೀಕೆಗಳ ನಂತರ ಶಾಸಕರು ಪರವಾಗಿ 92 ಮತಗಳು ಮತ್ತು ವಿರುದ್ಧ 10 ಮತಗಳೊಂದಿಗೆ ಮಸೂದೆ ಅಂಗೀಕರಿಸಿದ್ದಾರೆ.

ಪ್ಯಾಲೇಸ್ತೇನಿಯನ್ ಪ್ರಾಂತ್ಯಗಳಾದ್ಯಂತ, ಪ್ಯಾಲೆಸ್ಟಿನಿಯನ್ ನಿರಾಶ್ರಿತರಿಗೆ ಏಳು ದಶಕಗಳಿಗಿಂ ತಲೂ ಹೆಚ್ಚು ಕಾಲ ಅಗತ್ಯ ನೆರವು ಮತ್ತು ಸಹಾಯ ವನ್ನು ಒದಗಿಸಿದೆ. ಇದು ಜಾರಿಗೆ ಬಂದರೆ ಗಾಜಾದಲ್ಲಿ ಮಾನವೀಯ ಕೆಲಸಕ್ಕೆ ಹೊಡೆತ ಬೀಳುತ್ತದೆ ಎಂದು ತಜ್ಞರು ಹೇಳಿದ್ದಾರೆ.

ವಿಶ್ವಸಂಸ್ಥೆಯ ಸದಸ್ಯ ರಾಷ್ಟ್ರ ವಿಶ್ವಸಂಸ್ಥೆ ಕೆಡವಲು ಕೆಲಸ ಮಾಡುತ್ತಿರುವುದು ಅತಿ ರೇಕದ ಸಂಗತಿಯಾಗಿದೆ, ಗಾಜಾದಲ್ಲಿ ಮಾನವೀಯ ಕಾರ್ಯಾಚರಣೆಯಲ್ಲಿ ಅತಿದೊಡ್ಡ ಪ್ರತಿಕ್ರಿಯೆಯಾಗಿದೆ ಎಂದು ಹೇಳಲಾಗಿದೆ.

ಯುದ್ಧ ನಿಲ್ಲಿಸುವಂತೆ ಅಮೆರಿಕಾ ಅಕ್ಟೋಬರ್ 15 ರಂದು ಇಸ್ರೇಲ್‌ಗೆ ಎಚ್ಚರಿಕೆ ನೀಡಿತ್ತು, ಗಾಜಾ ಪಟ್ಟಿಯನ್ನು ತಲುಪುವ ಸಹಾಯದ ಪ್ರಮಾಣ ಹೆಚ್ಚಿಸಲು 30 ದಿನಗಳನ್ನು ಹೊಂದಿದೆ ಅಥವಾ ಕೆಲವು ಮಿಲಿಟರಿ ಸಹಾಯವನ್ನು ತಡೆಹಿಡಿಯುವುದನ್ನು ಪರಿಗಣಿಸುತ್ತದೆ. ಬ್ರಿಟನ್‌ನ ವಿದೇಶಾಂಗ ಕಾರ್ಯದರ್ಶಿ ಡೇವಿಡ್ ಲ್ಯಾಮಿ ಇಸ್ರೇಲ್ ಯುಎನ್‌ಆರ್‌ಡಬ್ಲ್ಯುಎಯ ಕಾರ್ಯಾಚರಣೆಗಳನ್ನು ಸ್ಥಗಿತಗೊಳಿಸುವುದನ್ನು ಪರಿಗಣಿಸುತ್ತಿದೆ ಎಂದು ಗಾಢ ವಿಷಾದ ವ್ಯಕ್ತಪಡಿಸಿದ್ದಾರೆ.

### ನಿರ್ಣಾಯಕ ಪಾತ್ರ

**ಇದನ್ನು ಕಾರ್ಯಗತಗೊಳಿಸಿದರೆ, ಗಾಜಾದಲ್ಲಿ ಮತ್ತು ಪಶ್ಚಿಮ ಬ್ಯಾಂಕ್‌ನ ಹಲವಾರು ಭಾಗಗಳಲ್ಲಿ ಮಾನವೀಯ ಕಾರ್ಯಾಚರಣೆಯ ಮೇಲೆ ಪರಿಣಾಮ ಬೀರುವ ಪರಿಣಾಮ ಸೇರಿದಂತೆ ವಿಪತ್ತು'' ಎಂದು ಹೇಳಲಾಗಿದೆ. ಮತದಾನದ ಮೊದಲು, ಅಮೆರಿಕಾ ಮಸೂದೆಯ ಬಗ್ಗೆ ಆಳವಾದ ಕಾಳಜಿ ಎಂದು ಹೇಳಿದೆ, ಗಾಜಾ ಪಟ್ಟಿಯಲ್ಲಿ ಮಾನವೀಯ ಸಹಾಯ ವಿತರಿಸುವಲ್ಲಿ ಸಂಸ್ಥೆ ವಹಿಸುವ ನಿರ್ಣಾಯಕ ಪಾತ್ರ ಎಂದು ಹೇಳಿದೆ.**

## ಚೀನಾದ ಬಿಆರ್‌ಐ ಯೋಜನೆ ಒಪ್ಪಂದಕ್ಕೆ ವಿರೋಧ ವ್ಯಕ್ತಪಡಿಸಿದ ಬ್ರೆಜಿಲ್



**ಬೀಜಿಂಗ್:** ಚೀನಾದ ಮಹತ್ವಾಕಾಂಕ್ಷೆಯ 'ಬೆಲ್ಟ್ ಅಂಡ್ ರೋಡ್ ಇನಿಷಿಯೇಟಿವ್' (ಬಿಆರ್‌ಐ) ಯೋಜನೆ ಒಪ್ಪಂದಕ್ಕೆ ಬ್ರೆಜಿಲ್ ವಿರೋಧ ವ್ಯಕ್ತಪಡಿಸಿದೆ. ಈ ಹಿಂದೆ ಬ್ರಿಕ್ಸ್ ಒಕ್ಕೂಟದಲ್ಲಿರುವ ಭಾರತ ಈ ಯೋಜನೆಗೆ ಕೈಜೋಡಿಸಲು ಹಿಂದೇಟು ಹಾಕಿತ್ತು. ಇದೀಗ ಬ್ರೆಜಿಲ್ ಕೂಡ ವಿರೋಧ ವ್ಯಕ್ತಪಡಿಸಿದ್ದು ಚೀನಾಕ್ಕೆ ಭಾರಿ ಹಿನ್ನಡೆಯಾಗಿದೆ.

ಬೆಲ್ಟ್ ಅಂಡ್ ರೋಡ್ ಇನಿಶಿಯೇಟಿವ್‌ಗೆ ಬ್ರೆಜಿಲ್ ಕೈಜೋಡಿಸುತ್ತಿಲ್ಲ, ಬದಲಿಗೆ ಚೀನಾದ ಹೂಡಿಕೆದಾರರೊಂದಿಗೆ ಸಹಕರಿಸಲು ಬ್ರೆಜಿಲ್ ಪರ್ಯಾಯ ಮಾರ್ಗಗಳನ್ನು ಹುಡುಕಲಿದೆ' ಎಂದು ಬ್ರೆಜಿಲ್ ಅಧ್ಯಕ್ಷ ಲುಲಾ ಡ ಸಿಲ್ವಾ ಅವರ ವಿದೇಶಾಂಗ ವ್ಯವಹಾರಗಳ ಸಲಹೆಗಾರ ಸೆಲ್ಸ್ ಅಮೊರಿಮ್ ತಿಳಿಸಿದ್ದಾರೆ 'ಚೀನಾದೊಂದಿಗಿನ ನಮ್ಮ ಸಂಬಂಧವನ್ನು ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯಲು ಬಯಸುತ್ತೇವೆ ವಿನಃ ಈ ರೀತಿಯ ಒಪ್ಪಂದಕ್ಕೆ ಸಹಿ ಹಾಕುವುದಿಲ್ಲ. ಚೀನಾದ ಮೂಲ ಸೌಕರ್ಯ ಮತ್ತು ವ್ಯಾಪಾರ ಯೋಜನೆಗಳನ್ನು ವಿಮಾ ಪಾಲಿಸಿಗಳಂತೆ ತೆಗೆದುಕೊಳ್ಳಲು ಬ್ರೆಜಿಲ್ ಬಯಸುವುದಿಲ್ಲ' ಎಂದು ವಿವರಿಸಿದ್ದಾರೆ. ಚೀನಾವನ್ನು ಯೂರೋಪ್ ಸೇರಿದಂತೆ ಹಲವಾರು ರಾಷ್ಟ್ರಗಳನ್ನು ಸಂಪರ್ಕಿಸುವ ಯೋಜನೆಯೇ ಈ ಬೆಲ್ಟ್ ಅಂಡ್ ರೋಡ್ ಇನಿಷಿಯೇಟಿವ್.

**ಭಾರತವೂ ವಿರೋಧಿಸಿತ್ತು:** ಭಾರತದ ಸಾರ್ವಭೌಮತೆ ಹಾಗೂ ಸಮಗ್ರತೆಯನ್ನು ನಿರ್ಲಕ್ಷಿಸಿ ಈ ಯೋಜನೆಯನ್ನು ಕಾರ್ಯಗತಗೊಳಿಸಲು ಚೀನಾ ಮುಂದಾಗಿದೆ.

ಹೀಗಾಗಿ, ಮೊದಲಿನಿಂದಲೂ ಭಾರತ ಈ ಯೋಜನೆಯನ್ನು ವಿರೋಧಿಸುತ್ತಾ ಬಂದಿದ್ದು, ಈ ನಿಲುವಿನಲ್ಲಿ ಯಾವುದೇ ಬದಲಾವಣೆ ಇಲ್ಲ' ಎಂದು ಈ ಹಿಂದೆ ವಿದೇಶಾಂಗ ಸಚಿವಾಲಯದ ವಕ್ತಾರ ಅರಿಂದಮ್ ಬಾಗ್ಚಿ ಹೇಳಿದ್ದರು.


## ಸೇನಾ ನೆಲೆ ಮೇಲೆ ದಾಳಿ 40 ಯೋಧರ ಸಾವು

**ದಕಾರ್:** ಮಧ್ಯ ಆಫ್ರಿಕಾದ ಚಾಡ್ ದೇಶದ ಲೇಕ್ ಪ್ರಾಂತದಲ್ಲಿ ಮಿಲಿಟರಿ ನೆಲೆಯ ಮೇಲೆ ನಡೆದ ದಾಳಿಯಲ್ಲಿ ಸುಮಾರು 40 ಯೋಧರು ಸಾವನ್ನಪ್ಪಿರುವುದಾಗಿ ಅಧ್ಯಕ್ಷರ ವಕ್ತಾರರು ಹೇಳಿದ್ದಾರೆ. ದೇಶದ ಪಶ್ಚಿಮ ಭಾಗದಲ್ಲಿರುವ ನೌಬೋವಾ ಎಂಬ ಸೇನಾ ನೆಲೆಯ ಮೇಲೆ ಸೋಮವಾರ ನಸುಕಿನ ಜಾವ ಏಕಾಏಕಿ ದಾಳಿ ಮಾಡಿದ ಬೋಕೊ ಹರಾಮ್ ಉಗ್ರರು ಮನಸೋ ಇಚ್ಛೆ ಗುಂಡಿನ ದಾಳಿ ನಡೆಸಿದ್ದು, ಘಟನೆಯಲ್ಲಿ ಯುನಿಟ್ ಕಮಾಂಡರ್ ಕೂಡ ಮೃತಪಟ್ಟಿದ್ದಾರೆ.

ಘಟನೆ ಬಗ್ಗೆ ಆಘಾತ ವ್ಯಕ್ತಪಡಿಸಿರುವ ಚಾಡ್ ಅಧ್ಯಕ್ಷ ಮಹಮತ್ ಇಡ್ರಿಸ್ ಡೆಬಿ ಇಟ್ನೊ ಅವರು ಘಟನಾ ಸ್ಥಳಕ್ಕೆ ದೌಡಾಯಿಸಿದ್ದರು.

ನಮ್ಮ ಮೇಲೆ ದಾಳಿ ಮಾಡಿದ ಉಗ್ರರನ್ನು ಪ್ರತಿದಾಳಿ ಮಾಡಿ ಹತ್ಯೆ ಮಾಡಿದ್ದೇವೆ. ಸ್ಥಳದಲ್ಲಿ ಪರಿಸ್ಥಿತಿ ಸಹಜ ಸ್ಥಿತಿಗೆ ಬಂದಿದೆ ಎಂದು ಅವರು ತಿಳಿಸಿದ್ದಾರೆ. ಪಕ್ಕದ ನೈಜೀರಿಯಾ ಜೊತೆ ಗಡಿ ಸಂಘರ್ಷ ಹೊಂದಿರುವ ಚಾಡ್ ಮೇಲೆ ನೈಜಿರಿಯಾ ಮೂಲದ ಬೊಕೊ ಹರಾಮ್ ಉಗ್ರರೂ ಸಹ ಕೆಂಗೆಣ್ಣು ಬೀರಿದ್ದಾರೆ ಎನ್ನಲಾಗಿದೆ.

## ದೀಪಾವಳಿ ಆಚರಿಸಿದ ಬೈಡೆನ್



**ವಾಷಿಂಗ್ಟನ್:** ಅಮೆರಿಕಾ ಅಧ್ಯಕ್ಷೀಯ ಚುನಾವಣೆಗೆ ಕೆಲವೇ ದಿನಗಳು ಬಾಕಿ ಇರುವ ನಡುವೆ ಹಾಲಿ ಅಧ್ಯಕ್ಷ ಜೋ ಬೈಡೆನ್ ಅವರು ಶ್ವೇತಭವನದಲ್ಲಿ ಭಾರತೀಯ ಸಮುದಾಯದೊಂದಿಗೆ ದೀಪಾವಳಿ ಆಚರಿಸಿದ್ದಾರೆ. ಚುನಾವಣಾ ಪ್ರಚಾರದಲ್ಲಿ ನಿರತವಾಗಿದ್ದ ಹಾಲಿ ಉಪಾಧ್ಯಕ್ಷೆ ಹಾಗು ಡೆಮಾಕ್ರಟಿಕ್ ಪಕ್ಷದ ಅಧ್ಯಕ್ಷೀಯ ಅಭ್ಯರ್ಥಿ ಕಮಲಾ ಹ್ಯಾರಿಸ್ ಗೈರು ಹಾಜರಾಗಿದ್ದರು. ದೀಪಾವಳಿ ಹಬ್ಬಕ್ಕೂ ಮುನ್ನ ಶ್ವೇತಭವನದಲ್ಲಿ ಅಮೆರಿಕ ಅಧ್ಯಕ್ಷ ಜೋ ಬೈಡನ್ ದೀಪಾವಳಿ ಆಚರಣೆ ನಡೆಸಿದರು. ಈ ವೇಳೆ ಅಧಿಕಾರಿಗಳು ಮತ್ತು ಕಾರ್ಪೋರೇಟ್‌ರ್ ಅಧಿಕಾರಿಗಳು ಸೇರಿದಂತೆ 600ಕ್ಕೂ ಹೆಚ್ಚು ಪ್ರಸಿದ್ಧ ಭಾರತೀಯ ಅಮೆರಿಕನ್ನರು ಭಾಗವಹಿಸಿದ್ದರು. ಭಾರತೀಯ ಸಮುದಾಯವನ್ನುದ್ದೇಶಿಸಿ ಮಾತನಾಡಿದ ಜೋ ಬೈಡೆನ್ ಮಾತನಾಡಿ ಅಮೇರಿಕಾ ಅಧ್ಯಕ್ಷನಾಗಿ, ಶ್ವೇತಭವನದಲ್ಲಿ ಇದುವರೆಗೆ ಅತಿದೊಡ್ಡ ದೀಪಾವಳಿ ಸ್ವಾಗತ ಆಯೋಜಿಸಲು ಗೌರವ ವಿದೆ. ದೊಡ್ಡ ವ್ಯವಹಾರವಾಗಿದೆ. ಸೆನೆಟರ್, ಉಪಾಧ್ಯಕ್ಷ ಮತ್ತು ಅಧ್ಯಕ್ಷರಾಗಿ ದಕ್ಷಿಣ ಏಷ್ಯಾದ ಅಮೆರಿಕನ್ನರು ಸಿಬ್ಬಂದಿಯ ಪ್ರಮುಖ ಸದಸ್ಯರಾಗಿ ಇದು ಹೆಮ್ಮೆಯ ಸಂಗತಿ ಎಂದಿದ್ದಾರೆ. ಕಮಲಾ ಹ್ಯಾರೀಸ್ ಅವರಿಂದ ಹಿಡಿದು ಡಾ. ವಿವೇಕ್ ಮೂರ್ತಿಯವರಿಂದ ಹಿಡಿದು ನಮ್ಮಿ ಹಲವರ ವರೆಗೆ, ಅಮೆರಿಕದಂತೆ ಕಾಣುವ ಆಡಳಿತವನ್ನು ಹೊಂದಲು ಬದ್ಧತೆ ಉಳಿಸಿಕೊಂಡಿದ್ದೇನೆ ಎಂದು ಶ್ವೇತಭವನದ ಪೂರ್ವ ಕೊಠಡಿಯಲ್ಲಿ ಅವರು ಹೇಳಿದ್ದಾರೆ. ದೀಪಾವಳಿ ಆಚರಣೆಯಲ್ಲಿ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಮತ್ತು ಪ್ರಥಮ ಮಹಿಳೆ ಡಾ.ಜಿಲ್ ಬಿಡೆನ್ ಭಾಗವಹಿಸಲು ಸಾಧ್ಯವಾಗಲಿಲ್ಲ. ಇವರಿಬ್ಬರು ಅಧ್ಯಕ್ಷೀಯ ಚುನಾವಣಾ ಪ್ರಚಾರದಲ್ಲಿ ನಿರತರಾಗಿದ್ದರು ಎಂದು ಶ್ವೇತಭವನ ತಿಳಿಸಿದೆ. ಅಮೆರಿಕಾ ಅಧ್ಯಕ್ಷರಾಗಿ ಜೋ ಬೈಡೆನ್ ಅವರಿಗೆ ಇದು ಕೊನೆಯ ದೀಪಾವಳಿ ಹಬ್ಬದ ಸಂಬ್ರಮವಾಗಿದೆ. ಜೋ ಬೈಡೆನ್ ಅವರ ದೀಪಾವಳಿ ಹಬ್ಬದ ಶುಭಾಷಯದ ಹೇಳಿಕೆಯನ್ನು ವೈಸ್ ಅಡ್ಮಿರಲ್ ವಿವೇಕ್ ಎಚ್. ಮೂರ್ತಿ, ಸರ್ಜನ್ ಜನರಲ್ ಅಂತರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ರೆಕಾರ್ಡ್ ಮಾಡಿದ ವೀಡಿಯೊ ಸಂದೇಶ ಕಳುಹಿಸಲಾಗಿದೆ.

## ಉತ್ತರ ಗಾಜಾ ಮೇಲೆ ಇಸ್ರೇಲ್ ದಾಳಿ 60 ಮಂದಿ ಸಾವು, 17 ಜನರ ನಾಪತ್ತೆ



**ಗಾಜಾ ಪಟ್ಟಿ:** ಉತ್ತರ ಗಾಜಾದಲ್ಲಿ ಸ್ಥಳಾಂತರಗೊಂಡ ಪ್ಯಾಲೆಸ್ಟೀನಿಯನ್ನರು ಆಶ್ರಯ ಪಡೆದಿದ್ದ 5 ಅಂತಸ್ತಿನ ಕಟ್ಟಡದ ಮೇಲೆ ಮಂಗಳವಾರ ಬೆಳಿಗ್ಗೆ ಇಸ್ರೇಲ್ ವಾಯು ದಾಳಿ ನಡೆಸಿದ್ದು, 60 ಮಂದಿ ಮೃತಪಟ್ಟಿದ್ದಾರೆ. ಇತರೆ 17 ಮಂದಿ ನಾಪತ್ತೆಯಾಗಿದ್ದಾರೆ ಎಂದು ಗಾಜಾ ಆರೋಗ್ಯ ಸಚಿವಾಲಯ ತಿಳಿಸಿದೆ.

ವರ್ಷಕ್ಕೂ ಅಧಿಕ ಸಮಯದಿಂದ ನಡೆಯುತ್ತಿರುವ ಇಸ್ರೇಲ್-ಗಾಜಾ ಸಂಘರ್ಷದಲ್ಲಿ ಮೃತಪಟ್ಟವರ ಸಂಖ್ಯೆ 43,000 ದಾಟಿದೆ. ಇಸ್ರೇಲ್ ಸಂಸತ್ತಿನಲ್ಲಿ ಸೋಮವಾರ ಎರಡು ಕಾಯ್ದೆಗಳನ್ನು ಅಂಗೀಕರಿಸಲಾಗಿದ್ದು, ಅವುಗಳು ಪ್ಯಾಲೆಸ್ಟೀನ್ ನಿರಾ ಶ್ರಿತರಿಗೆ ವಿಶ್ವಸಂಸ್ಥೆ ಕೈಗೊಂಡ ಕ್ರಮಗಳಿಗೆ ವಿರುದ್ಧವಾಗಿವೆ.

ವಿಶ್ವಸಣಸ್ಥೆಯ ಯುಎನ್‌ಆರ್‌ಡಬ್ಲ್ಯುಎ ಗಾಜಾದಲ್ಲಿ ನೆರವು ನೀಡುತ್ತಿರುವ ಅತಿ ದೊಡ್ಡ ಏಜೆನ್ಸಿಯಾಗಿದೆ. ಇಸ್ರೇಲ್‌ನ ಈ ಕ್ರಮವು ವಿಶ್ವಸಂಸ್ಥೆ ಜೊತೆ ದೇಶದ ಸಂಬಂಧ ಕಡಿತಗೊಳ್ಳುವ ಜೊತೆಗೆ ಇಸ್ರೇ ಲ್‌ನ ವಿಶ್ವಸಂಸ್ಥೆಯ ಕೆಲಸಗಳಿಗೆ ತಡೆ ಆಗಲಿದೆ ಎಂದು ವರದಿ ತಿಳಿಸಿದ.

### ಅನುಮಾನ ಮೂಡುತ್ತಿದೆ

**ಈ ಬೆಳವಣಿಗೆ ಹಿನ್ನೆಲೆಯಲ್ಲಿ ವಿಶ್ವಸಂಸ್ಥೆಯ ಏಜೆನ್ಸಿಯು ಗಾಜಾ ಮತ್ತು ಇಸ್ರೇಲ್ ಆಕ್ರಮಿತ ವೆಸ್ಟ್ ಬ್ಯಾಂಕ್‌ನಲ್ಲಿ ಮೂಲಭೂತ ನೆರವನ್ನು ಮುಂದುವರಿಸಲಿದೆಯೇ ಎಂಬ ಅನುಮಾನ ಮೂಡುತ್ತಿದೆ ಎಂದು ವರದಿ ತಿಳಿಸಿದೆ.**

## UNRWA ನಿಷೇಧಕ್ಕೆ ಕಾನೂನು ಅಂಗೀಕರಿಸಿದ ಇಸ್ರೇಲ್

**ಕೈರೋ:** ವಿಶ್ವಸಂಸ್ಥೆ ಪರವಾಗಿ ಕೆಲಸ ಮಾಡುವ ನಿರಾಶ್ರಿತರಗಾಗಿನ ಕಾರ್ಯನಿರತ ಸಂಸ್ಥೆ UNRWA ತನ್ನ ದೇಶದೊಳಗೆ ಕಾರ್ಯನಿರ್ವಹಿಸದಂತೆ ನಿಷೇಧ ಹೇರಿ ಇಸ್ರೇಲ್ ಸಂಸತ್ತು ಕಾನೂನು ಅಂಗೀಕರಿಸಿದೆ. ಗಾಜಾದಲ್ಲಿ ಈಗಾಗಲೇ ಸ್ಥಿತಿ ಹದಗೆಟ್ಟಿದ್ದು, UNRWA ದೇಶದಲ್ಲಿದ್ದರೆ ಅಲ್ಲಿಯ ಜನರ ಸ್ಥಿತಿ ಇನ್ನಷ್ಟು ಹದಗೆಡುವ ಆತಂಕದಿಂದಾಗಿ ಸಂಸ್ಥೆಗೆ ನಿಷೇಧ ಏರಿದೆ ಎಂದು ರಾಯಿಟರ್ಸ್ ವರದಿ ಮಾಡಿದೆ. ಇಸ್ರೇಲ್ ವಿರುದ್ಧ ಭಯೋತ್ಪಾದಕ ಚಟುವಟಿಕೆಗಳಲ್ಲಿ ತೊಡಗಿರುವ UNRWA ಕಾರ್ಯಕರ್ತರು ಜವಾಬ್ದಾರರಾಗಿರಬೇಕು ಎಂದು ಪ್ರಧಾನಿ ಬೆಂಜಮಿನ್ ನೆತನ್ಯಾಹು ಹೇಳಿದ್ದಾರೆ. 2023ರ ಅ.7ರಂದು ದಕ್ಷಿಣ ಇಸ್ರೇಲ್ ಮೇಲೆ ದಾಳಿ ನಡೆಸಿದ್ದ ವೇಳೆ ಸಂಸ್ಥೆಯ ಕೆಲವು ಸಿಬ್ಬಂದಿ ಪ್ಯಾಲೆಸ್ಟೀನ್ ಸಶಸ್ತ್ರ ಗುಂಪುಗಳಲ್ಲಿ ಸದಸ್ಯರಾಗಿರುವುದಾಗಿ ಇಸ್ರೇಲ್ ಅಧಿಕಾರಿಗಳು ಉಲ್ಲೇಖಿಸಿದ್ದಾರೆ. ಈ ಕುರಿತು ಪ್ರತಿಕ್ರಿಯೆ ನೀಡಿದ UNRWA ಮುಖ್ಯಸ್ಥ ಲಾಝುರಿನಿ, 'ಸಂಸ್ಥೆಯನ್ನು ಅಪಖ್ಯಾತಿಗೊಳಿಸಲು ಮತ್ತು ಪ್ಯಾಲೆಸ್ಟೀನ್ ನಿರಾಶ್ರಿತರಿಗೆ ನೆರವು ಮತ್ತು ಸೇವೆಗಳನ್ನು ಒದಗಿಸುವುದನ್ನು ಕಾನೂನುಬದ್ಧಗೊಳಿಸದಿರಲು ನಡೆಸಿದ ಅಭಿಯಾನಗಳಲ್ಲಿ ಇದು ಒಂದು' ಎಂದು ಎಕ್ಸ್‌ನಲ್ಲಿ ಬರೆದುಕೊಂಡಿದ್ದಾರೆ.

## ಜಾರ್ಖಂಡ್‌ನಲ್ಲಿ ಮದ್ಯದ ಉದ್ಯಮಿಗಳು-ಮಧ್ಯವರ್ತಿಗಳಿಗೆ ಸಂಬಂಧಿಸಿದ ಸ್ಥಳಗಳ ಮೇಲೆ ಇಡಿ ದಾಳಿ

**ರಾಂಚಿ:** ಐಎಎಸ್ ಅಧಿಕಾರಿ ವಿನಯ್ ಕುಮಾರ್ ಚೌಬೆ, ಇತರ ಕೆಲವು ಸರ್ಕಾರಿ ಅಧಿಕಾರಿಗಳು, ಜಾರ್ಖಂಡ್‌ನಲ್ಲಿ ಹಲವಾರು ಮದ್ಯದ ಉದ್ಯಮಿಗಳು ಮತ್ತು ಮಧ್ಯವರ್ತಿಗಳಿಗೆ ಸಂಬಂಧಿಸಿದ ಸ್ಥಳಗಳ ಮೇಲೆ ಜಾರಿ ನಿರ್ದೇಶನಾಲಯ ಇಂದು ದಾಳಿ ನಡೆಸಿದೆ. ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್‌ಎ) ಅಡಿಯಲ್ಲಿ ಫೆಡರಲ್ ತನಿಖಾ ಸಂಸ್ಥೆಯ ಜಾರ್ಖಂಡ್ ಕಚೇರಿಯು ಇತ್ತೀಚೆಗೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಿದ ನಂತರ ರಾಂಚಿ ಮತ್ತು ರಾಯ್‌ಪುರದ 15 ಆವರಣದಲ್ಲಿ ಶೋಧ ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕೇಂದ್ರೀಯ ಮೀಸಲು ಪೊಲೀಸ್ ಪಡೆಯ ತಂಡಗಳು ಇಡಿ ಟೀಮ್‌ಗೆ ಭದ್ರತೆ ಒದಗಿಸಿದೆ. ಛತ್ತೀಸ್‌ಗಢ ಪೊಲೀಸ್ ಭ್ರಷ್ಟಾಚಾರ ನಿಗ್ರಹ ದಳ (ಎಸಿಬಿ) ರಾಯ್‌ಪುರದಲ್ಲಿ ಚೌಬೆ, ಛತ್ತೀಸ್‌ಗಢದ ನಿವೃತ್ತ ಐಎಎಸ್ ಅಧಿಕಾರಿ ಅನಿಲ್ ತುತೇಜಾ, ಅನ್ವರ್ ಧೇಬರ್, ರಾಯ್‌ಪುರ ಮೇಯರ್ ಐಜಾಜ್ ಧೇಬರ್ ಅವರ ಹಿರಿಯ ಸಹೋದರ ಭಾರತೀಯ ಅರುಣಪತಿ ತ್ರಿಪಾಠಿ ಅವರನ್ನು ಹೆಸರಿಸಿ ಸೆಪ್ಟೆಂಬರ್ 7ರಂದು ದಾಖಲಿಸಿದ ಎಫ್‌ಐಆರ್ ಅನ್ನು ಇಡಿ ಗಮನಕ್ಕೆ ತೆಗೆದುಕೊಂಡಿದೆ.

1999ರ ಬ್ಯಾಚ್‌ನ ಜಾರ್ಖಂಡ್ ಕೇಡರ್‌ನ ಐಎಎಸ್ ಅಧಿಕಾರಿ ಚೌಬೆ, ಪ್ರಸ್ತುತ ಜಾರ್ಖಂಡ್ ಪಂಚಾಯತ್ ರಾಜ್ ಇಲಾಖೆಯ ಕಾರ್ಯದರ್ಶಿ, ರಾಜ್ಯದ ಅಬಕಾರಿ ಇಲಾಖೆಯ ಜಂಟಿ ಕಾರ್ಯದರ್ಶಿ ಗಜೇಂದ್ರ ಸಿಂಗ್, ಮದ್ಯದ ವ್ಯಾಪಾರಿಗಳು ಮತ್ತು ಸಂಬಂಧಿತ ವ್ಯಕ್ತಿಗಳ ಸ್ಥಳಗಳನ್ನು ಶೋಧಿಸಲಾಗುತ್ತಿದೆ ಎಂದು ಇಡಿ ಅಧಿಕಾರಿಗಳು ತಿಳಿಸಿದ್ದಾರೆ.

ಚೌಬೆ ಅವರು ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೆನ್ ಅವರ ಪ್ರಧಾನ ಕಾರ್ಯದರ್ಶಿಯಾಗಿದ್ದರು ಮತ್ತು ಜಾರ್ಖಂಡ್‌ನಲ್ಲಿ 2022 ರ ಅಬಕಾರಿ ನೀತಿಯ ಅನುಷ್ಠಾನದ ಸಮಯದಲ್ಲಿ ರಾಜ್ಯದ ಅಬಕಾರಿ ಕಾರ್ಯದರ್ಶಿಯಾಗಿದ್ದರು.

# ಆಯುಷ್ಮಾನ್ ಭಾರತ ಯೋಜನೆಯಡಿ ಆಸ್ಪತ್ರೆಗಳಲ್ಲಿ ಉಚಿತ ಚಿಕಿತ್ಸೆ

## ದೆಹಲಿಯ ಎಎಪಿ, ಬಂಗಾಳದ ಟಿಎಂಸಿ 'ಆಯುಷ್ಮಾನ್ ಭಾರತ' ಯೋಜನೆ ಜಾರಿಗೆ ಅಡ್ಡಗಾಲು: ಪ್ರಧಾನಿ ಮೋದಿ



ಎಪ್ಪತ್ತು ವರ್ಷಕ್ಕಿಂತ ಮೇಲ್ಪಟ್ಟವರಿಗೆ

**ನವದೆಹಲಿ:** ದೆಹಲಿಯ ಆಮ್ ಆದ್ಮ ಪಕ್ಷ (ಎಎಪಿ), ಪಶ್ಚಿಮ ಬಂಗಾಳದ ತೃಣಮೂಲ ಕಾಂಗ್ರೆಸ್ (ಟಿಎಂಸಿ) ಸರ್ಕಾರವು ರಾಜಕೀಯ ಕಾರಣಗಳಿಂ ದಾಗಿ ಆಯುಷ್ಮಾನ್ ಭಾರತ ಯೋಜನೆ ಯನ್ನು ಜಾರಿಗೊಳಿಸಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ವಾಗ್ದಾಳಿ ನಡೆಸಿದ್ದಾರೆ.

ನಗರದಲ್ಲಿ ಪ್ರಧಾನಿ ಮೋದಿ ಅವರು ಮಂಗಳ ವಾರ ಒಂಬತ್ತನೇ ಆಯುರ್ವೇದ ದಿನ, ಧನ್ವಂತ ರಿಯ ಜನ್ಮದಿನದ ಪ್ರಯುಕ್ತ ಆರೋಗ್ಯ ಕ್ಷೇತ್ರದ 12,850 ಕೋಟಿ ವೆಚ್ಚದ ಪ್ರಮುಖ ಅಭಿವೃದ್ಧಿ ಯೋಜನೆಗಳನ್ನು ಅನಾವರಣಗೊಳಿಸಿದ್ದಾರೆ. ಬಳಿಕ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿರುವ ಅವರು, ದೇಶದಾದ್ಯಂತ 70 ವರ್ಷಕ್ಕಿಂತ ಮೇಲ್ಪಟ್ಟವರಿಗೆ ಆಯು ಷ್ಮಾನ್ ಭಾರತ ಯೋಜನೆಯಡಿ ಆಸ್ಪತ್ರೆ ಗಳಲ್ಲಿ ಉಚಿತ ಚಿಕಿತ್ಸೆ ನೀಡಲಾಗುತ್ತದೆ' ಎಂದು ಅವರು ಪುನರುಚ್ಚರಿಸಿದ್ದಾರೆ. ದೆಹಲಿ ಮತ್ತು ಪಶ್ಚಿಮ ಬಂಗಾಳದಲ್ಲಿ ಆಯುಷ್ಮಾನ್ ಭಾರತ್ ಯೋಜ ನೆಯನ್ನು ಅನುಷ್ಠಾನಗೊಳಿಸದಿರುವುದರಿಂದ ಅಲ್ಲಿನ ಹಿರಿಯ ನಾಗರಿಕರಿಗೆ ಆರೋಗ್ಯ ಸೌಲಭ್ಯಗಳ ಪ್ರಯೋಜನ ಪಡೆಯಲು ಸಾಧ್ಯವಾಗುತ್ತಿಲ್ಲ ಎಂದು ಮೋದಿ ಕಿಡಿಕಾರಿದ್ದಾರೆ. ಪಂಚಕರ್ಮ ಆಸ್ಪತ್ರೆ, ಆಯುರ್ವೇದ ಔಷಧಾಲಯ, ಕ್ರೀಡಾ ಔಷಧ ಘಟಕ, ಕೇಂದ್ರ ಗ್ರಂಥಾಲಯ, ಐಟಿ ಮತ್ತು ಸ್ಟಾರ್ಟ್‌ಅಪ್ ಇನ್‌ಕ್ಯುಬೇಶನ್ ಸೆಂಟರ್ ಮತ್ತು 500 ಆಸನಗಳ ಆಡಿಟೋರಿಯಂ ಒಳಗೊಂಡಿರುವ ಭಾರತದ ಮೊದಲ ಅಖಿಲ ಭಾರತ ಆಯುರ್ವೇದ ಸಂಸ್ಥೆಯ ಎರಡನೇ ಹಂತವನ್ನು ಮೋದಿ ಉದ್ಘಾಟಿಸಿದ್ದಾರೆ. ಇದೇ ಸಂದರ್ಭದಲ್ಲಿ ಮೋದಿಯವರು ಆರೋಗ್ಯ ಸೇವೆಯನ್ನು ಹೆಚ್ಚು ಸುಲಭವಾಗಿಸಲು ಡ್ರೋನ್ ತಂತ್ರಜ್ಞಾನದ ಸೇವೆಗಳಿಗೂ ಚಾಲನೆ ನೀಡಿದ್ದಾರೆ.

ಇದು ವೈದ್ಯಕೀಯ ಆರೈಕೆಯನ್ನು ತ್ವರಿತವಾಗಿ ತಲುಪಿಸಲು ಸಹಾಯ ಮಾಡಲಿದೆ. ಲಸಿಕೆ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಡಿಜಿಟಲೀಕರಣಗೊಳಿಸುವ ಮೂಲಕ ಗರ್ಭಿಣಿಯರು ಮತ್ತು ಶಿಶುಗಳಿಗೆ ಪ್ರಯೋಜನವಾಗುವ ಯು-ವಿನ್ ಪೋರ್ಟಲ್ ಅನು ಆರಂಭಿಸಲಾಗಿದೆ.

### ಹೆಲಿಕಾಪ್ಟರ್ ತುರ್ತು ವೈದ್ಯಕೀಯ ಸೇವೆಗೂ ಪ್ರಧಾನಿ ಚಾಲನೆ

**ಉತ್ತರಾಖಂಡದ ಏಮ್ಸ್-ರಿಷಿಕೇಶ, ತೆಲಂಗಾಣದ ಏಮ್ಸ್-ಬೀಬಿನಗರ, ಅಸ್ಸಾಂನ ಏಮ್ಸ್-ಗುವಾಹಟಿ, ಮಧ್ಯಪ್ರದೇಶದ ಏಮ್ಸ್-ಭೋಪಾಲ್, ರಾಜಸ್ಥಾನದ ಏಮ್ಸ್-ಜೋಧಪುರ, ಬಿಹಾರದ ಏಮ್ಸ್- ಪಟ್ನಾ, ಏಮ್ಸ್-ಬಿಲಾಸ್‌ಪುರ್, ಹಿಮಾಚಲ ಪ್ರದೇಶದ ಏಮ್ಸ್-ಬಿಲಾಸ್‌ಪುರ್ ಉತ್ತರ ಪ್ರದೇಶ, ಛತ್ತೀಸಗಢದ ಏಮ್ಸ್- ರಾಯಪುರ, ಆಂಧ್ರಪ್ರದೇಶದ ಏಮ್ಸ್-ಮಂಗಳಗಿರಿ ಮತ್ತು ಮಣಿಪುರದ ರಿಮ್ಸ್-ಇಂಫಾಲ್‌ನಲ್ಲಿ ಈ ಸೇವೆ ಲಭ್ಯವಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಏಮ್ಸ್ ರಿಷಿಕೇಶದಿಂದ ಹೆಲಿಕಾಪ್ಟರ್ ತುರ್ತು ವೈದ್ಯಕೀಯ ಸೇವೆಗೂ ಪ್ರಧಾನಿ ಚಾಲನೆ ನೀಡಿದ್ದಾರೆ.**

## ಮಿನಿ ನ್ಯೂಸ್

### ಮಣಿಪುರದಲ್ಲಿ ನಿಷೇಧಿತ ಸಂಘಟನೆಯ 8 ಮಂದಿ ಬಂಧನ, ಶಾಸ್ತ್ರಸ್ತ್ರ ವಶ

**ಇಂಫಲ:** ನಿಷೇಧಿತ ಯುನೈಟೆಡ್ ಲಿಬರೇಶನ್ -ಫ್ರಾಂಟ್ ಆಫ್ ಮಣಿಪುರ ಸಂಘಟನೆಯ ಎಂಟು ಸದಸ್ಯರನ್ನು ತೌಬಲ್ ಜಿಲ್ಲೆಯಲ್ಲಿ ಪೊಲೀಸರು ಬಂಧಿಸಿ, ಅವರ ಬಳಿಯಿದ್ದಶಾಸ್ತ್ರಸ್ತ್ರಗಳು, ಮದ್ದು ಗುಂಡುಗಳನ್ನು ವಶಪಡಿಸಿಕೊಂಡಿದ್ದಾರೆ. ತೌನರಿಗೆ ಬೆದರಿಕೆ ಹಾಕಿದ್ದಕ್ಕಾಗಿ, ಭೂಮಿ ಗುರುತಿಸುವ ಪ್ರಕ್ರಿಯೆಯನ್ನು ತಡೆದಿದ್ದಕ್ಕಾಗಿ ಇವರನ್ನು ಬಂಧಿಸಲಾಗಿದೆ ಎಂದು ಅಧಿಕೃತ ವರದಿಗಳು ಹೇಳಿದೆ.

ಮೂರು ಎಕೆ 47 ರೈಫಲ್ ಎರಡು ಎಕೆ 56 ರೈಫಲ್, ಒಂದು ಎಂ-16 ರೈಫಲ್, ಒಂದು 9 ಎಂಎಂ ಪಿಸ್ತೂಲ್, 147 ಎಕೆ 47 ಹಾಗು ಅಪಾರ ಮದ್ದುಗುಂಡು, ಹದಿನಾರು ಮೊಬೈಲ್ ಹ್ಯಾಂಡ್‌ಸೆಟ್‌ಗಳು ಮತ್ತು ಒಂದು ಕಾರನ್ನು ವಶಪಡಿಸಿಕೊಳ್ಳಲಾಗಿದೆ. ಯುಎನ್‌ಎಲ್‌ಎಫ್ ನ ಪಂಬೆ ಬಣವು 2023ರಲ್ಲಿ ಕೇಂದ್ರದೊಂದಿಗೆ ಕದನ ವಿರಾಮ ಒಪ್ಪಂದಕ್ಕೆ ಸಹಿ ಹಾಕಿತು.ಇಂಫಾಲ್‌ನ ಪೂರ್ವದ ಟಾಪ್ ಲೈರಾಕ್ ಮಚಿನ್ ಪ್ರದೇಶದಿಂದ ನಿಷೇಧಿತ ಸಂಘಟನೆಯ ಒಬ್ಬನನ್ನು ಪೊಲೀಸರು ಬಂಧಿಸಿದ್ದಾರೆ. ಬಂಧಿತ ಕೇಡರ್ ಇಂ-ಫಾಲ್ ಪ್ರದೇಶದಲ್ಲಿ ಸುಲಿಗೆ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

### ಹುಲಿಗೆ ಬಲಿಯಾದ ರೈತ

**ಲಖಿಂಪುರ ಖೇರಿ:** ಇಲ್ಲಿನ ದುಧ್ವಾ ಬಫರ್ ಝೋನ್ ಪ್ರದೇಶದ ಮಾಜ್ಗೈನ್ ವ್ಯಾಪ್ತಿಯಲ್ಲಿ 25 ವರ್ಷದ ಕೃಷಿ ಕಾರ್ಮಿಕನನ್ನು ಹುಲಿ ಕೊಂದು ಹಾಕಿದೆ. ನಿನ್ನೆ ಮಧ್ಯಾಹ್ನ ಮಾಜ್ಗೈನ್ ಈ ನ್ ಪೊಲೀಸ್ ವ್ಯಾಪ್ತಿಯ ರಾಜಪುರದ ನಿವಾಸಿ ಬಾಬುರಾಮ್ ಕೆಲಸದಲ್ಲಿದ್ದಾಗ ಸಮೀಪದ ಅರಣ್ಯದಿಂದ ದಾರಿ ತಪ್ಪಿದ ಹುಲಿ ಅವರ ಮೇಲೆ ದಾಳಿ ಮಾಡಿ ಕಬ್ಬಿನ ಗದ್ದೆಗೆ ಎಳೆದೊಯ್ದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಕೂಲಿ ಕಾರ್ಮಿಕನ ಸಾವಿನ ಸುದ್ದಿ ತಿಳಿಯುತ್ತಿದ್ದಂತೆ ದುಧ್ವಾ ಬಫರ್ ಝೋನ್ ಉಪನಿರ್ದೇಶಕ ಸುಂದರೇಶ್ ಸ್ಥಳಕ್ಕೆ ಧಾವಿಸಿದರು. ದುಧ್ವಾ ಹುಲಿ ಸಂರಕ್ಷಿತ ಪ್ರದೇಶದ ಫೀಲ್ಡ್ ಡೈರೆಕ್ಟರ್ ಲಲಿತ್ ವರ್ಮಾ ಘಟನೆಯನ್ನು ದೃಢಪಡಿಸಿದ್ದಾರೆ ಮತ್ತು ವಿಚಾರಣೆಯ ನಂತರ ಸಂತ್ರಸ್ತರಿಗೆ ಪರಿಹಾರದ ಬಗ್ಗೆ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಹೇಳಿದರು. ಈ ಮಧ್ಯೆ, ದಕ್ಷಿಣ ಖೇರಿ ಅರಣ್ಯ ವಿಭಾಗದ ಅಧಿಕಾರಿಗಳು ಇಂದು ಬೆಳಗ್ಗೆ ಶಾರದಾನಗರ ಅರಣ್ಯ ವ್ಯಾಪ್ತಿಯ ಮಾಂಜ್ರಾ ಜಾನುವಾರು ಫಾರಂನಲ್ಲಿ ಬೋನಿನಲ್ಲಿ ಚಿರತೆಯನ್ನು ಬಲೆಗೆ ಬೀಳಿಸಿದ್ದಾರೆ. ಮಹೆವಾಗಂಜ್ ಪ್ರದೇಶದ ಇಂದಿರಾ ಮನೋರಂಜನ್ ವಾನ್‌ಗೆ ಸಮೀಪವಿರುವ ಮಂಜ್ರಾ -ಮರ್ಮ್ನ ಸುತ್ತಲೂ ಚಿರತೆಯ ಚಲನವಲನಗಳು ಬಹಳ ಹಿಂದಿನಿಂದಲೂ ವರದಿ ಯಾಗಿದ್ದವು, ಅದನ್ನು ಮಂಗಳವಾರ ಯಶಸ್ವಿಯಾಗಿ ಬೋನಿಗೆ ಹಾಕಲಾಗಿದೆ ಎಂದು ದಕ್ಷಿಣ ಖೇರಿಯ ವಿಭಾ ಗೀಯ ಅರಣ್ಯಾಧಿಕಾರಿ ಸಂಜಯ್ ಬಿಸ್ವಾಲ್ ಪಿಟಿಐಗೆ ತಿಳಿಸಿದರು.

### ನೀಲೇಶ್ವರಂ ದೇವಾಲಯದ ಪಟಾಕಿ ದುರಂತ, 150 ಭಕ್ತರಿಗೆ ಗಾಯ

**ಕಾಸರಗೋಡು:** ತಡರಾತ್ರಿ ಇಲ್ಲಿನ ನೀಲೇಶ್ವರಂ ಬಳಿ ದೇವಸ್ಥಾನದ ಉತ್ಸವದ ವೇಳೆ ಸಂಭವಿಸಿದ ಪಟಾಕಿ ಅಪಘಾತದಲ್ಲಿ ಎಂಟು ಮಂದಿ ಗಂಭೀರವಾಗಿ ಸೇರಿದಂತೆ 150 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಗಾಯಾಳುಗಳನ್ನು ಕಾಸರಗೋಡು, ಕಣ್ಣೂರು ಮತ್ತು ಮಂಗಳೂರಿನ ವಿವಿಧ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ನೀಲೇಶ್ವರಂ ಬಳಿಯ ವೀರರ್ಕಾವು ದೇವಸ್ಥಾನದಲ್ಲಿ ಈ ಅವಘಡ ಸಂಭವಿಸಿದೆ. ಗಂಭೀರವಾಗಿ ಗಾಯಗೊಂಡವರಿಗೆ ಶೇ.80 ರಷ್ಟು ಸುಟ್ಟ ಗಾಯಗಳಾಗಿವೆ ಎಂದು ಜಿಲ್ಲಾಧಿಕಾರಿ ತಿಳಿಸಿದರು. ಅಪಘಾತಕ್ಕೆ ಕಾರಣವನ್ನು ಕಂಡುಹಿಡಿಯಲಾಗುತ್ತಿದೆ, ಸ್ಥಳದಿಂದ ಮಾದರಿಗಳನ್ನು ಸಂಗ್ರಹಿಸಲಾಗಿದೆ, ಪ್ರಕರಣ ದಾಖಲಿಸಲಾಗಿದೆ, ಅವರು ಹೇಳಿದರು. ಪ್ರಾಥಮಿಕ ತನಿಖೆಯ ಪ್ರಕಾರ, ಪಟಾಕಿ ಸಂಗ್ರಹಣಾ ಕೇಂದ್ರ, ಪಟಾಕಿ ಸಿಡಿಸುವ ಸ್ಥಳವು ಹತ್ತಿರದಲ್ಲಿದೆ ಎಂದು ಅವರು ಹೇಳಿದರು. ಪಟಾಕಿಗಳನ್ನು ಸಂಗ್ರಹಿಸಲು ಯಾವುದೇ ಅನುಮತಿಯನ್ನು ತೆಗೆದುಕೊಂಡಿಲ್ಲ ಎಂದರು.

### ಮನೆಯಲ್ಲಿ ಇಟ್ಟಿದ್ದ ಪಟಾಕಿ ಸ್ಫೋಟ, ದಂಪತಿ ಸಾವು

**ಹೈದರಾಬಾದ್:** ಮನೆಯಲ್ಲಿ ಇಟ್ಟಿದ್ದ ಪಟಾಕಿ ಸ್ಫೋಟಿಸಿ ದಂಪತಿ ಮೃತಪಟ್ಟಿರುವ ಘಟನೆ ಹೈದರಾಬಾದ್‌ನಲ್ಲಿ ನಡೆದಿದೆ. ಇಲ್ಲಿನ ಮನೆಯಲ್ಲಿ ಇರಿಸಲಾಗಿದ್ದ ಪಟಾಕಿಗಳಿಗೆ ಬೆಂಕಿ ತಗುಲಿದ ಪರಿಣಾಮ ಬೆಂಕಿ ಅವಘಡದಲ್ಲಿ ಓರ್ವ ವ್ಯಕ್ತಿ ಮತ್ತು ಆತನ ಪತ್ನಿ ಉಸಿರುಗಟ್ಟಿ ಸಾವನ್ನಪ್ಪಿದ್ದು, ಮತ್ತೊಬ್ಬ ಕುಟುಂಬದ ಸದಸ್ಯ ತೀವ್ರವಾಗಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ತಡರಾತ್ರಿ ದೀಪಾವಳಿ ಹಬ್ಬಕ್ಕೆ ಆಹಾರ ಪದಾರ್ಥಗಳನ್ನು ತಯಾರಿಸುತ್ತಿದ್ದಾಗ ಗ್ಯಾಸ್ ಸ್ಟೌವ್‌ನಿಂದ ಕಿಡಿಗಳು ಸಿಡಿದ ಪಟಾಕಿ ಪೆಟ್ಟಿಗೆಯ ಮೇಲೆ ಬಿದ್ದು ಹೊಗೆ ಎರಡು ಕೋಣೆಗಳ ಮನೆಗೆ ವ್ಯಾಪಿಸಿ ದಂಪತಿ ಉಸಿರುಗಟ್ಟಿ ಸಾವನ್ನಪ್ಪಿದ್ದಾರೆ ಎಂದು ಅವರು ತಿಳಿಸಿದ್ದಾರೆ. ಮನೆಯಲ್ಲಿದ್ದ ಮತ್ತೊಬ್ಬ ಬಾಲಕಿ ಉಸಿರುಗಟ್ಟಿದ್ದು ಅಕೆಯನ್ನು ತಕ್ಷಣ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಆಕೆಯ ಸ್ಥಿತಿ ಗಂಭೀರವಾಗಿದೆ ಎಂದು ರೇನ್ ಬಜಾರ್ ಪೊಲೀಸ್ ಠಾಣೆಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಮೃತರು 50ರ ಆಸುಪಾಸಿನವರಾಗಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ. ಹೆಚ್ಚಿನ ತನಿಖೆ ನಡೆಯುತ್ತಿದೆ

### ಭಕ್ತಿ ವಿಡಿಯೋ ಮಾಡುವ ಬಾಲಕನಿಗೆ ಬಿಷ್ಣೋಯ್ ಗ್ಯಾಂಗ್ ಬೆದರಿಕೆ

**ಮಥುರಾ:** ಹತ್ತು ವರ್ಷದ ಆಧ್ಯಾತ್ಮಿಕ ಗೀತೆ ರಚನೆಕಾರ ಅಭಿನವ್ ಅರೋರಾ ಅವರಿಗೆ ಗ್ಯಾಂಗ್‌ಸ್ಟರ್ ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್ ಜೀವ ಬೆದರಿಕೆ ಹಾಕಿದೆ. ನನ್ನ ಮಗ ಭಕ್ತಿಯನ್ನು ಹೊರತುಪಡಿಸಿ ಬೇರೆ ಏನು ಮಾಡುತ್ತಿಲ್ಲ ಆದರೂ ಬಿಷ್ಣೋಯ್ ಗ್ಯಾಂಗ್ ನಮಗೆ ಜೀವ ಬೆದರಿಕೆ ಹಾಕಿದೆ ಎಂದು ಅಭಿನವ್ ತಾಯಿ ಜ್ಯೋತಿ ಅರೋರಾ ತಿಳಿಸಿದ್ದಾರೆ. ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್‌ನಿಂದ ನಮಗೆ ಸೋಮವಾಎ ಬೆದರಿಕೆ ಕರೆ ಸಂದೇಶ ಬಂದಿದೆ. ಅಲ್ಲಿ ನಮಗೆ ಅಭಿನವ್‌ನನ್ನು ಕೊಲ್ಲಲಾಗುವುದು ಎಂದು ಬೆದರಿಕೆ ಹಾಕಲಾಯಿತು. ನಿನ್ನೆ ರಾತ್ರಿ, ನಾನು ಮಿಸ್ ಮಾಡಿದ ಕರೆ ನಮಗೆ ಬಂದಿತು. ಇಂದು ಅದೇ ನಂಬರ್‌ನಿಂದ ಅಭಿನವ್‌ನನ್ನು ಕೊಲ್ಲುತ್ತೇವೆ ಎಂದು ನಮಗೆ ಸಂದೇಶ ಬಂದಿದೆ ಎಂದು ಅವರು ಹೇಳಿದರು. ಗಮನಾರ್ಹವಾಗಿ, ಅಭಿನವ್ ಅರೋರಾ ದೆಹಲಿಯ ಆಧ್ಯಾತ್ಮಿಕ ವಿಷಯ ರಚನೆಕಾರರಾಗಿದ್ದು, ಅವರು ಕೇವಲ ಮೂರು ವರ್ಷದವರಾಗಿದ್ದಾಗ ಅವರ ಆಧ್ಯಾತ್ಮಿಕ ಪ್ರಯಾಣ ಪ್ರಾರಂಭವಾಯಿತು ಎಂದು ಹೇಳಿಕೊಳ್ಳುತ್ತಾರೆ. ಸ್ವಾಮಿ ರಾಮಭದ್ರಾಚಾರ್ಯರಿಂದ ಅಭಿನವ್ ಅವರನ್ನು ನಿಂದಿಸುತ್ತಿರುವ ವಿಡಿಯೋ ವೈರಲ್ ಆಗಿರುವ ಕುರಿತು ಪ್ರತಿಕ್ರಿಯಿಸಿದ ಅವರ ತಾಯಿ, ಹಿರಿಯರ ನಿಂದೆ ಕೂಡ ಆಶೀರ್ವಾದಕ್ಕೆ ಸಮಾನ ಎಂದು ಹೇಳಿದ್ದಾರೆ.

# ಅರ್ಜುನ್ ಗುರೂಜಿ ಆಶೀರ್ವಾದ ಪಡೆದ ಅಭಿಮನ್ಯು

ಅಭಿಮನ್ಯು ಕಾಶಿನಾಥ್ ಅಭಿನಯದ 'ಎಲ್ಲಿಗೆ ಪಯಣ ಯಾವುದೋ ದಾರಿ' ಪ್ರೇಕ್ಷಕರಿಂದ ಮೆಚ್ಚುಗೆ ಪಡೆದುಕೊಂಡಿದೆ. ಯಶಸ್ವಿ ಪ್ರದರ್ಶನ ಕಾಣುತ್ತಿರುವ ಖುಷಿ ಚಿತ್ರತಂಡದಲ್ಲಿದೆ. ಇದೇ ಹೊತ್ತಿನಲ್ಲಿ ಅಭಿಮನ್ಯು ಕಾಶಿನಾಥ್ ಚಿತ್ರತಂಡದೊಂದಿಗೆ ಮೈಸೂರಿನ ಅವಧೂತ ಅರ್ಜುನ್ ಗುರೂಜಿಯನ್ನು ಭೇಟಿಯಾಗಿದ್ದಾರೆ. ಅವರಿಂದ



ಆಶೀರ್ವಾದ ಪಡೆದುಕೊಂಡಿದ್ದಾರೆ. ಅರ್ಜುನ್ ಗುರೂಜಿ ಅಭಿಮನ್ಯು ಸೇರಿದಂತೆ ಇಡೀ ಚಿತ್ರತಂಡಕ್ಕೆ ಒಳಿತಾಗಲಿ, ಈ ಸಿನಿಮಾ ಇನ್ನಷ್ಟು ಯಶಸ್ಸು ಕಾಣಲೆಂದು ಆಶೀರ್ವಾದ ಮಾಡಿದ್ದಾರೆ.

ಅವಧೂತ ಅರ್ಜುನ್ ಗುರೂಜಿ ಅವರ ನಿವಾಸಕ್ಕೆ ಚಿತ್ರತಂಡದೊಂದಿಗೆ ತೆರಳಿದ್ದ ಅಭಿಮನ್ಯು ಅವರು ತಮ್ಮ ತಂದೆ ಕಾಶಿನಾಥ್ ಅವರ ಹೆಸರು ಅಜರಾಮರವಾಗಲೆಂದು ಬೇಡಿಕೊಂಡಿದ್ದಾರೆ. ನಂತರ ಆಶೀರ್ವಾದ ನೀಡಿದ ಅವಧೂತ ಅರ್ಜುನ್ ಗುರೂಜಿ ಈ ಸಿನಿಮಾ ಸಂಪೂರ್ಣವಾಗಿ ಯಶಸ್ಸು ಗಳಿಸಲೆಂದು ಹಾರೈಸುತ್ತಲೇ, ಯುವ ನಟ ಅಭಿಮನ್ಯು ಕಾಶಿನಾಥ್ ತಮ್ಮ ಸಿನಿಮಾಗಳ ಮೂಲಕ ಯುವ ಜನತೆಗೆ ಉತ್ತಮ ಸಂದೇಶಗಳನ್ನು ದಾಟಿಸವಂತೆ ಆಗಲಿ ಎಂದು ಹರಸಿದ್ದಾರೆ.

ಈ ಸಂದರ್ಭದಲ್ಲಿ ನಾಯಕ ನಟ ಅಭಿಮನ್ಯು ಅವರೊಂದಿಗೆ ನಾಯಕಿ ಸ್ಫೂರ್ತಿ ಉಡಿಮನೆ, ನಿರ್ದೇಶಕ ಕಿರಣ್ ಎಸ್ ಸೂರ್ಯ ಚಿತ್ರ ತಂಡ ಭಾಗಿಯಾಗಿತ್ತು.

ಸೂಕ್ಷ್ಮ ಕಥೆ ಒಳಗೊಂಡಿರುವ ಎಲ್ಲಿಗೆ ಪಯಣ ಯಾವುದೋ ದಾರಿ' ಚಿತ್ರ ದಿನದಿಂದ ದಿನಕ್ಕೆ ಉತ್ತಮ ಪ್ರದರ್ಶನ ನೀಡುತ್ತಿದೆ. ನಾಯಕ ಅಭಿಮನ್ಯು ಕಾಶಿನಾಥ್ ಈ ಸಿನಿಮಾವನ್ನು ಮತ್ತಷ್ಟು ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಚಿತ್ರತಂಡದೊಂದಿಗೆ ಸಕ್ರಿಯರಾಗಿದ್ದಾರೆ. ಇದರ ನಡುವಲ್ಲಿಯೇ ಅವಧೂತ ಅರ್ಜುನ್ ಗುರೂಜಿಯನ್ನು ಭೇಟಿಯಾಗುವ ಮೂಲಕ ಆಧ್ಯಾತ್ಮಿಕ ಅನುಭೂತಿಯೊಂದಿಗೆ ಮತ್ತಷ್ಟು ಹುರುಪು ತುಂಬಿಕೊಂಡಿದ್ದಾರೆ.

ಕಥೆ, ಚಿತ್ರಕಥೆ ಮತ್ತು ಸಂಭಾಷಣೆಯೊಂದಿಗೆ ಕಿರಣ್ ಎಸ್. ಸೂರ್ಯ ನಿರ್ದೇಶನ ಮಾಡಿದ್ದಾರೆ. ಅಭಿಮನ್ಯು ಕಾಶಿನಾಥ್ ಅವರಿಗೆ ಸ್ಫೂರ್ತಿ ಉಡಿಮನೆ ನಾಯಕಿಯಾಗಿ ಸಾಥ್ ಕೊಟ್ಟಿದ್ದಾರೆ. ವಿಜಯಶ್ರೀ ಕಲಬುರ್ಗಿ ಪ್ರಧಾನ ಪಾತ್ರದಲ್ಲಿ ನಟಿಸಿದ್ದಾರೆ. ಬಲ ರಾಜವಾಡಿ, ಶೋಭನ್, ಅಯಾಂಕ್, ರಿನಿ ಬೋಪಣ್ಣ, ಪ್ರದೀಪ್, ರವಿತೇಜ, ಕಿಶೋರ್, ಅಶ್ವಿನಿ ರಾವ್, ಪ್ರಿಯಾ ಮುಂತಾದವರ ತಾರಾಗಣವಿದೆ.





# ಸಲ್ಮಾನ್ ಖಾನ್ ಸಿನಿಮಾದಲ್ಲಿ ಕನ್ನಡದ ನಟ ಕಿಶೋರ್

ಬಾಲಿವುಡ್ ನಟ ಸಲ್ಮಾನ್ ಖಾನ್ ಮತ್ತು ರಶ್ಮಿಕಾ ಮಂದಣ್ಣ ನಟನೆಯ ಸಿಖಂದರ್ ಸಿನಿಮಾದಲ್ಲಿ ಕನ್ನಡದ ನಟ ಕಿಶೋರ್ ಎಂಟ್ರಿ ಕೊಟ್ಟಿದ್ದಾರೆ ಎನ್ನಲಾದ ಸುದ್ದಿಯೊಂದು ಈಗ ಚರ್ಚೆಗೆ ಗ್ರಾಸವಾಗಿದೆ. ಎ.ಆರ್ ಮುರುಗದಾಸ್ ನಿರ್ದೇಶನದ ಈ ಚಿತ್ರದ ಮೂಲಕ ಕಿಶೋರ್ ನಟಿಸಿದ್ದಾರೆ ಎನ್ನಲಾಗಿದೆ. ಈಗಾಗಲೇ ಚಿತ್ರೀಕರಣದಲ್ಲಿ ಕೂಡ ಅವರು ಭಾಗಿಯಾಗಿದ್ದಾರೆ ಎನ್ನಲಾಗಿದೆ. ಕಿಶೋರ್ ಈ ತಂಡವನ್ನು ಸೇರಿರುವ ಬಗ್ಗೆ ನಟನಾಗಲಿ, 'ಸಿಖಂದರ್' ಚಿತ್ರತಂಡವಾಗಲಿ ಅಧಿಕೃತ ಘೋಷಣೆ ಮಾಡಿಲ್ಲ. ಸದ್ಯ ಹರಿದಾಡುತ್ತಿರುವ ಸುದ್ದಿ ನಿಜನಾ ಎಂದು ಅನೌನ್ಸ್ ಆಗುವವರೆಗೂ ಕಾಯಬೇಕಿದೆ.ಇನ್ನೂ ಕಿಶೋರ್ ಅವರು ಯಾವುದೇ ಪಾತ್ರ ಕೊಟ್ಟರೂ ಆ ಪಾತ್ರವೇ ತಾವಾಗಿ ನಟಿಸುವ ಕಲಾವಿದ. ತೆಲುಗು, ತಮಿಳು ಚಿತ್ರಗಳಲ್ಲಿ ಈಗಾಗಲೇ ನಟಿಸಿ ಸೈ ಎನಿಸಿಕೊಂಡಿದ್ದಾರೆ. ರಜನಿಕಾಂತ್ ಜೊತೆ 'ಜೈಲರ್' 'ವೆಟ್ಟೈಯಾನ್' ಸಿನಿಮಾದಲ್ಲಿ ಅವರು ನಟಿಸಿದ್ದಾರೆ. ಜೊತೆಗೆ ಕನ್ನಡದ ಸಿನಿಮಾದಲ್ಲೂ ಅವರಿಗೆ ಬೇಡಿಕೆ ಇದೆ.

# ಪ್ಲಾಸ್ಟಿಕ್ ಸರ್ಜರಿ ಮಾಡಿಸಿಕೊಂಡಿದ್ದೀರಾ ಎಂದವರಿಗೆ ತಕ್ಕ ಉತ್ತರ ಕೊಟ್ಟ ನಯನತಾರಾ

ಕಾಲಿವುಡ್ ಸೂಪರ್ ಸ್ಟಾರ್ ನಯನತಾರಾ ಅವರು 'ಜವಾನ್' ಸಿನಿಮಾದ ಸಕ್ಸಸ್ ನಂತರ ಹಲವು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಇನ್ನೂ ಸಂದರ್ಶನವೊಂದರಲ್ಲಿ ಎದುರಿಸುತ್ತಿರುವ ಟೀಕೆಗಳಿಗೆ ನಟಿ ಉತ್ತರ ನೀಡಿದ್ದಾರೆ. ನಟಿ ಸುಂದರವಾಗಿ ಕಾಣಲು ಪ್ಲಾಸ್ಟಿಕ್ ಸರ್ಜರಿ ಮಾಡಿಸಿಕೊಂಡಿದ್ದಾರೆ, ಅವರದ್ದು ಸಹಜ ಸೌಂದರ್ಯ ಅಲ್ಲ ಎಂದವರಿಗೆ ನಯನತಾರಾ ಖಡಕ್ ಉತ್ತರ ನೀಡಿದ್ದಾರೆ. ಸಾಕಷ್ಟು ಬಾರಿ ನಯನತಾರಾ ಬ್ಯೂಟಿ ಬಗ್ಗೆ ಇಲ್ಲ ಸಲ್ಲದ ಕಾಮೆಂಟ್‌ಗಳನ್ನು ನೆಟ್ಟಿಗರು ಮಾಡುತ್ತಿದ್ದರು. ಅವರು ತೆಳ್ಳಗೆ ಮತ್ತು ಬೆಳ್ಳಗೆ ಕಾಣಲು ಸರ್ಜರಿ ಮಾಡಿಸಿದ್ದಾರೆ ಎನ್ನಲಾದ ಟೀಕೆಗಳು ಎದುರಾಗಿತ್ತು. ಅದಕ್ಕೆ ನಟಿ ಸಂದರ್ಶನದಲ್ಲಿ ತಕ್ಕ ಉತ್ತರ ಕೊಟ್ಟಿದ್ದಾರೆ. ನಾನು ಪ್ರತಿಯೊಂದು ಕಾರ್ಯಕ್ರಮಕ್ಕೆ ಹೋಗುವ ಮುನ್ನ ನಾನು ನನ್ನ ಹುಬ್ಬುಗಳನ್ನು ಶೇಪ್ ಮಾಡಿಸುತ್ತೇನೆ. ನನ್ನ ಮುಖ ಬದಲಾದಂತೆ ಕಾಣಲು ಇದೇ ಕಾರಣ ಎನ್ನುವುದು ನನ್ನ ಭಾವನೆ ಎಂದಿದ್ದಾರೆ.

ಹುಬ್ಬುಗಳನ್ನು ಶೇಪ್ ಮಾಡಿಸುವುದರಿಂದ ನನ್ನ ಮುಖದಲ್ಲಿನ ಬದಲಾವಣೆಯನ್ನು ನೋಡಿ ಅನೇಕರು ನಾನು ಪ್ಲಾಸ್ಟಿಕ್ ಸರ್ಜರಿ ಮಾಡಿಸಿಕೊಂಡಿದ್ದೇನೆ ಅಂದುಕೊಂಡಿದ್ದಾರೆ. ಅದು ಸುಳ್ಳು ಎಂದಿದ್ದಾರೆ. ನಾನು ಡಯಟ್ ಮಾಡುತ್ತೇನೆ ಈ ಕಾರಣಕ್ಕೆ ನನ್ನ ದೇಹದ ತೂಕದಲ್ಲಿ ಆಗಾಗ ಏರಿಳಿತವಾಗುತ್ತಿರುತ್ತೆ ಎಂದಿದ್ದಾರೆ. ಇದರಿಂದ ನನ್ನ ಕೆನ್ನೆ ಕೆಲ ಒಮ್ಮೆ ಒಳಗೆ ಹೋದಂತೆ ಕಾಣುತ್ತದೆ. ಇನ್ನೂ ಕೆಲವೊಮ್ಮೆ ಕೆನ್ನೆ ಊಡಿಕೊಂಡಂತೆ ಕಾಣಿಸುತ್ತೆ ಎಂದಿದ್ದಾರೆ.

ಬೇಕಿದ್ದರೆ ನೀವು ನನ್ನನ್ನು ಮುಟ್ಟಿ ನೋಡಬಹುದು, ಸಮಾಧಾನ ಆಗದಿದ್ದರೆ ಸುಟ್ಟು ನೋಡಬಹುದು. ಆಗ ನಿಮಗೆ ಯಾವ ಪ್ಲಾಸ್ಟಿಕ್ ಇಲ್ಲ ಎನ್ನುವುದು ಮನದಟ್ಟಾಗಬಹುದು ಎಂದು ಕೂಡ ನಯನತಾರಾ ಸ್ಪಷ್ಟನೆ ನೀಡಿದ್ದಾರೆಅಂದಹಾಗೆ, ನಯನತಾರಾ ಅವರು ಯಶ್ ನಟನೆಯ 'ಟಾಕ್ಸಿಕ್' ಸಿನಿಮಾದಲ್ಲಿ ಕಾಣಿಸಿಕೊಂಡಿದ್ದಾರೆ ಎಂಬ ಸುದ್ದಿಯಿದೆ. ಯಶ್‌ಗೆ ಸಹೋದರಿಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ ಎನ್ನಲಾಗಿದೆ.

ಇತ್ತೀಚೆಗೆ ಬೆಂಗಳೂರಿಗೆ ಬಂದು ತಮ್ಮ ಭಾಗದ ಚಿತ್ರೀಕರಣದಲ್ಲಿ ಅವರು ಭಾಗಿಯಾಗಿದ್ದರು ಎನ್ನಲಾಗಿದೆ. ಟಾಕ್ಸಿಕ್ ತಂಡದಿಂದ ಅಧಿಕೃತ ಅಪ್‌ಡೇಟ್ ಸಿಗುವವರೆಗೂ ಕಾದುನೋಡಬೇಕಿದೆ.



# ರೂಪೇಶ್ ಶೆಟ್ಟಿಗೆ ಜೋಡಿಯಾದ ಕುಡ್ಲದ ಬೆಡಗಿ ಅದ್ವಿತಿ




ಬಿಗ್ ಬಾಸ್ ಕನ್ನಡ 9'ರ ವಿನ್ನರ್ ರೂಪೇಶ್ ಶೆಟ್ಟಿ ಅವರು 'ಜೈ') ಎಂಬ ತುಳು ಸಿನಿಮಾದಲ್ಲಿ ಬ್ಯುಸಿಯಾಗಿದ್ದಾರೆ. ಈ ಚಿತ್ರಕ್ಕೆ ನಾಯಕಿಯಾಗಿ ಅದ್ವಿತಿ ಶೆಟ್ಟಿ ಎಂಟ್ರಿ ಕೊಟ್ಟಿದ್ದಾರೆ. ಮೊದಲ ಬಾರಿಗೆ ತುಳು ಸಿನಿಮಾದಲ್ಲಿ ನಟಿಸುತ್ತಿರುವ ಖುಷಿಯನ್ನು ನಟಿ ಸೋಶಿಯಲ್ ಮೀಡಿಯಾದಲ್ಲಿ ತಿಳಿಸಿದ್ದಾರೆ. ರೂಪೇಶ್ ಶೆಟ್ಟಿ ನಟಿಸಿ, ನಿರ್ದೇಶನ ಮಾಡುತ್ತಿರುವ 'ಜೈ' ಸಿನಿಮಾದಲ್ಲಿ ಹೀರೋಯಿನ್ ಆಗಿ ಆಯ್ಕೆಯಾಗಿದ್ದಾರೆ. ಈಗಾಗಲೇ ಚಿತ್ರೀಕರಣದಲ್ಲೂ ಅವರು ಪಾಲ್ಗೊಂಡಿದ್ದಾರೆ. ನಟನೆಗೆ ಸ್ಕೋಪ್ ಇರುವ ವಿಭಿನ್ನ ಪಾತ್ರದಲ್ಲಿ ನಟಿ ಕಾಣಿಸಿಕೊಂಡಿದ್ದಾರೆ. ಇನ್ನೂ ಅದ್ವಿತಿ ಶೆಟ್ಟಿ ಅವರು ಮೂಲತಃ ಮಂಗಳೂರಿನವರು. ಮಾತೃ ಭಾಷೆ ತುಳು ಆಗಿದ್ದರೂ ಅವರು ಮೊದಲ ಬಾರಿಗೆ ತುಳು ಭಾಷೆಯ ಚಿತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಜೈ ಸಿನಿಮಾದಲ್ಲಿ ನಟಿಸುವ ಮೂಲಕ ಮೊದಲ ಬಾರಿಗೆ ತುಳು ಚಿತ್ರರಂಗಕ್ಕೆ ಎಂಟ್ರಿ ಕೊಡುತ್ತಿರುವ ಕುರಿತು ನಟಿ ಸಂತಸ ವ್ಯಕ್ತಪಡಿಸಿದ್ದಾರೆ. ತಮ್ಮನ್ನು ಆಯ್ಕೆ ಮಾಡಿದ್ದಕ್ಕೆ ರೂಪೇಶ್ ಮತ್ತು ಇಡೀ ತಂಡಕ್ಕೆ ನಟಿ ಧನ್ಯವಾದ ತಿಳಿಸಿದ್ದಾರೆ. ಅಂದಹಾಗೆ, ರೂಪೇಶ್ ಶೆಟ್ಟಿ ಅವರಿಗೆ ತುಳು ಚಿತ್ರರಂಗ ಏನು ಹೊಸದಲ್ಲ. ಅವರು ಮೂಲತಃ ಮಂಗಳೂರಿನವರೇ ಆಗಿದ್ದಾರೆ. 'ಜೈ' ಸಿನಿಮಾದ ಜೊತೆಗೆ ಕನ್ನಡದ 'ಅಧಿಪತ್ರ' ಸೇರಿದಂತೆ ಹಲವು ಚಿತ್ರಗಳು ಅವರ ಕೈಯಲ್ಲಿವೆ.

# ರಣ್‌ಬೀರ್, ಆಲಿಯಾ, ವಿಕ್ಕಿ ಕೌಶಲ್ ನಟನೆಯ ಸಿನಿಮಾ ಶುರುವಾಗೋದು ಯಾವಾಗ



ಸಂಜಯ್ ಲೀಲಾ ಬನ್ಸಾಲಿ ನಿರ್ದೇಶನದ 'ಲವ್ ಆಯಂಡ್ ವಾರ್' ಚಿತ್ರದಲ್ಲಿ ರಣ್‌ಬೀರ್ ಕಪೂರ್ , ಆಲಿಯಾ ಭಟ್ ವಿಕ್ಕಿ ಕೌಶಲ್ ಜೊತೆಯಾಗಿ ನಟಿಸಲಿದ್ದಾರೆ ಎಂಬ ಸುದ್ದಿ ಕೆಲ ತಿಂಗಳುಗಳಿಂದ ಸದ್ದು ಮಾಡಿತ್ತು. ಆದರೆ ಶೂಟಿಂಗ್ ಶುರುವಾಗೋದು ಯಾವಾಗ ಎಂಬುದಕ್ಕೆ ಉತ್ತರ ಸಿಕ್ಕಿರಲಿಲ್ಲ. ಅದಕ್ಕೀಗ ಉತ್ತರ ಸಿಕ್ಕಿದೆ.

ಬಹುನಿರೀಕ್ಷಿತ 'ಲವ್ ಆಯಂಡ್ ವಾರ್' ಸಿನಿಮಾದ ಶೂಟಿಂಗ್ ನವೆಂಬರ್ 7ರಿಂದ ಮುಂಬೈನಲ್ಲಿ ಶುರುವಾಗಲಿದೆ. ಮೊದಲ ಹಂತದ ಶೂಟಿಂಗ್‌ನಲ್ಲಿ ನಟ ರಣ್‌ಬೀರ್ ಕಪೂರ್ ಮಾತ್ರ ಭಾಗಿಯಾಗುತ್ತಿದ್ದಾರೆ. ಆ ನಂತರ ವಿಕ್ಕಿ ಕೌಶಲ್ ಮತ್ತು ಆಲಿಯಾ ಚಿತ್ರತಂಡವನ್ನು ಸೇರಿಕೊಳ್ಳಲಿದ್ದಾರೆ. ಸದ್ಯ ರಣ್‌ಬೀರ್ ಭಾಗದ ಚಿತ್ರೀಕರಣ ಶುರುವಾಗಲಿದೆ.

ಇನ್ನೂ 'ಬ್ರಹ್ಮಾಸ್ತ್ರ' ಸಿನಿಮಾದಲ್ಲಿ ರಣ್‌ಬೀರ್ ಮತ್ತು ಆಲಿಯಾ ಜೊತೆಯಾಗಿ ನಟಿಸಿದ್ದರು. ಈ ಚಿತ್ರ ಸೂಪರ್ ಹಿಟ್ ಆಗಿತ್ತು. ಈಗ ಮತ್ತೆ 'ಲವ್ ಆಯಂಡ್ ವಾರ್' ಸಿನಿಮಾಗಾಗಿ ಕೈಜೋಡಿಸಿದ್ದಾರೆ. ವಿಕ್ಕಿ ಕೌಶಲ್ ಕೂಡ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಳ್ಳಿದ್ದಾರೆ. ಟ್ರಯಾಂಗಲ್ ಲವ್ ಸ್ಟೋರಿಯಾಗಿದ್ದು, ಕಥೆಯ ಬಗ್ಗೆ ಫ್ಯಾನ್ಸ್‌ಗೆ ಕುತೂಹಲ ಮೂಡಿಸಿದೆ.

# ಶ್ರೇಯಸ್ ಅಯ್ಯರ್‌ಗೆ ಕಾದು ಕುಳಿತ ಪಂಜಾಬ್ ಕಿಂಗ್ಸ್

ಐಪಿಎಲ್ 2025 ರ ಧಾರಣ ಪಟ್ಟಿ ಬಿಡುಗಡೆಗೆ ಕೆಲವೇ ಗಂಟೆಗಳು ಬಾಕಿ ಇವೆ. ಕೆಕೆಆರ್ ಶ್ರೇಯಸ್ ಅಯ್ಯರ್ ಅವರನ್ನು ಬಿಡುಗಡೆ ಮಾಡುವ ಸಾಧ್ಯತೆಯಿದೆ ಎಂದು ವರದಿಯಾಗಿದೆ. ಪಂಜಾಬ್ ಕಿಂಗ್ಸ್ ಅವರನ್ನು ತಮ್ಮ ತಂಡಕ್ಕೆ ಸೇರಿಸಿಕೊಳ್ಳಲು ಆಸಕ್ತಿ ಹೊಂದಿದೆ ಎಂದು ಹೇಳಲಾಗುತ್ತಿದೆ. ರಿಕಿ ಪಾಂಟಿಂಗ್ ಅವರ ನಾಯಕತ್ವದಲ್ಲಿ ಅಯ್ಯರ್ ಪಂಜಾಬ್‌ಗೆ ಉತ್ತಮ ಆಯ್ಕೆಯಾಗಬಹುದು. ಇದರಿಂದ ಪಂಜಾಬ್ ಕಿಂಗ್ಸ್ ತಂಡಕ್ಕೆ ಒಳ್ಳೆಯ ನಾಯಕತ್ವ ದೊರೆಯಲಿದೆ.

2025 ರ ಐಪಿಎಲ್ ಧಾರಣ ಪಟ್ಟಿ ಬಿಡುಗಡೆಗೆ ಇನ್ನು ಕೆಲವೇ ಕೆಲವು ಗಂಟೆಗಳು ಬಾಕಿ ಉಳಿದಿವೆ. ಅಕ್ಟೋಬರ್ 31 ರೊಳಗೆ ಎಲ್ಲಾ ತಂಡಗಳು ಐಪಿಎಲ್ ಆಡಳಿತ ಮಂಡಳಿಗೆ ಉಳಿಸಿಕೊಂಡಿರುವ ಆಟಗಾರರ ಪಟ್ಟಿಯನ್ನು ಸಲ್ಲಿಸಬೇಕು. ಇದರಲ್ಲಿ ಎಲ್ಲಾ ಫ್ರಾಂಚೈಸಿಗಳು ತಮಗೆ ಅಗತ್ಯವಿರುವ ಆಟಗಾರರನ್ನು ಈಗಾಗಲೇ ಪಟ್ಟಿ ಮಾಡಿದ್ದು, ಹಲವು ಸ್ಟಾರ್ ಆಟಗಾರರನ್ನು ತಂಡದಿಂದ ಕೈಬಿಡಲು ಮುಂದಾಗಿವೆ.

ಹಾಗೆ ತಂಡದಿಂದ ಹೊರಗಿಡುವ ಆಟಗಾರರ ಪೈಕಿ ಶ್ರೇಯಸ್ ಅಯ್ಯರ್ ಕೂಡ ಒಬ್ಬರು ಎಂದು ಹೇಳಲಾಗುತ್ತಿದೆ. ಶ್ರೇಯಸ್ ಅಯ್ಯರ್‌ರನ್ನು ನಾಯಕನಾಗಿ ಉಳಿಸಿಕೊಳ್ಳುವ ಉತ್ಸಾಯವನ್ನು ಕೆಕೆಆರ್ ತೊರುತ್ತಿಲ್ಲ. ಹೀಗಾಗಿ ಅಯ್ಯರ್ ಹರಾಜಿಗೆ ಬಂದರೆ, ಅವರನ್ನು ಖರೀದಿಸಲು ಪಂಜಾಬ್ ಕಿಂಗ್ಸ್ ಯೋಜನೆ ಹಾಕಿಕೊಂಡಿದೆ ಎಂದು ವರದಿಯಾಗಿದೆ. ಮಾಧ್ಯಮ ವರದಿಗಳ ಪ್ರಕಾರ, ಪಂಜಾಬ್ ಕಿಂಗ್ಸ್‌ನ ಹೊಸ ಮುಖ್ಯ ಕೋಚ್ ರಿಕಿ ಪಾಂಟಿಂಗ್ ಅವರು



ಶ್ರೇಯಸ್ ಅಯ್ಯರ್ ಅವರನ್ನು ಪಂಜಾಬ್‌ನ ನಾಯಕನನ್ನಾಗಿ ಮಾಡುವ ಇರಾದೆಯಲ್ಲಿದ್ದಾರೆ. ರಿಕಿ ಪಾಂಟಿಂಗ್ ಮತ್ತು ಶ್ರೇಯಸ್ ಅಯ್ಯರ್ ಈ ಹಿಂದೆಯೂ ಒಟ್ಟಿಗೆ ಕೆಲಸ ಮಾಡಿದ್ದಾರೆ. ಆ ಸಮಯದಲ್ಲಿ ಅಯ್ಯರ್ ಡೆಲ್ಲಿ ಕ್ಯಾಪಿಟಲ್ಸ್‌ನ ನಾಯಕರಾಗಿದ್ದರು ಮತ್ತು ರಿಕಿ ಪಾಂಟಿಂಗ್ ತಂಡದ ಮುಖ್ಯ ಕೋಚ್ ಆಗಿದ್ದರು.

2019 ರಲ್ಲಿ ಡೆಲ್ಲಿ ತಂಡದ ನಾಯಕರಾಗಿ ಆಯ್ಕೆಯಾಗಿದ್ದ ಅಯ್ಯರ್, 2021 ರವರೆಗೆ ಈ ಪಾತ್ರವನ್ನು ನಿರ್ವಹಿಸಿದ್ದರು. 2020 ರಲ್ಲಿ, ಅವರು ತಮ್ಮ ನಾಯಕತ್ವದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನು ಫೈನಲ್‌ಗೆ ಕೊಂಡೊಯ್ಯುವಲ್ಲಿ ಯಶಸ್ವಿಯಾಗಿದ್ದರು. ಆದರೆ 2021 ರ ನಂತರ, ದೆಹಲಿಯು ಅಯ್ಯರ್ ಅವರನ್ನು ನಾಯಕತ್ವದಿಂದ ತೆಗೆದುಹಾಕಿ ಅವರ ಸ್ಥಾನದಲ್ಲಿ ರಿಷಬ್ ಪಂತ್‌ಗೆ ತಂಡದ ನಾಯಕತ್ವವನ್ನು ನೀಡಲಾಯಿತು. ಇದರ ನಂತರ ಕೋಲ್ಕತ್ತಾ ನೈಟ್ ರೈಡರ್ಸ್ ತಂಡವನ್ನು ಸೇರಿಕೊಂಡ ಅಯ್ಯರ್, ಕಳೆದ ಸೀಸನ್‌ನಲ್ಲಿ ಅವರ ನಾಯಕತ್ವದಲ್ಲಿ, ಕೆಕೆಆರ್ ತಂಡ ಮೂರನೇ ಬಾರಿಗೆ ಐಪಿಎಲ್ ಚಾಂಪಿಯನ್ ಆಗಿ ಹೊರಹೊಮ್ಮಿತ್ತು. ಶ್ರೇಯಸ್ ಅಯ್ಯರ್ ಅದ್ಭುತ ನಾಯಕತ್ವದ ಗುಣ ಹೊಂದಿದ್ದು, ಅವರ ನಾಯಕತ್ವದಲ್ಲಿ ಕೆಕೆಆರ್ ತಂಡವನ್ನು ಐಪಿಎಲ್ ಚಾಂಪಿಯನ್ ಆಗಿ ಮಾಡಿದ್ದಾರೆ. ಆದರೆ ಕೆಕೆಆರ್ ತಂಡ ತನ್ನ ಚಾಂಪಿಯನ್ ನಾಯಕನನ್ನು ಬಿಡುಗಡೆ ಮಾಡುತ್ತದೆಯೇ ಎಂಬ ಪ್ರಶ್ನೆ ಉದ್ಭವಿಸಿದೆ. ಏಕೆಂದರೆ ಇದು ಸಂಭವಿಸಿದಲ್ಲಿ ಪಂಜಾಬ್ ಕಿಂಗ್ಸ್ ನಿಸ್ಸಂಶಯವಾಗಿ ಅಯ್ಯರ್ ಅವರನ್ನು ತಮ್ಮ ತಂಡಕ್ಕೆ ಕರೆತರಲು ಬಯಸುತ್ತದೆ. ಪಂಜಾಬ್ ಕಿಂಗ್ಸ್ ತಂಡ ಐಪಿಎಲ್ ಗೆದ್ದಿಲ್ಲವಾದ್ದರಿಂದ ಪ್ರೀತಿ ಜಿಂಟಾ ತಂಡಕ್ಕೆ ಉತ್ತಮ ನಾಯಕನ ಅಗತ್ಯವಿದೆ. ಕಳೆದ ಸೀಸನ್‌ನಲ್ಲಿ ಶಿಖರ್ ಧವನ್ ಅವರು ತಂಡದ ನಾಯಕರಾಗಿದ್ದರು. ಆದರೆ ಇಂಜುರಿಯಿಂದಾಗಿ ಅವರು ಸೀಸನ್‌ನ ಮಧ್ಯದಲ್ಲೇ ತಂಡವನ್ನು ತೊರೆಯಬೇಕಾಯಿತು. ಹೀಗಾಗಿ ಧವನ್ ಸ್ಥಾನದಲ್ಲಿ ಜಿತೇಶ್ ಶರ್ಮಾ ಅವರು ಈ ಜವಾಬ್ದಾರಿಯನ್ನು ವಹಿಸಿಕೊಂಡರು. ಆದರೆ ಈ ಬಾರಿ ಪಂಜಾಬ್ ಕಿಂಗ್ಸ್‌ಗೆ ಪೂರ್ಣ ಪ್ರಮಾಣದ ನಾಯಕನ ಅಗತ್ಯವಿರುವ ಕಾರಣ ಅಯ್ಯರ್ ಮೇಲೆ ಕಣ್ಣಿಟ್ಟಿದೆ.

**ಕೆಕೆಆರ್ ತಂಡದಿಂದ ಗೇಟ್‌ಪಾಸ್**

# ಕಿವೀಸ್ ಕಿವಿ ಹಿಂಡಿ ದಾಖಲೆಯ ಏಕದಿನ ಶತಕ ಸಿಡಿಸಿದ ಸ್ಮೃತಿ ಮಂಧಾನ

ಅಹಮದಾಬಾದ್‌ನ ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ನಡೆಯುತ್ತಿರುವ ನ್ಯೂಜಿಲೆಂಡ್ ಹಾಗೂ ಭಾರತ ಮಹಿಳಾ ತಂಡಗಳ ನಡುವಿನ ಮೂರನೇ ಹಾಗೂ ಅಂತಿಮ ಏಕದಿನ ಪಂದ್ಯದಲ್ಲಿ ಟೀಂ ಇಂಡಿಯಾದ ಆರಂಭಿಕ ಆಟಗಾರ್ತಿ ಸ್ಮೃತಿ ಮಂಧಾನ ತಮ್ಮ ಏಕದಿನ ವೃತ್ತಿಜೀವನದ 8ನೇ ಶತಕ ಸಿಡಿಸಿ ಮಿಂಚಿದ್ದಾರೆ. ಈ ಶತಕದ ಮೂಲಕ ಸ್ಮೃತಿ, ತಂಡದ ಮಾಜಿ ನಾಯಕಿ ಮಿಥಾಲಿ ರಾಜ್ ಅವರನ್ನು ಅಧಿಕ ಶತಕ ಸಿಡಿಸಿದ ಭಾರತೀಯರ ಪಟ್ಟಿಯಲ್ಲಿ ಹಿಂದಿಕ್ಕಿದ್ದರು. ಹಾಗೆಯೇ ಟೀಂ ಇಂಡಿಯಾ ಪರ ಅತಿ ಹೆಚ್ಚು ಏಕದಿನ ಶತಕ ಬಾರಿಸಿದ ಮಹಿಳಾ ಆಟಗಾರ್ತಿ ಎನಿಸಿಕೊಂಡಿದ್ದಾರೆ. ಕಳೆದ ಕೆಲವು ದಿನಗಳಿಂದ ಕಳಪೆ ಫಾರ್ಮ್‌ನಿಂದ ಬಳಲುತ್ತಿದ್ದ ಸ್ಮೃತಿ ತಡವಾದರೂ ಮತ್ತೆ ತಮ್ಮ ಹಳೆಯ ಲಯಕ್ಕೆ ಮರಳಿದ್ದಾರೆ. ಏಕದಿನ ವಿಶ್ವಕಪ್ ದೃಷ್ಟಿಯಿಂದ ಸ್ಮೃತಿ ಮಂದಾನ ಫಾರ್ಮ್‌ಗೆ ಬಂದಿರುವ ಟೀಂ ಇಂಡಿಯಾಕ್ಕೆ ಶುಭ ಸುದ್ದಿಯಾಗಿದೆ. ಶತಕದ ಜೊತೆಯಾಟ ತಮ್ಮ ಶತಕದ ಇನ್ನಿಂಗ್ಸ್ ಜೊತೆಗೆ ಮಂಧಾನ, ನಾಯಕಿ ಹರ್ಮನ್‌ಪ್ರೀತ್ ಕೌರ್ ಜೊತೆ ಅತ್ಯುತ್ತಮ ಜೊತೆಯಾಟವನ್ನು ಕೂಡ ಮಾಡಿದರು. ಮಂಧಾನ ಮತ್ತು ಹರ್ಮನ್‌ಪ್ರೀತ್ ಕೌರ್ ನಡುವೆ 116 ಎಸೆತಗಳಲ್ಲಿ 118 ರನ್‌ಗಳ ಜೊತೆಯಾಟವಿತ್ತು. ಈ ಜೊತೆಯಾಟದ ಆಧಾರದಲ್ಲಿ ಟೀಂ ಇಂಡಿಯಾ ಈ ಪಂದ್ಯವನ್ನು ಸುಲಭವಾಗಿ ಗೆದ್ದುಕೊಂಡಿತು. ಪಂದ್ಯ ಹೀಗಿತ್ತು ಇನ್ನು ಪಂದ್ಯದ ಬಗ್ಗೆ ಹೇಳುವುದಾದರೆ.. ಮೊದಲು ಬ್ಯಾಟಿಂಗ್ ಮಾಡಿದ ನ್ಯೂಜಿಲೆಂಡ್ ತಂಡ ಪೂರ್ಣ 50 ಓವರ್‌ಗಳನ್ನು ಆಡದೆ 49.3 ಓವರ್‌ಗಳಲ್ಲಿ ಆಲೌಟ್ ಆಗುವ ಮೂಲಕ 233 ರನ್ ಕಲೆಹಾಕಿತು. ತಂಡದ ಪರ ಬ್ರೂಕ್ ಹ್ಯಾಲಿಡೇ 86 ರನ್‌ಗಳ ಅತ್ಯಧಿಕ ಇನ್ನಿಂಗ್ಸ್ ಆಡಿದರೆ, ಜಾರ್ಜಿಯಾ ಪ್ಲಿಮ್ಮರ್ ಕೂಡ 39 ರನ್‌ಗಳ ಕಾಣಿಕೆ ನೀಡಿದರು. ಟೀಂ ಇಂಡಿಯಾ ಪರ ಬೌಲಿಂಗ್‌ನಲ್ಲಿ ಮಿಂಚಿದ ದೀಪ್ತಿ ಗರಿಷ್ಠ 3 ವಿಕೆಟ್ ಪಡೆದರೆ, ಪ್ರಿಯಾ ಮಿಶ್ರ 2 ವಿಕೆಟ್ ಪಡೆದರು. ಈ ಗುರಿಯನ್ನು ಬೆನ್ನಟ್ಟಿದ ಟೀಂ ಇಂಡಿಯಾಕ್ಕೆ ಉತ್ತಮ ಆರಂಭ ಸಿಗಲಿಲ್ಲ. ಶೆಫಾಲಿ ವರ್ಮಾ ಬೇಗನೇ ಔಟಾದರು. ಇದಾದ ಬಳಿಕ ಮಂಧಾನ, ಯಾಸ್ತಿಕಾ ಭಾಟಿಯಾ ಅವರೊಂದಿಗೆ 104 ಎಸೆತಗಳಲ್ಲಿ 76 ರನ್ ಸೇರಿಸಿದರು. ಭಾಟಿಯಾ ಔಟಾದ ನಂತರ ನಾಯಕಿ ಹರ್ಮನ್‌ಪ್ರೀತ್ ಕೌರ್ ಅದ್ಭುತ ಬ್ಯಾಟಿಂಗ್ ಪ್ರದರ್ಶಿಸಿ ಪಂದ್ಯವನ್ನು ಸಂಪೂರ್ಣವಾಗಿ ಭಾರತದ ಪರವಾಗಿ ತಿರುಗಿಸಿದರು. ಹರ್ಮನ್‌ಪ್ರೀತ್ ಕೇವಲ 54 ಎಸೆತಗಳಲ್ಲಿ 59 ರನ್ ಗಳಿಸಿ ಅಜೇಯರಾಗಿ ಪೆವಿಲಿಯನ್‌ಗೆ ಮರಳುವ ಮೂಲಕ ತಂಡಕ್ಕೆ ಜಯ ತಂದುಕೊಟ್ಟರು.

## ಮೊದಲ ಮಹಿಳಾ ಕ್ರಿಕೆಟರ್ ಮಂಧಾನ

**ನ್ಯೂಜಿಲೆಂಡ್ ವಿರುದ್ಧ ಶತಕ ಸಿಡಿಸುವ ಮೂಲಕ ಸ್ಮೃತಿ ಮಂಧಾನ ಮತ್ತೊಂದು ದೊಡ್ಡ ದಾಖಲೆ ಬರೆದಿದ್ದಾರೆ. ಅಂತರಾಷ್ಟ್ರೀಯ ಕ್ರಿಕೆಟ್‌ನಲ್ಲಿ 10 ಶತಕ ಸಿಡಿಸಿದ ಭಾರತದ ಮೊದಲ ಮಹಿಳಾ ಕ್ರಿಕೆಟರ್ ಎಂಬ ಹೆಗ್ಗಳಿಕೆಗೆ ಮಂಧಾನ ಪಾತ್ರರಾಗಿದ್ದಾರೆ. ಮಂಧಾನ ಅವರ ಈ ಶತಕದ ಇನ್ನೊಂದು ವಿಶೇಷತೆ ಏನೆಂದರೆ, ಮಂಧಾನ ಅವರ ಈ ಶತಕದ ಇನ್ನಿಂಗ್ಸ್ ಮೂರನೇ ಏಕದಿನ ಪಂದ್ಯದಲ್ಲಿ ಟೀಂ ಇಂಡಿಯಾವನ್ನು ಗೆಲುವಿನ ಸನಿಹಕ್ಕೆ ಕೊಂಡೊಯ್ದಿರುವುದಲ್ಲದೆ, ಸರಣಿಯನ್ನು 2-1 ರಿಂದ ಗೆಲ್ಲಲು ಸಹಾಯ ಮಾಡಿದೆ. 73 ಎಸೆತಗಳಲ್ಲಿ 4 ಬೌಂಡರಿ ಸಹಿತ ಅರ್ಧಶತಕ ಪೂರೈಸಿದ್ದ ಮಂಧಾನ, ಅರ್ಧಶತಕ ಪೂರೈಸಿದ ನಂತರ, 121 ಎಸೆತಗಳಲ್ಲಿ 6 ಬೌಂಡರಿ ಸಹಿತ ತಮ್ಮ ಶತಕವನ್ನು ಪೂರ್ಣಗೊಳಿಸಿದರು.**




# ರಣಜಿ ಟೂರ್ನಿಯಲ್ಲಿ ತೂಫಾನ್ ಶತಕ ಸಿಡಿಸಿ ದಾಖಲೆ ಬರೆದ ರಜತ್ ಪಾಟಿದಾರ್

ಮಧ್ಯ ಪ್ರದೇಶ ಮತ್ತು ಹರ್ಯಾಣ ನಡುವಣ ರಣಜಿ ಟೂರ್ನಿಯ ಪಂದ್ಯದಲ್ಲಿ ರಜತ್ ಪಾಟಿದಾರ್ ಸ್ಫೋಟಕ ಸೆಂಚುರಿ ಸಿಡಿಸಿದ್ದಾರೆ. ಈ ಮೂಲಕ ರಣಜಿ ಟೂರ್ನಿಯಲ್ಲಿ ಅತೀ ಕಡಿಮೆ ಎಸೆತಗಳಲ್ಲಿ ಶತಕ ಬಾರಿಸಿದ ಮೂರನೇ ಬ್ಯಾಟರ್ ಎನಿಸಿಕೊಂಡಿದ್ದಾರೆ.

ಇಂದೋರ್‌ನ ಹೋಲ್ಕರ್ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆಯುತ್ತಿರುವ ರಣಜಿ ಟ್ರೋಫಿ ಪಂದ್ಯದಲ್ಲಿ ರಜತ್ ಪಾಟಿದಾರ್ ತೂಫಾನ್ ಶತಕ ಸಿಡಿಸಿದ್ದಾರೆ.

ಅದು ಕೂಡ ಕೇವಲ 68 ಎಸೆತಗಳಲ್ಲಿ ಎಂಬುದು ವಿಶೇಷ. ಹರ್ಯಾಣ ವಿರುದ್ಧದ ಈ ಪಂದ್ಯದಲ್ಲಿ ಮಧ್ಯ ಪ್ರದೇಶ ಪರ ಮೂರನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಪಾಟಿದಾರ್ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿದ್ದಾರೆ. ಆರಂಭದಿಂದಲೇ ಬಿರುಸಿನ ಬ್ಯಾಟಿಂಗ್ ಪ್ರದರ್ಶಿಸಿದ ಪಾಟಿದಾರ್ ಹರ್ಯಾಣ ಬೌಲರ್‌ಗಳ ಬೆಂಡೆತ್ತಿದರು. ಪರಿಣಾಮ ಪಾಟಿದಾರ್ ಬ್ಯಾಟ್‌ನಿಂದ 3 ಭರ್ಜರಿ ಸಿಕ್ಸ್ ಹಾಗೂ 6 ಫೋರ್‌ಗಳು ಮೂಡಿಬಂದವು.

ಈ ಸಿಕ್ಸ್-ಫೋರ್‌ಗಳೊಂದಿಗೆ ರಜತ್ ಕೇವಲ 68 ಎಸೆತಗಳಲ್ಲಿ ಶತಕ ಪೂರೈಸಿದರು. ಈ ಮೂಲಕ ರಣಜಿ ಟೂರ್ನಿಯಲ್ಲಿ ಅತೀ ವೇಗದ ಶತಕ ಸಿಡಿಸಿದ ಮೂರನೇ ಬ್ಯಾಟರ್ ಎನಿಸಿಕೊಂಡರು. ಇನ್ನು ರಣಜಿ ಟೂರ್ನಿಯಲ್ಲಿ ಅತೀ ವೇಗದ ಶತಕ ಬಾರಿಸಿದ ದಾಖಲೆ ರಿಷಭ್ ಪಂತ್ ಹೆಸರಿನಲ್ಲಿದೆ.

2016 ರಲ್ಲಿ ದೆಹಲಿ ಪರ ಕಣಕ್ಕಿಳಿದಿದ್ದ ಪಂತ್ ಜಾರ್ಖಂಡ್ ವಿರುದ್ಧ ಕೇವಲ 48 ಎಸೆತಗಳಲ್ಲಿ ಶತಕ ಪೂರೈಸಿದ್ದರು. ಇದು ರಣಜಿ ಟೂರ್ನಿಯ ಇತಿಹಾಸದಲ್ಲೇ ದಾಖಲಾದ ಅತ್ಯಂತ ವೇಗದ ಶತಕವಾಗಿದೆ. 2023 ರಲ್ಲಿ ಛತ್ತೀಗಢ ವಿರುದ್ಧದ ಪಂದ್ಯದಲ್ಲಿ ಅಸ್ಸಾಂ ಪರ ಅಬ್ಬರಿಸಿದ್ದ ರಿಯಾನ್ ಪರಾಗ್ ಕೇವಲ 56 ಎಸೆತಗಳಲ್ಲಿ ಸೆಂಚುರಿ ಸಿಡಿಸಿದ್ದರು. ಇದು ರಣಜಿ ಟೂರ್ನಿಯ ಎರಡನೇ ವೇಗದ ಶತಕವಾಗಿದೆ.



# 3ನೇ ಟೆಸ್ಟ್‌ಗೂ ಮುನ್ನ ಟೀಂ ಇಂಡಿಯಾಕ್ಕೆ ಸ್ಟಾರ್ ಆಲ್‌ರೌಂಡರ್ ಆಗಮನ

ಭಾರತ ಮತ್ತು ನ್ಯೂಜಿಲೆಂಡ್ ನಡುವಿನ ಮೂರನೇ ಟೆಸ್ಟ್ ಪಂದ್ಯ ನವೆಂಬರ್ 1 ರಿಂದ ಮುಂಬೈನಲ್ಲಿ ಆರಂಭವಾಗಲಿದೆ. ಈ ಪಂದ್ಯಕ್ಕೂ ಮುನ್ನ ಟೀಂ ಇಂಡಿಯಾದಲ್ಲಿ ದೊಡ್ಡ ಬದಲಾವಣೆಯಾಗಿದೆ. ಅದರಂತೆ ಯುವ ವೇಗಿ ಹರ್ಷಿತ್ ರಾಣಾ ಅವರನ್ನು ಮೂರನೇ ಟೆಸ್ಟ್ ಪಂದ್ಯಕ್ಕಾಗಿ ತಂಡಕ್ಕೆ ಸೇರಿಸಿಕೊಳ್ಳಲಾಗಿದೆ. ಇದೀಗ ಅಚ್ಚರಿಯ ಆಯ್ಕೆಯಾಗಿ ತಂಡ ಸೇರಿಕೊಂಡಿರುವ ರಾಣಾ ಮುಂಬೈ ಟೆಸ್ಟ್‌ನಲ್ಲಿ ಅಂತರಾಷ್ಟ್ರೀಯ ಕ್ರಿಕೆಟ್‌ಗೆ ಪಾದಾರ್ಪಣೆ ಮಾಡಬಹುದು ಎಂದು ಹೇಳಲಾಗುತ್ತಿದೆ. ಏಕೆಂದರೆ ಮೂರನೇ ಟೆಸ್ಟ್ ಪಂದ್ಯದಲ್ಲಿ ಜಸ್ಪ್ರೀತ್ ಬುಮ್ರಾಗೆ ವಿಶ್ರಾಂತಿ ನೀಡಲಾಗುತ್ತಿದೆ ಎಂಬ ವರದಿಗಳಿವೆ. ಆದರೆ, ಈ ಬಗ್ಗೆ ಯಾವುದೇ ದೃಢೀಕರಣ ಸಿಕ್ಕಿಲ್ಲ. ಒಂದು ವೇಳೆ ಈ ವದಂತಿ ನಿಜವಾದರೆ ಅತ್ಯುತ್ತಮ ಫಾರ್ಮ್‌ನಲ್ಲಿರುವ ದೆಹಲಿಯ ವೇಗದ ಬೌಲರ್ ಹರ್ಷಿತ್ ರಾಣಾ ಚೊಚ್ಚಲ ಅಂತರಾಷ್ಟ್ರೀಯ ಪಂದ್ಯವನ್ನು ಆಡುವ ಅವಕಾಶ ಪಡೆಯಲ್ಲಿದ್ದಾರೆ. ಹರ್ಷಿತ್ ರಾಣಾ ವಿಶೇಷತೆ ಏನು ಹರ್ಷಿತ್ ರಾಣಾ ಅವರ ವಯಸ್ಸು ಕೇವಲ 22 ವರ್ಷ. ಇಷ್ಟು ಚಿಕ್ಕ ವಯಸ್ಸಿನಲ್ಲೇ ರಾಣಾ ಟೀಂ ಇಂಡಿಯಾವನ್ನು ಸೇರಿಕೊಂಡಿದ್ದಾರೆ. ಹರ್ಷಿತ್ ರಾಣಾ ವೇಗದ ಬೌಲಿಂಗ್ ಜೊತೆಗೆ ಬ್ಯಾಟಿಂಗ್ ಕೂಡ ಮಾಡಬಲ್ಲರು ಎಂಬುದು ಅವರ ವಿಶೇಷತೆ.




Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966